ಸಂಪುಟ: ೦೭/ ಸಂಚಿಕೆ: ೧೭೦/ ರವಿವಾರ ದಿನಾಂಕ : ೨೪-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 170/ SUNDAY Date : 24-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಮತದಾರರ ಪಟ್ಟಿ ಪರಿಷ್ಕರಣೆ ಮಾಡುವಂತೆ ಕರ್ನಾಟಕದ ಕೈ ನಾಯಕರಿಗೆ ಸುರ್ಜೇವಾಲ ಕಟ್ಟಪ್ಪಣೆ

ಬೆಂಗಳೂರು, ಮುಂದಿನ 6 ತಿಂಗಳಲ್ಲಿ ನಡೆಯಬಹುದಾದ ಬಿಬಿಎಂಪಿ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತ್ ಚುನಾವಣೆ ವೇಳೆಗೆ ಮತದಾರರ ಪಟ್ಟಿಯಲ್ಲಿನ ಲೋಪಗಳನ್ನು ಸರಿಪಡಿಸುವಂತೆ ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ರಾಜ್ಯದ ಪ್ರಮುಖ ನಾಯಕರಿಗೆ ಕಟ್ಟಪ್ಪಣೆ ಮಾಡಿದ್ದಾರೆ.

ನಿನ್ನೆ ರಾತ್ರಿ ರಾಜ್ಯದ ಪ್ರಮುಖ ನಾಯಕರೊಂದಿಗೆ ಮಹತ್ವದ ಸಭೆ ನಡೆಸಿರುವ ರಣದೀಪ್‌ಸಿಂಗ್ ಸುರ್ಜೇವಾಲ, ಈ ಹಿಂದೆ ಲೋಕಸಭೆ ಹಾಗೂ ವಿಧಾನಸಭೆ ಚುನಾವಣೆಯಲ್ಲಾದ ಮತ ಪಟ್ಟಿಯಲ್ಲಿನ ಅಕ್ರಮಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದ್ದಾರೆ.ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವುದು ರಾಜ್ಯ ಚುನಾವಣಾ ಆಯೋಗದ ಜವಾಬ್ದಾರಿಯಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಸಂಪೂರ್ಣವಾಗಿ ರಾಜ್ಯ ವ್ಯಾಪ್ತಿಯ ಅಧಿಕಾರಿಗಳ ಹೊಣೆಯಾಗಿದೆ.

ಹೀಗಾಗಿ ಈ ಹಿಂದೆ ನಡೆದಿರುವ ಲೋಪಗಳನ್ನು ಸರಿಪಡಿಸುವ ಜೊತೆಗೆ ಕರಾರುವಾಕ್ಕಾದ ಮತದಾರರ ಪಟ್ಟಿ ಸಜ್ಜುಗೊಳ್ಳಬೇಕು. ಇದಕ್ಕೆ ಸಚಿವ ಸಂಪುಟದ ಸದಸ್ಯರು ಕಾಲಕಾಲಕ್ಕೆ ನಿಗಾವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

ಪಕ್ಷದ ಬೂತ್‌ಮಟ್ಟದ ಕಾರ್ಯಕರ್ತರು ಮತದಾರರ ಪಟ್ಟಿಯಲ್ಲಿನ ಪರಿಷ್ಕರಣೆ ಬಗ್ಗೆ ಸದಾಕಾಲ ಎಚ್ಚರಿಕೆ ವಹಿಸಬೇಕು. ಈ ಹಿಂದೆ ಅಲ್ಪಸಂಖ್ಯಾತರ ಮತಗಳನ್ನು ಹಾಗೂ ಪರಿಶಿಷ್ಟರ ಮತಗಳನ್ನು ತೆಗೆದು ಹಾಕಿರುವುದು, ಅನ್ಯ ರಾಜ್ಯಗಳ ಮತದಾರರನ್ನು ಭಾರೀ ಪ್ರಮಾಣದಲ್ಲಿ ಸೇರ್ಪಡೆ ಮಾಡಿರುವುದು, ನಕಲಿ ಮತದಾರರ ಸಂಖ್ಯೆ ಹೆಚ್ಚಿರುವುದು ವ್ಯಾಪಕವಾಗಿತ್ತು.

ಜೊತೆಗೆ ಒಬ್ಬ ವ್ಯಕ್ತಿ ಎರಡಕ್ಕಿಂತಲೂ ಹೆಚ್ಚಿನ ಸ್ಥಳಗಳಲ್ಲಿ ಮತದಾರರ ಪಟ್ಟಿಯಲ್ಲಿ ತಮ ಹೆಸರು ನಮೂದಿಸಿಕೊಂಡಿರುವುದು ವ್ಯಾಪಕವಾಗಿ ಕಂಡು ಬಂದಿದೆ. ಈ ರೀತಿಯ ಪ್ರಕರಣಗಳನ್ನು ಸರಿಪಡಿಸಬೇಕು ಎಂದು ಸುರ್ಜೇವಾಲ ಚರ್ಚೆ ನಡೆಸಿರುವುದಾಗಿ ತಿಳಿದು ಬಂದಿದೆ. ಜೊತೆಗೆ ಭವಿಷ್ಯದ ನಾಯಕರನ್ನು ಸೃಷ್ಟಿಸುವ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ಹೆಚ್ಚಿನ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲುವಂತೆ ನೋಡಿಕೊಳ್ಳಬೇಕು. ಪಕ್ಷ ಸಂಘಟನೆ, ಚುನಾವಣಾ ತಯಾರಿ ಎಲ್ಲದರಲ್ಲೂ ಎಚ್ಚರಿಕೆಯ ಹೆಜ್ಜೆ ಇಡಬೇಕು.

ಅಭ್ಯರ್ಥಿಗಳ ಆಯ್ಕೆಯಲ್ಲಿ ಪಕ್ಷನಿಷ್ಠರಿಗೆ ಆದ್ಯತೆ ನೀಡಬೇಕು. ವಲಸಿಗ ಅಭ್ಯರ್ಥಿ ಸಂಖ್ಯೆ ಶೇ. 10ಕ್ಕಿಂತ ಹೆಚ್ಚಿರಬಾರದು, ಅನಿವಾರ್ಯ ಸಂದರ್ಭದಲ್ಲಿ ಅನ್ಯ ಪಕ್ಷಗಳಿಂದ ಬಂದವರಿಗೆ ಟಿಕೆಟ್ ನೀಡಬೇಕಾದರೆ, ಸ್ಥಳೀಯ ನಾಯಕರ ಜೊತೆ ಸಮಾಲೋಚನೆ ನಡೆಸಿ, ಒಪ್ಪಿಗೆ ಪಡೆದುಕೊಳ್ಳುವುದು ಕಡ್ಡಾಯ ಎಂದು ರಣದೀಪ್‌ಸಿಂಗ್ ಸುರ್ಜೇವಾಲ ತಾಕೀತು ಮಾಡಿದ್ದಾರೆ.

ಸಂಪನೂಲ ಹೊಂದಾಣಿಕೆ ಹಾಗೂ ಕ್ಷೇತ್ರವಾರು ಚುನಾವಣಾ ಉಸ್ತುವಾರಿಗೆ ನಿಯೋಜನೆಗೊಳ್ಳುವ ಸಚಿವರ ಮತ್ತು ಶಾಸಕರ ಪಟ್ಟಿಯನ್ನು ಸಿದ್ಧಪಡಿಸಿ ಈ ತಿಂಗಳ ಅಂತ್ಯದಲ್ಲಿ ಎಐಸಿಸಿಗೆ ಸಲ್ಲಿಸುವಂತೆ ಸುರ್ಜೇವಾಲ ಸೂಚನೆ ನೀಡಿದ್ದಾರೆ.ಹಲವು ದಿನಗಳಿಂದ ನನೆಗುದಿಗೆ ಬಿದ್ದಿರುವ ಬಿಬಿಎಂಪಿ ಜಿಲ್ಲಾಪಂಚಾಯಿತಿ, ತಾಲ್ಲೂಕು ಪಂಚಾಯಿತಿಗಳಿಗೆ ಚುನಾವಣೆ ನಡೆಸಲು ರಾಜ್ಯಸರ್ಕಾರ ತಯಾರಿ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಸುರ್ಜೇವಾಲ ಸಭೆ ಮಹತ್ವ ಪಡೆದುಕೊಂಡಿದೆ.

## ಧರ್ಮದ ವಿಚಾರದಲ್ಲಿ ರಾಜಕಾರಣ ಬೇಡ
## ಸರ್ಕಾರ ನಿಷ್ಪಕ್ಷವಾದ ತನಿಖೆ ನಡೆಸಲಿದೆ : ಡಿಕೆಶಿ



ಬೆಂಗಳೂರು, ಆ.23– ಧರ್ಮದ ವಿಚಾರದಲ್ಲಿ ಯಾರೂ ರಾಜಕಾರಣ ಮಾಡಬಾರದು. ಸರ್ಕಾರ ನಿಷ್ಪಕ್ಷವಾದ ತನಿಖೆ ನಡೆಸಲಿದೆ. ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಧರ್ಮಸ್ಥಳದ ವಿಚಾರದಲ್ಲಿ ಆರಂಭದಲ್ಲಿ ಬಿಜೆಪಿಯವರು ಏನನ್ನೂ ಮಾತನಾಡಿರಲಿಲ್ಲ. ಅಡ್ಡಗೋಡೆಯ ಮೇಲೆ ದೀಪ ಇಟ್ಟಂತೆ ಮಾತನಾಡುವ ಕೆಲಸ ಮಾಡಿದರು. ನಾನು ಷಡ್ಯಂತ್ರ ನಡೆದಿದೆ ಎಂದು ಹೇಳಿದ ಮೇಲೆ ಈಗ ಚರ್ಚೆ ಮಾಡುತ್ತಿದ್ದಾರೆ ಎಂದರು.

ನನಗೆ ಮೊದಲಿನಿಂದಲೂ ನಂಬಿಕೆಯಿತ್ತು. ಆದರೂ ತನಿಖೆಗೆ ಯಾವತ್ತೂ ಅಡ್ಡಿ ಪಡಿಸಲಿಲ್ಲ. ಧರ್ಮಸ್ಥಳದ ಕುಟುಂಬದವರೇ ಖುದ್ದು ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಎಸ್‌ಐಟಿ ತನಿಖೆಯವರನ್ನು ಸ್ವಾಗತಿಸಿದರು.ವಿಚಾರಣೆ ನಡೆಯುತ್ತಿದ್ದು, ಯಾರೆಲ್ಲ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳುತ್ತೇವೆ ಎಂದು ನಮ ಸರ್ಕಾರ ಮೊದಲಿನಿಂದಲೂ ಹೇಳುತ್ತಾ ಬಂದಿದೆ.

ಗೃಹಸಚಿವರು ಈ ಬಗ್ಗೆ ಹೇಳಿಕೆ ನೀಡಿದ್ದಾರೆ. ಮುಖ್ಯಮಂತ್ರಿ ಅವರು ವಿಧಾನಸಭೆ ಮತ್ತು ಕಾಂಗ್ರೆಸ್ ಶಾಸಕಾಂಗ ಸಭೆಗಳಲ್ಲಿ ಸ್ಪಷ್ಟವಾಗಿ ತಿಳಿಸಿದ್ದಾರೆ. ನಾವು ಅವರು ಅಥವಾ ಇವರು ಎಂಬ ಯಾರ ಪರವೂ ಇಲ್ಲ. ನ್ಯಾಯದ ಪರವಾಗಿ ಇದ್ದೇವೆ. ಧರ್ಮದಲ್ಲಿ ಯಾರೂ ರಾಜಕಾರಣ ಮಾಡಬಾರದು ಎಂದು ಹೇಳಿದರು.

ಅನನ್ಯಭಟ್ ವಿಚಾರವಾಗಿ ಗೊಂದಲದ ಹೇಳಿಕೆ ನೀಡುತ್ತಿರುವ ವ್ಯಕ್ತಿಗಳ ಕುರಿತು ಗೃಹ ಸಚಿವರು ಗಮನ ಹರಿಸುತ್ತಾರೆ ಎಂದು ತಿಳಿಸಿದರು.ಬಿಹಾರದಲ್ಲಿ ಲೋಕಸಭೆಯ ವಿರೋಧ ಪಕ್ಷದ ರಾಹುಲ್‌ಗಾಂಧಿ ನಡೆಸುವ ರಾಜಕೀಯ ಜಾಥಾದಲ್ಲಿ ಭಾಗವಹಿಸಲು ರಾಜ್ಯದಿಂದ ಕಾಂಗ್ರೆಸ್ಸಿನ ಶಾಸಕರ ತಂಡ ತೆರಳುತ್ತಿದೆ. ಬಹಳಷ್ಟು ಶಾಸಕರು ಬಿಹಾರದ ಯಾತ್ರೆಯಲ್ಲಿ ಭಾಗವಹಿಸುವ ಆಸಕ್ತಿಯನ್ನು ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಮೊದಲ ಹಂತದ ತಂಡದಲ್ಲಿ ಒಂದಷ್ಟು ಶಾಸಕರು ತೆರಳುತ್ತಿದ್ದಾರೆ. ವಿಮಾನದಲ್ಲಿ ಸ್ಥಳಾವಕಾಶ ಇರುವಷ್ಟು ಶಾಸಕರು ಪ್ರಯಾಣಿಸುತ್ತಿದ್ದು, ಎರಡನೇ ತಂಡದಲ್ಲಿ ಮತ್ತಷ್ಟು ಮಂದಿ ಭೇಟಿ ನೀಡಲಿದ್ದಾರೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲರೂ ಸಮಯವಾಕಾಶ ನೋಡಿಕೊಂಡು ಒಂದೊಂದು ದಿನ ಬಿಹಾರದ ವಿಧಾನಸಭೆ ಚುನಾವಣೆ ಪ್ರಚಾರದಲ್ಲಿ ತೊಡಗಿಸಿಕೊಳ್ಳುತ್ತಾರೆ. ನಾನೂ ಕೂಡ ಭೇಟಿ ನೀಡುತ್ತಿದ್ದೇನೆ ಎಂದರು.

ಚುನಾವಣೆಗಳ ಪೂರ್ವ ತಯಾರಿ ಬಗ್ಗೆ ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ಸಭೆ ನಡೆಸಿದ್ದಾರೆ. ನ್ಯಾಯಾಲಯ ಆದೇಶ ನೀಡಿದ ಮೇಲೆ ಚುನಾವಣೆ ನಡೆಸಬೇಕು. ಚುನಾವಣಾ ಜವಾಬ್ದಾರಿಗಳ ಬಗ್ಗೆ ಸುರ್ಜೇವಾಲ ಸಭೆ ನಡೆಸಿ, ನಾಯಕರಿಗೆ ಜವಾಬ್ದಾರಿ ಹಂಚಿದ್ದಾರೆ ಎಂದು ತಿಳಿಸಿದರು.

### 9 ದಿನಗಳ ಚರ್ಚೆ : ಪೂರಕ ಅಂದಾಜು- ಮಹಾ ಲೆಕ್ಕಪರಿಶೋಧಕರ ವರದಿ ಮಂಡನೆ- ಶಾಂತಿ-ಯುದ್ಧ ನಿರ್ಣಯಕ್ಕೆ ಸರ್ವಾನುಮತ ಬೆಂಬಲ
## 71 ಗಂಟೆ ಕಾರ್ಯ– 37 ವಿಧೇಯಕ ಅಂಗೀಕಾರ – ವಿಧಾನಸಭೆ ದಾಖಲೆಯ ಅಧಿವೇಶನ

ಬೆಂಗಳೂರು: ವಿಧಾನಸೌಧದಲ್ಲಿ ಆಗಸ್ಟ್ 11ರಿಂದ 22ರವರೆಗೆ ನಡೆದ 9 ದಿನಗಳ ಅಧಿವೇಶನದಲ್ಲಿ 71 ಗಂಟೆ 2 ನಿಮಿಷಗಳ ಕಾರ್ಯಕಲಾಪ ನಡೆದು, ಒಟ್ಟು 37 ವಿಧೇಯಕಗಳನ್ನು ಅಂಗೀಕರಿಸುವ ಮೂಲಕ ದಾಖಲೆ ನಿರ್ಮಿಸಲಾಗಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ.

ಅಧಿವೇಶನದ ಸಂಕ್ಷಿಪ್ತ ವರದಿ ಬಿಡುಗಡೆ ಮಾಡಿದ ಅವರು, ಇತ್ತೀಚೆಗೆ ನಿಧನರಾದ ಗಣ್ಯರಿಗೆ, ಆಕ್ಸಿಬಿ ಸಂಭ್ರಮಾಚರಣೆ ವೇಳೆ ಸಾವಿಗೀಡಾದವರಿಗೆ, ಪಹಲ್ಗಾಮ್ ಉಗ್ರ ದಾಳಿ ಹಾಗೂ ಏರ್ ಇಂಡಿಯಾ ವಿಮಾನ ದುರಂತದ ಬಲಿಗಳಿಗೆ ಸದನ ಸಂತಾಪ ಸೂಚನೆ ಸಲ್ಲಿಸಿ ನಿರ್ಣಯ ಅಂಗೀಕರಿಸಿದುದಾಗಿ ಹೇಳಿದರು.

**ಗಮನಾರ್ಹ ತೀರ್ಮಾನಗಳು**

**ಮೇ 25ರಿಂದ ಸಡಿಲಾಗಿದ್ದ 18 ಬಿಜೆಪಿ ಸದಸ್ಯರ ಅಮಾನತು ನಿರ್ಣಯವನ್ನು ಹಿಂಪಡೆದ ವಿಷಯವನ್ನು ಸದನ ಸ್ಥಿರಗೊಳಿಸಿದೆ.**

**2025–26ರ ಮೊದಲ ಪೂರಕ ಅಂದಾಜು ಅಂಗೀಕರಿಸಲಾಯಿತು.**

**ಭಾರತದ ಮಹಾ ಲೆಕ್ಕಪರಿಶೋಧಕರ 6 ವರದಿಗಳು ಹಾಗೂ ವಿವಿಧ 39 ವಿಧೇಯಕಗಳಲ್ಲಿ 37ಕ್ಕೆ ಸದನದ ಅಂಗೀಕಾರ ದೊರೆಯಿತು.**

**ಕರ್ನಾಟಕ ಜನಸಂದಣಿ ನಿಯಂತ್ರಣ ವಿಧೇಯಕ ಮತ್ತು ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ ಪರಿಶೀಲನಾ ಸಮಿತಿಗೆ ಒಪ್ಪಿಸಲಾಯಿತು.**

**ವಿಧಾನಪರಿಷತ್ತಿಂದ ತಿರಸ್ಕೃತವಾಗಿದ್ದ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಪುನರ್ ಪರ್ಯಾಲೋಚಿಸಿ ಅಂಗೀಕರಿಸಲಾಯಿತು.**

**2024ರ ಸಹಕಾರ ಸಂಘಗಳು, ಸೌಹಾರ್ದ ಸಹಕಾರಿ ಮತ್ತು ನೋಂದಣಿ ತಿದ್ದುಪಡಿ ವಿಧೇಯಕಗಳನ್ನು ಹಿಂಪಡೆಯಲಾಯಿತು.**

**ಸದನದಲ್ಲಿ ಉತ್ಕರ್ಷದ ಚರ್ಚೆಗಳು**

**ಸರಕಾರಿ ಶಾಲೆಗಳ ಸ್ಥಿತಿಗತಿ ಕುರಿತ ಚರ್ಚೆ ಪ್ರಾರಂಭವಾಗಿ ಮುಂದಿನ ಅಧಿವೇಶನದಲ್ಲಿ ಮುಂದುವರಿಯಲಿದೆ.**

**7 ಸ್ಥಾಯಿ ಸಮಿತಿಗಳ ವರದಿಗಳು, 35 ಅರ್ಜಿಗಳು, 142 ವಾರ್ಷಿಕ ವರದಿಗಳು, 169 ಲೆಕ್ಕಪರಿಶೋಧನ ವರದಿಗಳು ಸೇರಿ ನೂರಾರು ದಾಖಲೆಗಳನ್ನು ಸದನದಲ್ಲಿ ಮಂಡಿಸಲಾಯಿತು.**

**ಒಟ್ಟು 2306 ಪ್ರಶ್ನೆಗಳಲ್ಲಿ 2199 ಪ್ರಶ್ನೆಗಳು ಅಂಗೀಕರಿಸಲ್ಪಟ್ಟಿದ್ದರೆ, 135 ನೇರ ಪ್ರಶ್ನೆಗಳ ಪೈಕಿ 128ಕ್ಕೂ ಉತ್ತರ ನೀಡಲಾಗಿದೆ.**

**ಲಿಖಿತ ಉತ್ತರ ಕೇಳಿದ 2064 ಪ್ರಶ್ನೆಗಳಲ್ಲಿ 1662ಕ್ಕೂ ಉತ್ತರ ಲಭಿಸಿದೆ.**

**ಸೂಚನೆಗಳು ಮತ್ತು ನಿರ್ಣಯಗಳು**

**ನಿಯಮ 351ರಡಿ ಬಂದ 220 ಸೂಚನೆಗಳಲ್ಲಿ 180 ಸೂಚನೆಗಳನ್ನು ಪಟ್ಟಿಗೆ ಸೇರಿಸಲಾಯಿತು.**

**383 ಗಮನ ಸೆಳೆಯುವ ಸೂಚನೆಗಳಲ್ಲಿ 178ಕ್ಕೆ ಉತ್ತರ ದೊರೆತಿದ್ದು, 166ನ್ನು ಸದನ ಚರ್ಚಿಸಿತು.**

**ಶೂನ್ಯವೇಳೆಯಲ್ಲಿ 13 ಸೂಚನೆಗಳು ಚರ್ಚಿತವಾಗಿದ್ದರೆ, ಒಂದು ಹಕ್ಕುಚ್ಯುತಿ ಸೂಚನೆ ಹಕ್ಕುಬಾಧ್ಯತೆಗಳ ಸಮಿತಿಗೆ ವಹಿಸಲಾಯಿತು.**

**ಶಾಂತಿ?ಯುದ್ಧ ನಿಲುಗಡೆ ಘೋಷಣೆ ಹಾಗೂ ಮಾನವ ಅಂಗಾಂಗ ಕಸಿ (ತಿದ್ದುಪಡಿ) ಕೇಂದ್ರ ಅಧಿನಿಯಮ, 2011 ಅನುಷ್ಠಾನಕ್ಕೆ ಸಂಬಂಧಿಸಿದ ನಿರ್ಣಯಗಳನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.**

## ಮುಸುಕುಧಾರಿಯ ಮುಖವಾಡ ಬಯಲು : ಕಥೆ ಕಟ್ಟಿ ಧರ್ಮಸ್ಥಳದ ಸುತ್ತ ಶವಗಳಿಗಾಗಿ ಗುಂಡಿ ತೋಡಿಸಿದ್ದ ಮಾಸ್ಕ್ ಮ್ಯಾನ್ ಅರೆಸ್ಟ್

**ಬೆಳ್ತಂಗಡಿ,** – ಧರ್ಮಸ್ಥಳ ಸುತ್ತಮುತ್ತ ನೂರಾರು ಶವಗಳನ್ನು ಹೂಳಲಾಗಿದೆ ಎಂದು ರಾಜ್ಯದ ಜನರನ್ನೇ ದಿಕ್ಕುತಪ್ಪಿಸಿದ ಪ್ರಕರಣದಲ್ಲಿ ಸುಳ್ಳುಗಳ ಸರಮಾಲೆ ಹೆಣೆದು ಕಥೆ ಕಟ್ಟಿದ್ದ ದೂರುದಾರ ಮುಸುಕುಧಾರಿಯನ್ನು ಎಸ್‌ಐಟಿ ಇಂದು ಬಂಧಿಸಿದೆ.

ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಮುಖ್ಯಸ್ಥ ಪ್ರಣವ್ ಮೊಹಂತಿ ಉಪಸ್ಥಿತಿಯಲ್ಲಿಯೇ ಬಂಧನ ಮಾಡಲಾಗಿದೆ. ದೂರುದಾರನ ಹೇಳಿಕೆಗಳಲ್ಲಿ ವ್ಯತ್ಯಾಸಗಳು ಕಂಡುಬಂದಿದ್ದು, ಆತ ಉದ್ದೇಶಪೂರ್ವಕವಾಗಿ ಪೊಲೀಸರನ್ನು ದಿಕ್ಕುತಪ್ಪಿಸಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಬಂಧನದ ಬಳಿಕ ಎಸ್‌ಐಟಿ ಮುಸುಕುಧಾರಿಯ ಹೆಸರನ್ನು ಬಹಿರಂಗ ಪಡಿಸಿದ್ದು, ಆತನ ಹೆಸರು ಚಿನ್ನಯ್ಯ ಎಂದು ತಿಳಿಸಿದೆ.

ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ದೂರು ದಾಖಲಾದ ಬಳಿಕ ಸರ್ಕಾರ ಹೆಚ್ಚಿನ ತನಿಖೆಗಾಗಿ ಎಸ್‌ಐಟಿ ರಚಿಸಿತ್ತು. ನಂತರ ಎಸ್‌ಐಟಿ ಅಧಿಕಾರಿಗಳು ಅನಾಮಿಕ ತೋರಿಸಿದ 17 ಪಾಯಿಂಟ್‌ಗಳಲ್ಲಿ ಉತ್ಖನನ ನಡೆಸಿದ ಸಂದರ್ಭದಲ್ಲಿ ಯಾವುದೇ ಮಹತ್ತರವಾದ ಅವಶೇಷಗಳು ಪತ್ತೆಯಾಗದ ಹಿನ್ನೆಲೆಯಲ್ಲಿ ಎಸ್‌ಐಟಿ ತಂಡ ಉತ್ಖನನ ಕಾರ್ಯವನ್ನು ಸ್ಥಗಿತಗೊಳಿಸಿ ಮಾಸ್ಕ್‌ಮ್ಯಾನ್‌ನನ್ನು ವಿಚಾರಣೆ ಪ್ರಾರಂಭಿಸಿತು.

ಪ್ರಕರಣದ ತನಿಖಾಧಿಕಾರಿ ಜಿತೇಂದ್ರ ದಯಾಮ ಮತ್ತು ಸುಮಾರು 25 ಪೊಲೀಸರ ತಂಡ ಎಸ್‌ಐಟಿ ಠಾಣೆಯಲ್ಲಿ ಮಾಸ್ಕ್‌ಮ್ಯಾನ್‌ನನ್ನು ತೀವ್ರ ವಿಚಾರಣೆ ನಡೆಸಿ ಹಲವು ಮಾಹಿತಿಗಳನ್ನು ಕಲೆ ಹಾಕಿತ್ತು. ಆ ಸಂದರ್ಭದಲ್ಲಿ ಹಲವು ಆಯಾಮಗಳಲ್ಲಿ ಆತನಿಗೆ ಪ್ರಶ್ನೆಗಳನ್ನು ಕೇಳಿದಾಗ ಅನುಮಾನಾಸ್ಪದ ರೀತಿ ಉತ್ತರ ನೀಡಿದ್ದಾನೆ.

ದೂರುದಾರನ ಸಂಬಂಧಿಕರು ಮತ್ತು ಸ್ನೇಹಿತರನ್ನು ಎಸ್‌ಐಟಿ ವಿಚಾರಣೆಗೊಳಪಡಿಸಿದಾಗ



ಆತನ ಪತ್ನಿ ಮತ್ತು ಸಹೋದರರು, ದೂರುದಾರನು ಹಣಕ್ಕಾಗಿ ಧರ್ಮಸ್ಥಳದ ಹೆಸರಿಗೆ ಕಳಂಕ ತರುವ ಪಿತೂರಿ ನಡೆಸಿದ್ದಾನೆ ಎಂದು ಆರೋಪಿಸಿದ್ದಾರೆ. ನಿನ್ನೆ ರಾತ್ರಿಯಿಂದ ಇಂದು ಬೆಳಗಿನ ಜಾವ 5 ಗಂಟೆಯವರೆಗೆ ಮಾಸ್ಕ್‌ಮ್ಯಾನ್‌ನನ್ನು ತೀವ್ರ ವಿಚಾರಣೆ ನಡೆಸಿ ಹಲವು ಮಹತ್ವದ ವಿವರಗಳನ್ನು ಪಡೆದುಕೊಂಡಿದ್ದಾರೆ.

ಈ ನಡುವೆ ಉತ್ಖನನದ ವೇಳೆ 6ನೇ ಪಾಯಿಂಟ್ ಹಾಗೂ ಮತ್ತೊಂದು ಕಡೆ ಸಿಕ್ಕಿದ ಅವಶೇಷಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಅದರ ವರದಿಗಾಗಿ ತನಿಖಾಧಿಕಾರಿಗಳು ಕಾಯುತ್ತಿದ್ದಾರೆ. ಈ ಮಧ್ಯೆ ಧರ್ಮಸ್ಥಳದಲ್ಲಿ ಮಾಸ್ಕ್‌ಮ್ಯಾನ್ ಜೊತೆ ಕೆಲಸ ಮಾಡಿದ್ದ ಮಂಡ್ಯದ ವ್ಯಕ್ತಿ ಸ್ಫೋಟಕ ಮಾಹಿತಿ ಬಿಚ್ಚಿಟ್ಟಿದ್ದರು.

ಪ್ರಶ್ನೆಗಳ ಸುರಿಮಳೆ: ದೂರು ನೀಡಿದ ವೇಳೆ ಮುಸುಕುದಾರಿ ತಲೆಬುರುಡೆಯೊಂದನ್ನು ನೀಡಿದ್ದನು. ಆ ತಲೆ ಬುರುಡೆ ಎಲ್ಲಿಂದ ತಂದಿದ್ದು, ಬುರುಡೆ ತೆಗೆದ ಸ್ಥಳದಲ್ಲಿ ನಿನ್ನ ಜೊತೆ ಇದ್ದವರು ಯಾರು, ಬುರುಡೆ ಎತ್ತಿದವರು ಯಾರು, ಸಮಾಧಿಯೊಳಗಿಂದ ನೀನು ಬುರುಡೆ ಅಗೆದು ತಂದಿರುವೆಯಾ, ಕಾಡಿನೊಳಗಿಂದ ಬುರುಡೆ ಎತ್ತಿದ ವೀಡಿಯೋದಲ್ಲಿ ಇರುವವರು ಯಾರು, ಕಾಡಿನ ಒಳಗೆ ಬುರುಡೆ ಸಿಕ್ಕಿದ್ದರೆ ಅದು ಅಸಹಜ ಸಾವಿನ ಪ್ರಕರಣವೋ ಅಥವಾ ಸಮಾಧಿಯಿಂದ ಬುರುಡೆ ಅಗೆದು ತಂದಿರುವಿರಾ, ನಿನ್ನ ಜೊತೆ ಕೈ ಜೋಡಿಸಿದವರು ಯಾರು ಎಂಬಿತ್ಯಾದಿ ಪ್ರಶ್ನೆಗಳನ್ನು ತನಿಖಾಧಿಕಾರಿ ಜಿತೇಂದ್ರ ದಯಾಮಾ ಅವರು ಕೇಳಿದ್ದಾರೆ.

ಈ ಎಲ್ಲಾ ಪ್ರಶ್ನೆಗಳಿಗೆ ಎಸ್‌ಐಟಿ ಅಧಿಕಾರಿಗಳ ನಿರೀಕ್ಷೆಯಂತೆ ಯಾವುದೇ ಉತ್ತರಗಳು ಅನಾಮಿಕನಿಂದ ಬಂದಿಲ್ಲ. ಹಾಗಾಗಿ ಆತನ ಮುಂದೆ ವೀಡಿಯೋ ಬಿತ್ತರಿಸಿ ತನಿಖೆ ಪ್ರಕ್ರಿಯೆಯನ್ನು ಎಸ್‌ಐಟಿ ಮುಂದುವರಿಸಿತ್ತು. ಇಷ್ಟೆಲ್ಲಾ ಬೆಳವಣಿಗೆ ಬಳಿಕ ಮಾಸ್ಕ್‌ಮ್ಯಾನ್ ಹೆಣೆದಿದ್ದು, ಸುಳ್ಳಿನ ಸರಮಾಲೆ ಎಂಬುದು ಕಂಡುಬಂದಿದೆ.ಮುಸುಕುಧಾರಿ ಹೇಳಿದ್ದೆಲ್ಲ ಸುಳ್ಳು ಎಂದು ಎಸ್‌ಐಟಿಗೆ ತಿಳಿಯುತ್ತಿದ್ದಂತೆ ಆತನನ್ನು ಬಂಧಿಸಲಾಗಿದೆ.

ಇನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವ ಮುನ್ನ ಅನಾಮಧೇಯ ವ್ಯಕ್ತಿಗೆ ಎಸ್‌ಐಟಿ ಅಧಿಕಾರಿಗಳು ಬೆಳ್ತಂಗಡಿ ತಾಲೂಕು ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆಗೆ ಒಳಪಡಿಸಿ, ಬಳಿಕ ಬೆಳ್ತಂಗಡಿ ನ್ಯಾಯಾಲಯದ ಮುಂದೆ ಹಾಜರು ಪಡಿಸಿದ್ದಾರೆ.

## ರೇಣುಕಾಸ್ವಾಮಿ ಕೊಲೆ ಪ್ರಕರಣ: ದರ್ಶನ್ ಸೇರಿ ಏಳು ಮಂದಿ ಆರೋಪಿಗಳಿಗೆ ಸೆ.೯ರ ವರೆಗೆ ನ್ಯಾಯಾಂಗ ಬಂಧನ ವಿಸ್ತರಣೆ



**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನು ರದ್ದುಗೊಂಡು ನ್ಯಾಯಾಂಗ ಬಂಧನದಲ್ಲಿರುವ ನಟ ದರ್ಶನ್, ಪವಿತ್ರಾಗೌಡ ಸೇರಿದಂತೆ ಏಳು ಮಂದಿ ಆರೋಪಿಗಳು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯದ ವಿಚಾರಣೆಗೆ ಹಾಜರಾದರು.

ಏಳು ಮಂದಿ ಆರೋಪಿಗಳನ್ನು ರಾಜ್ಯದ ವಿವಿಧ ಜೈಲುಗಳಿಗೆ ಸ್ಥಳಾಂತರಿಸಬೇಕೆಂದು ಸರ್ಕಾರಿ ಪರ ವಕೀಲರು ಅರ್ಜಿ ಸಲ್ಲಿಸಿದ್ದರು. ಆರೋಪಿ ಪ್ರದೂಷ್ ಮಾತ್ರ ಇದಕ್ಕೆ ಆಕ್ಷೇಪಣಾ ಅರ್ಜಿ ಸಲ್ಲಿಸಿದರೆ ಇನ್ನುಳಿದ ಆರೋಪಿಗಳು ತಕರಾರು ಅರ್ಜಿ ಸಲ್ಲಿಸಲು ಸಮಯಾವಕಾಶಬೇಕೆಂದು ಮನವಿ ಮಾಡಿದರು.

ಈ ವೇಳೆ ಪವಿತ್ರಾಗೌಡ ಪರ ವಕೀಲ ಬಾಲನ್ ಅವರು ತಮ್ಮ ಕಕ್ಷಿದಾರರಿಗೆ ಜಾಮೀನು ನೀಡಬೇಕು. ಸಿಆರ್?ಪಿಸಿ ಅಡಿಯಲ್ಲಿ ಪೊಲೀಸರು ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ. ಕಾನೂನು ಪ್ರಕಾರ ಬಿಎನ್‌ಎಸ್‌ಎಸ್ ಅಡಿಯಲ್ಲಿ ದೋಷಾರೋಪ ಪಟ್ಟಿಯಲ್ಲಿ ಸಲ್ಲಿಸದೇ ನಿಯಮ ಉಲ್ಲಂಘಿಸಿದ್ದಾರೆ. ಹೀಗಾಗಿ ಪವಿತ್ರಾಗೌಡ ಅವರಿಗೆ ಜಾಮೀನು ಮಂಜೂರು ಮಾಡಬೇಕೆಂದು ಮನವಿ ಮಾಡಿದರು. ಆರೋಪಿಗಳ ಪರ ವಕೀಲರ ವಾದ ಆಲಿಸಿದ ನ್ಯಾಯಾಲಯವು ಸೆಪ್ಟಂಬರ್ 9ರ ವರೆಗೆ ನ್ಯಾಯಾಂಗ ಬಂಧನ ವಿಧಿಸುವಂತೆ ಸೂಚಿಸಿತು. ಅಲ್ಲದೇ, ವಿವಿಧ ಜೈಲುಗಳಿಗೆ ಆರೋಪಿಗಳ ಸ್ಥಳಾಂತರ ಅರ್ಜಿ ವಿಚಾರಣೆ ಸಂಬಂಧ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿ ಆಗಸ್ಟ್ 30ಕ್ಕೆ ವಿಚಾರಣೆ ಮುಂದೂಡಿತು. ಪ್ರಕರಣದ ಹಿನ್ನೆಲೆ: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಆರೋಪದ ಮೇರೆಗೆ 2024ರ ಜೂನ್ 11ರಂದು ನಟ ದರ್ಶನ್, ಪವಿತ್ರಾಗೌಡ ಸೇರಿ ಹಲವರು ಬಂಧನಕ್ಕೊಳಗಾಗಿ, ಹಲವು ತಿಂಗಳು ಜೈಲಿನಲ್ಲಿದ್ದರು. ಬಳಿಕ ನಟ ದರ್ಶನ್ ಸೇರಿದಂತೆ ಏಳು ಆರೋಪಿಗಳಿಗೆ ಡಿಸೆಂಬರ್ 13, 2024ರಂದು ಕರ್ನಾಟಕ ಹೈಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ಈ ಆದೇಶ ಪ್ರಶ್ನಿಸಿ, ಸರ್ಕಾರವು ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು.

ಈ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ನ್ಯಾ. ಜೆ.ಬಿ. ಪರ್ದಿವಾಲಾ, ನ್ಯಾ. ಆರ್ . ಮಹಾದೇವನ್ ಅವರಿದ್ದ ದ್ವಿಸದಸ್ಯ ಪೀಠವು, ರಾಜ್ಯ ಹೈಕೋರ್ಟ್ ಆದೇಶದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ, ಆ. 14ಕ್ಕೆ ತೀರ್ಪು ಕಾಯ್ದಿರಿಸಿತ್ತು. ಇತ್ತೀಚೆಗೆ ತೀರ್ಪು ನೀಡಿದ್ದ ಸುಪ್ರೀಂ ಕೋರ್ಟ್, ಜನಪ್ರಿಯತೆ, ಅಧಿಕಾರ ಅಥವಾ ಸವಲತ್ತು ಏನೇ ಇರಲಿ, ಕಾನೂನಿನೆದುರು ಎಲ್ಲರೂ ಸಮಾರು ಎಂದು ತಿಳಿಸಿ, ಆರೋಪಿಗಳಾದ ದರ್ಶನ್, ಪವಿತ್ರಾಗೌಡ, ಜಗದೀಶ್, ಅನುಕುಮಾರ್, ನಾಗರಾಜ್, ಲಕ್ಷ್ಮಣ್ ಹಾಗೂ ಪ್ರದೋಶ್ ಅವರ ಜಾಮೀನು ರದ್ದುಗೊಳಿಸಿತ್ತು. ಜಾಮೀನು ರದ್ಧತಿ ಬೆನ್ನಲ್ಲೇ ಆರೋಪಿಗಳ ಬಂಧನದ ಬಗ್ಗೆ ಬೆಂಗಳೂರು ಪಶ್ಚಿಮ ವಿಭಾಗದ ಡಿಸಿಪಿ ಎಸ್.ಗಿರೀಶ್ ಖಚಿತಪಡಿಸಿದ್ದರು.

## ಮುತ್ತೂರು ನಡುಗಡ್ಡೆ ಕುಟುಂಬಗಳ ಸ್ಥಳಾಂತರ: ತಹಸೀಲ್ದಾರ





**ಜಮಖಂಡಿ:** ತಾಲೂಕಿನ ಮುತ್ತೂರು ಗ್ರಾಮದ ನಡುಗಡ್ಡೆ ಪ್ರದೇಶದಲ್ಲಿ ವಾಸಿಸುತ್ತಿದ್ದ 7 ಕುಟುಂಬಳನ್ನು ಶನಿವಾರ ಸ್ಥಳಾಂತರಿಸಲಾಗಿದೆ ಎಂದು ತಹಸೀಲ್ದಾರ ಅನೀಲ ಬಡಿಗೇರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೃಷ್ಣಾ ಅಚ್ಚುಕಟ್ಟುಪ್ರದೇಶದಲ್ಲಿ ಭಾರಿ ಪ್ರಮಾಣದ ಮಳೆಯಾಗಿದ್ದರಿಂದ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಾತ್ತಿದ್ದು ಹಿಪ್ಪರಗಿ ಜಲಾಶಯದಿಂದ 2.25 ಲಕ್ಷ ಕ್ಯುಸೆಕ್ ನೀರನ್ನು ನದಿಗೆ ಹರಿ ಬಿಡಲಾಗುತ್ತಿದೆ. ಇದರಿಂದ ತಾಲೂಕಿನ ನದಿತೀರದ ಗ್ರಾಮಗಳಲ್ಲಿ ಹಾಗೂ ನಡುಗಡ್ಡೆ ಪ್ರದೇಶಗಳಲ್ಲಿ ನದಿ ನೀರು ಪ್ರವೇಶಿಸಿದ್ದು ಮುಂಜಾಗ್ರತಾ ಕ್ರಮವಾಗಿ ಮುತ್ತೂರು ನಡುಗಡ್ಡೆ ಪ್ರದೇಶದ 7 ಕುಟುಂಬದ 36 ಜನರನ್ನು ಮತ್ತು 38 ಜಾನುವಾರುಗಳನ್ನು ಸ್ಥಳಾಂತರಿಸಲಾಗಿದೆ. ಮುತ್ತೂರ ನಡುಗಡ್ಡೆಪ್ರದೇಶದಲ್ಲಿ 25 ಕುಟುಂಬಗಳು ವಾಸವಾಗಿವೆ. ನೀರಿನ ಹತ್ತಿರವಿರುವ 7 ಕುಟುಂಬಗಳನ್ನು ಸ್ಥಳಾಂತರಿಸಲಾಗಿದೆ ಎಂದರು.

ಉಳಿದ ಕುಟುಂಬಗಳು ನದಿಪಾತ್ರದಿಂದ ದೂರವಿದ್ದು ಸ್ಥಳಾಂತರಿಸುವ ಅವಶ್ಯಕತೆಯಿಲ್ಲ. ಇನ್ನೆರಡು ದಿನಗಳಲ್ಲಿ ನದಿಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗಲಿದೆ. ಅಚ್ಚುಕಟ್ಟು ಪ್ರದೇಶದಲ್ಲಿ ಮಳೆ ಕಡಿಮೆಯಾಗಿರುವದರಿಂದ ನೀರಿನ ಒಳಹರಿವು ಕಡಿಮೆಯಾಗಿ ಸಧ್ಯಕ್ಕಿಂತ ನದಿಪಾತ್ರದಲ್ಲಿ ನೀರು ಇಳಿಮುಖವಾಗಲಿದೆ. ಆಲಮಟ್ಟಿ ಜಲಾಶಯದಿಂದ 2.50 ಲಕ್ಷ ಕ್ಯುಸೆಕ್ ನೀರನ್ನು ಹರಿಬಿಡಲಾಗುತ್ತಿದೆ. ನದಿತೀರದ ಗ್ರಾಮಸ್ಥರು ಭಯ ಪಡುವ ಅವಶ್ಯಕತೆಯಿಲ್ಲ. ತಾಲೂಕು ಆಡಳಿತ ನಿರಂತರವಾಗಿ ಬಾಧಿತ ಪ್ರದೇಶಗಳ ಜನರೊಂದಿಗೆ ಸಂಪರ್ಕದಲ್ಲಿದ್ದು, ನೊಡಲ್ ಅಧಿಕಾರಿ ಗಳನ್ನು ನೇಮಿಸಲಾಗಿದ್ದು ಸಕಾಲಕ್ಕೆ ಸೂಕ್ತ ಮಾಹಿತಿ ನೀಡಲಿದ್ದಾರೆ ಎಂದರು.

### ದೇವಸ್ಥಾನಗಳಲ್ಲಿ ನೀರು.....

ತಾಲೂಕಿನ ಶಿರಗುಪ್ಪಿ–ಮೈಗೂರ ಗ್ರಾಮದ ಕೃಷ್ಣಾನದಿ ತೀರದಲ್ಲಿ ಹಲವಾರು ದೇವಸ್ಥಾನಗಳಿಗೆ ನೀರು ನುಗ್ಗಿದೆ. ಮೈಗೂರ ಮತ್ತು ಶಿರಗುಪ್ಪಿ ಗ್ರಾಮದ ಗ್ರಾಮದೇವತೆ ಲಕ್ಕವ್ವತಾಯಿ ದೇವಸ್ಥಾನಗಳಿಗೆ ನೀರು ನುಗಿದ್ದು, ದೇವಸ್ಥಾನ ಸಂಪೂರ್ಣವಾಗಿ ಜಲಾವೃತಗೊಂಡಿದೆ. ಕೃಷ್ಣಾನದಿಗೆ ಅಂದಾಜು ಒಂದು ಫೂಟ್ ಹೆಚ್ಚಿಗೆ ನೀರು ಹೆಚ್ಚಿಗೆ ಬಂದರೇ ಅಲ್ಲಿರುವ ನೂರಾರು ಕುಟುಂಬಗಳನ್ನು ಸ್ಥಳಾಂತರ ಮಾಡುವ ಪರಿಸ್ಥಿತಿ ಉಂಟಾಗಲಿದೆ. ಸಾವಿರಾರು ಎಕರೆಯಲ್ಲಿ ಬೆಳೆದಿರುವ ಕಬ್ಬು, ಇತರೇ ಬೆಳಗಳು ನೀರಿನಲ್ಲಿ ನಿಂತಿವೆ. ರೈತರು ಬೆಳೆದಿರುವ ಬೆಳೆಗಳಿಗೆ ಸರಕಾರ ಪರಿಹಾರ ನೀಡಬೇಕೆಂದು ರೈತ ಸಂಘದ ಮುಖ್ಯಸ್ಥ ಕಲ್ಲಪ್ಪ ಬಿರಾದಾರ ಜಿಲ್ಲಾಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

# ಕೃಷ್ಣೆಯ ರುದ್ರನರ್ತನಕ್ಕೆ ನಲುಗಿದ ನದಿ ತೀರದ ಗ್ರಾಮಗಳು

## ತಮದಡ್ಡಿಯಲ್ಲಿ ಕ್ಷಣ ಕ್ಷಣಕ್ಕೂ ನೀರಿನ ಮಟ್ಟ ಹೆಚ್ಚಳ : ಹಳಿಂಗಳಿಯಲ್ಲಿ ಜಾಕವೆಲ್– ತಮದಡ್ಡಿ ರಸ್ತೆ ಕಡಿತ

**ತೇರದಾಳ**–ಮಹಾರಾಷ್ಟ್ರದಿಂದ ಜಿಲ್ಲೆಯ ಜೀವನಾಡಿ ಕೃಷ್ಣಾ ನದಿಗೆ ಹರಿದು ಬರುವ ನೀರಿನ ಪ್ರಮಾಣ ಹೆಚ್ಚಳಗೊಳ್ಳುತ್ತಿದ್ದು, ಶನಿವಾರ 2.65 ಲಕ್ಷ ಕ್ಯೂಸೆಕ್ಸ್‌ದಷ್ಟು ನೀರು ಹರಿದು ಬರುತ್ತಿದೆ. ಇದರಿಂದ ಜಿಲ್ಲೆ ಪ್ರವೇಶ ಮಾಡುವ ತಮದಡ್ಡಿ ಗ್ರಾಮದಲ್ಲಿ ಕ್ಷಣ ಕ್ಷಣಕ್ಕೂ ನೀರಿನ ಮಟ್ಟ ಏರಿಕೆಯಾಗುತ್ತಿದ್ದು, ಗ್ರಾಮದ ಚನಾಳ ವಸತಿ ಸೇರಿದಂತೆ ಅಂಬೇಡ್ಕರ್ ವೃತ್ತದ ಹತ್ತಿರದ ನಿವಾಸಿಗಳ ಮನೆಗಳಿಗೆ ನೀರು ಸುತ್ತುವರೆಯುತ್ತಿದೆ. ಜಾನುವಾರಗಳನ್ನು ಕರೆದುಕೊಂಡು ತೇರದಾಳ ಹಾಗೂ ಹಳಿಂಗಳಿ ರಸ್ತೆಯ ಕಡೆಗೆ ಜನ ಆಸರೆ ಪಡೆಯುತ್ತಿದ್ದಾರೆ.

ಬೆಳೆಗಳು ಹಾಗೂ ಮೇವು ನೀರಲ್ಲಿ ನಿಂತಿದ್ದು, ನದಿ ತೀರದ ಗ್ರಾಮಸ್ಥರ ಬದುಕು ಮೂರಾಬಟ್ಟಿಯಾಗಿದೆ. ರಸ್ತೆಗಳು ಕಡಿತ–ಹಳಿಂಗಳಿ ಗ್ರಾಮದಲ್ಲಿ ಶುಕ್ರವಾರ ಗುಳ್ಳಿಮಳ್ಳಿಯ ರಸ್ತೆ ಕಡಿತಗೊಂಡಿತ್ತು. ಶನಿವಾರ ಎರಡು ಅಡಿಯಷ್ಟು ನೀರು ಹೆಚ್ಚಳಗೊಂಡಿದ್ದರಿಂದ ಹಳಿಂಗಳಿ–ತಮದಡ್ಡಿ ರಸ್ತೆ ಮೇಲೆ ನೀರು ಬಂದಿದ್ದು, ಬೈಕ್ ಸವಾರರು ನೀರಲ್ಲಿಯೇ ಬೈಕ್ ಓಡಿಸಿಕೊಂಡು ಹೋಗುವ ದುಸ್ಸಾಹಸ ಮಾಡುತ್ತಿದ್ದಾರೆ. ಅದರಂತೆ ಹಳಿಂಗಳಿ ಗ್ರಾಮದಲ್ಲಿರುವ ತೇರದಾಳ ಜಾಕವೆಲ್ ರಸ್ತೆಯೂ ಕಡಿತಗೊಂಡಿದ್ದು, ರೈತರು ಜಮೀನುಗಳಿಗೆ ಹೋಗಲು ದಾರಿ ಇಲ್ಲದಂತಾಗಿದೆ.







ಬ್ಯಾರಿಕೇಡ್ ಅಳವಡಿಸಿಲ್ಲ–ತಮದಡ್ಡಿ ಗ್ರಾಮದಲ್ಲಿ ಮನೆಗಳಿಗೆ ಹಾಗೂ ಹಳಿಂಗಳಿ ಗ್ರಾಮದಲ್ಲಿ ರಸ್ತೆಗಳು ಕಡಿತಗೊಂಡಿದ್ದರು ಪೊಲೀಸ್ ಇಲಾಖೆ ಬ್ಯಾರಿಕೇಡ್ ಅಳವಡಿಸದ ಕಾರಣ ಬೈಕ್ ಸವಾರರು ಬೇಕಾಬಿಟ್ಟಿಯಾಗಿ ನೀರಲ್ಲಿಯೇ ಬೈಕ್‌ಗಳನ್ನು ಓಡಿಸಿಕೊಂಡು ಹೋಗುತ್ತಿದ್ದಾರೆ. ಈ ಬಗ್ಗೆ ಉಭಯ ಗ್ರಾಪಂ ಅಧಿಕಾರಿಗಳು ಕೂಡ ನಿರ್ಲಕ್ಷ್ಯ ವಹಿಸಿರುವುದು ಅಚ್ಚರಿ ಮೂಡಿಸಿದೆ. ಅನಾಹುತ ಸಂಭವಿಸುವ ಮೊದಲು ಈ ಬಗ್ಗೆ ಅಧಿಕಾರಿಗಳು ಎಚ್ಚೆತ್ತಗೊಳ್ಳಬೇಕಿದೆ.

ಇಲ್ಲಿ ಬಿಸಿಲು–ತೇರದಾಳ ಭಾಗದಲ್ಲಿ ಮಳೆ ನಿಂತಿದ್ದು, ಸೂರ್ಯನ ಕಿರಣಗಳು ಕಾಣಿಸತೊಡಗಿವೆ. ಮಹಾರಾಷ್ಟ್ರದಲ್ಲಿಯೂ ಮಳೆ ಪ್ರಮಾಣ ಕಡಿಮೆ ಆಗಿದೆ ಎಂದು ಹೇಳಲಾಗುತ್ತಿದ್ದರೂ ಕೂಡ ಕೃಷ್ಣಾ ನದಿಯಲ್ಲಿ ನೀರಿನ ಮಟ್ಟ ಇಳಿಕೆ ಆಗದೆ ಏರಿಕೆಯಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ನೆರೆಯ ಬೆಳಗಾವಿ ಜಿಲ್ಲೆ ಕುಡಚಿ ಸೇತುವೆ ಮುಳುಗಡೆಗೊಂಡಿದ್ದು ಇನ್ನೂ ನೀರು ಕಡಿಮೆಗೊಂಡಿಲ್ಲ. ಇದರಿಂದ ಮಹಾರಾಷ್ಟ್ರಕ್ಕೆ ಹೋಗುವ ಹಾಗೂ ಬೆಳಗಾವಿ ಜಿಲ್ಲೆ ಕಾಗವಾಡ ವ್ಯಾಪ್ತಿಗೆ ಹೋಗುವ ವಾಹನಗಳು ಅಥಣಿ ಮಾರ್ಗವಾಗಿ ಹೋಗುತ್ತಿವೆ.

**ಹೇಳಿಕೆ :** ಹಳಿಂಗಳಿ ಗುಳ್ಳಿಮಳ್ಳಿಯಲ್ಲಿನ ಎರಡು ಕುಟುಂಬಗಳ ಮನೆಗಳಿಗೆ ನೀರು ಬಂದಿದ್ದು, ಅವರನ್ನು ಸ್ಥಳಾಂತರಿಸುವ ಕೆಲಸ ಮಾಡಲಾಗಿದೆ. ಗ್ರಾಮದ ಮಹಾವೀರ ಶಾಲೆಯಲ್ಲಿ ಕಾಳಜಿ ಕೇಂದ್ರ ಸ್ಥಾಪಿಸುವ ಕ್ರಮ ಕೈಗೊಳ್ಳಲಾಗಿದೆ.

**ಚೇತನ ಅಬ್ಬಿಗೇರ. ನೋಡಲ್ ಅಧಿಕಾರಿ**

# ರಾಷ್ಟ್ರದ ಏಳಿಗೆಯಲ್ಲಿ ಶಿಕ್ಷಕರ ಪಾತ್ರ ಪ್ರಮುಖ: ಪ್ರೊ.ಎಸ್.ಆರ್.ಪಾಟೀಲ

**ಬೈಲಹೊಂಗಲ:** ಬೈಲಹೊಂಗಲ ಸಮೀಪದ ಇಂಚಲ ಗ್ರಾಮದ ಈಗ ಮೂಡಲಗಿ ತಾಲ್ಲೂಕಿನ ಹುಣಶ್ಯಾಳ ಪಿ.ವೈ.ಗ್ರಾಮದ ಆರೂಢಜ್ಯೋತಿ ಚೈತನ್ಯ ಶಾಲೆಯ ಕೋಚಿಂಗ್ ವಿಭಾಗದ ಶಿಕ್ಷಕರಾಗಿರುವ ಶಿವಾನಂದ ಬಸನಾಯ್ಕ ಪಟ್ಟಿಹಾಳ ಅವರನ್ನು ಗ್ಯಾಲಕ್ಸಿ ಗಾರ್ಡನ್ ಉದ್ಘಾಟನಾ ಸಮಾರಂಭದಲ್ಲಿ ಸನ್ಮಾನಿಸಲಾಯಿತು.

ಕಿತ್ತೂರ ರಾಣಿ ಚೆನ್ನಮ್ಮ ಶಿಕ್ಷಣ ಸಂಸ್ಥೆಯ ಪದವಿ ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ಪ್ರೊ.ಎಸ್.ಆರ್.ಪಾಟೀಲ ಅವರು ಸನ್ಮಾನಿಸಿ ಮಾತನಾಡಿ ಸಮಾಜದಲ್ಲಿ ಶಿಕ್ಷಕರು ಉತ್ತಮ ಪಾತ್ರ ನಿರ್ವಹಿಸಿದಾಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ. ಆ ದಿಶೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಶಿಕ್ಷಣ ನೀಡಲು ತಮ್ಮ ಹೆಚ್ಚಿನ ಸಮಯವನ್ನು ಕಳೆಯುತ್ತಿರುವ ಶಿವಾನಂದ ಪಟ್ಟಿಹಾಳ ಅವರು ವಿದ್ಯಾರ್ಥಿಗಳು ಆಳ್ವಾಸ್, ನವೋದಯ, ಮೊರಾರ್ಜಿ, ಆದರ್ಶ ಹಾಗೂ ವಿವಿಧ ವಸತಿ ಶಾಲೆಗಳಿಗೆ ಆಯ್ಕೆಯಾಗಿ ಉತ್ತಮ ಶಿಕ್ಷಣ ಪಡೆದು ತಮ್ಮ ಬದುಕಿನಲ್ಲಿ ಉನ್ನತ ಸ್ಥಾನ ಹೊಂದುವಂತೆ ತರಬೇತಿ ನೀಡುತ್ತಿರುವುದು ಹೆಮ್ಮೆಯ ವಿಚಾರ ಎಂದು ಹೇಳಿದರು.




*ಕೇಂದ್ರ ಬಸವ ಸಮಿತಿ ಪ್ರಕಟಿಸಿರುವ ಮಹಾನ್ ದಾರ್ಶನಿಕ ಬಸವಣ್ಣ 500 ಪ್ರತಿ ಗ್ರಂಥಗಳನ್ನು ಉದ್ಘಾಟನಾ ಕಾರ್ಯಕ್ರಮಕ್ಕೆ ಆಗಮಿಸಿದ್ದ ಶ್ರೀಗಳಿಗೆ, ಶಾಸಕರಿಗೆ, ಗಣ್ಯ- ರಿಗೆ ಮತ್ತು ಗ್ರಾಹಕರಿಗೆ ಹೋಟೆಲ್ ಉದ್ಯಮಿ ಮಹಾಂತೇಶ ಪಾಟೀಲ ಅರ್ಪಿಸಿದರು*.

ಕನ್ನಡ ಜಾನಪದ ಪರಿಷತ್ ಅಧ್ಯಕ್ಷರಾದ ಚಂದ್ರಶೇಖರ ಕೊಪ್ಪದ ಅವರು ಮಾತನಾಡಿ ಶೈಕ್ಷಣಿಕ ಕಾರ್ಯದೊಂದಿಗೆ ಬಿಡುವಿನ ವೇಳೆಯಲ್ಲಿ ಬಸವಾದಿ ಶರಣರ ವಚನಗಳನ್ನು ಮನೆಮನೆಗೆ ಪ್ರಚುರಪಡಿಸುತ್ತಿದ್ದಾರೆ ಎಂದರು.

ಸಾಮಾಜಿಕ ಕಾರ್ಯಕರ್ತರಾದ ಬಸವರಾಜ ಬಡಿಗೇರ ಅವರು ಮಾತನಾಡಿ ಶಾಲಾಕಾರ್ಯಗಳಲ್ಲಿ ಅಷ್ಟೇ ಅಲ್ಲದೆ ಪ್ರಬಂಧ ರಚನೆ, ಜಿಲ್ಲಾ ಮತ್ತು ರಾಜ್ಯ ಮಟ್ಟದ ಕವಿಗೋಷ್ಠಿಗಳಲ್ಲಿ ಭಾಗವಹಿಸಿ ಕೀರ್ತಿ ತಂದಿದ್ದಾರೆ ಎಂದರು.

ಬೆಳಗಾವಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರಾದ ಮೋಹನ ಬಸನಗೌಡ ಪಾಟೀಲ ಅವರು ಮಾತನಾಡಿ ಸಾಮಾಜಿಕ, ಶೈಕ್ಷಣಿಕ, ಆಧ್ಯಾತ್ಮಿಕ ರಂಗದಲ್ಲಿ ಉತ್ತಮ ಮೌಲ್ಯ ಒಳಗೊಂಡು ಇಂದಿನ ಸಮಾಜಕ್ಕೆ ಶಿವಾನಂದ ಅವರ ಸೇವೆ ಅತ್ಯಮೂಲ್ಯ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶಿವಾನಂದ ಪಟ್ಟಿಹಾಳ ಅವರು ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಅಷ್ಟೇ ಅಲ್ಲದೆ ಪಾಲಕರ ಉತ್ತಮ ಸಹಕಾರ ಇದ್ದಾಗ ಮಾತ್ರ ಶೈಕ್ಷಣಿಕ ಅಭಿವೃದ್ಧಿಯಾಗಿ ಉತ್ತಮ ಸಾಧನೆ ಹೊರಹೊಮ್ಮಲು ಸಾಧ್ಯ ಎಂದರು.

ನಿವೃತ್ತ ಪ್ರೌಢಶಾಲಾ ಶಿಕ್ಷಕರಾದ ಸಿದ್ಧರಾಮ ತಲ್ಲೂರ(ನಾಗನೂರ) ಅವರು ಸ್ವಾಗತಿಸಿದರು. ಶಿಕ್ಷಕರಾದ ಚಂದ್ರಶೇಖರ ಧರೆಪ್ಪನವರ ಅವರು ವಂದಿಸಿದರು. ಜಾಗತಿಕ ಲಿಂಗಾಯತ ಮಹಾಸಭಾ ನಗರ ಘಟಕದ ಅಧ್ಯಕ್ಷರಾದ ಮಹೇಶ ಕೋಟಗಿ, ಕನ್ನಡ ಜಾನಪದ ಪರಿಷತ್ತಿನ ಕೋಶಾಧ್ಯಕ್ಷರಾದ ಮಹಾಬಳೇಶ್ವರ ವಾಲಿ, ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿರ್ದೇಶಕರಾದ ಶ್ರೀಶೈಲ ಶರಣಪ್ಪನವರ, ಶ್ರೀ ಮಹಾಲಕ್ಷ್ಮಿ ಪಟ್ಟಣ ಸಹಕಾರಿ ಬ್ಯಾಂಕಿನ ನಿರ್ದೇಶಕರಾದ ಅನ್ವರಹುಸೇನ ಪಾಟೀಲ, ತೆರಿಗೆ ಸಲಹೆಗಾರರಾದ ಆನಂದ ವಾಲಿ, ಉದ್ಯಮಿ ರಮೇಶ ಸುತಾರ ಮತ್ತಿತರರು ಉಪಸ್ಥಿತರಿದ್ದರು.



**ಯರಗಟ್ಟಿ: ಪಟ್ಟಣದ ತಹಶಿಲ್ದಾರ ಕಾರ್ಯಾಲಯಕ್ಕೆ ಬೆಳಗಾವಿ ವಿಭಾಗ, ಪ್ರಾದೇಶಿಕ ಆಯುಕ್ತರಾದ ಶ್ರೀಮತಿ ಜಾನಕಿ. ಕೆ. ಎಮ್ ಅವರು ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ತಹಶೀಲ್ದಾರ ಎಂ. ವ್ಹಿ. ಗುಂಡಪ್ಪಗೋಳ,ಉಪತಹಸೀಲ್ದಾರ ಎಸ್. ಎಸ್. ಜಾದವ, ಶಿರಸ್ತೇದಾರ ಎಸ್. ಬಿ. ಕುಲಕರ್ಣಿ, ದ್ವಿತೀಯ ದರ್ಜೆ ಸಹಾಯಕ ಕೆ. ಎಂ. ಗಡಕರಿ, ಎಲ್. ಬಿ. ಪೂಜೇರ, ಎಲ್. ಸಿ. ತಳವಾರ, ಶಾಹಿನ ಮಿಶ್ರಿಕೋಟಿ, ವಿ. ಪಿ. ಉಪ್ಪಿನ, ಎಸ್. ಆಯ್. ಚಪಳಿ ಸೇರಿದಂತೆ ಅನೇಕರು ಇದ್ದರು.**

# 24 ರಂದು 10ನೇ ವಾರ್ಷಿ ಸರ್ವ ಸಾಧಾರಣ ಸಭೆ

**ತಾಳಿಕೋಟೆ,** ಪಟ್ಟಣದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಪತ್ತಿನ ಸಹಕಾರ ಸಂಘ ನಿ,ದ 10ನೇ ವರ್ಷದ ಸರ್ವ ಸಾಧಾರಣ ಸಭೆಯು ಇದೇ ದಿ. 24 ರವಿವಾರರಂದು ಜರುಗಲಿದೆ. ಅಂದು ಬೆಳಿಗ್ಗೆ 11 ಗಂಟೆಗೆ ದಿ.ಅಡತ್ ಮರ್ಚಂಟ್ಸ್ ಅಸೋಸಿಯೇಶನ್ ಸಭಾಭವನದಲ್ಲಿ ಜರುಗಲಿರುವ ಈ ಸಮಾರಂಭದ ದಿವ್ಯ ಸಾನಿದ್ಯವನ್ನು ವಡವಡಗಿ ನಂದಿಮಠದ ಶ್ರೀ ವೀರಸಿದ್ದ ಮಹಾಸ್ವಾಮಿಗಳು ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಶಿವಪುತ್ರಪ್ಪ ದೇಸಾಯಿ, ವ್ಹಿ.ಡಿ.ಸಿ.ಸಿ.ಬ್ಯಾಂಕ್ ನಿರ್ದೇಶಕರಾದ ಬಿ.ಎಸ್.ಪಾಟೀಲ(ಯಾಳಗಿ), ವಿಜಯಪುರ ಜಿಲ್ಲಾ ಕ್ಷಯರೋಗ ನಿವಾರಣಾ ಘಟಕದ ಡಾ.ಎಂ.ಬಿ.ಬಿರಾದಾರ, ಪಿಎಸ್ಐ ಶ್ರೀಮತಿ ಜ್ಯೋತಿ ಖೋತ್, ಅವರು ಆಗಮಿಸುವರು.

ಅಧ್ಯಕ್ಷತೆಯನ್ನು ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಪತ್ತಿನ ಸಹಕಾರ ಸಂಘ ನಿ,ದ ಅಧ್ಯಕ್ಷ ಬಿ.ಎನ್.ಹಿಪ್ಪರಗಿ ಅವರು ವಹಿಸುವರೆಂದು ಪ್ರಕಟನೆ ತಿಳಿಸಿದೆ.

# ಮಕ್ಕಳ ಹಕ್ಕು ಮತ್ತು ಸ್ವಾತಂತ್ರ್ಯ ಕಾಪಾಡಲು ಇಲಾಖಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು

**ಧಾರವಾಡ :** ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ವಿವಿಧ ಇಲಾಖೆಗಳಲ್ಲಿ ಮಕ್ಕಳ ಸಮಗ್ರ ಅಭಿವೃದ್ಧಿಗಾಗಿ ಅನುದಾನಗಳನ್ನು ಮೀಸಲಿಟ್ಟು, ಅನೇಕ ಕಾರ್ಯಕ್ರಮಗಳನ್ನು ಮತ್ತು ಸೌಲಭ್ಯಗಳನ್ನು ಕಲ್ಪಿಸಿವೆ. ರಾಜ್ಯ ಹಾಗೂ ಜಿಲ್ಲಾಮಟ್ಟದಲ್ಲಿ ಆಯಾ ಇಲಾಖೆಯ ಅಧಿಕಾ- ರಿಗಳು ಪರಸ್ಪರ ಸಮನ್ವಯ ಮತ್ತು ಸಂವಹನದ ಮೂಲಕ ಮಕ್ಕಳ ಹಕ್ಕುಗಳು ಮತ್ತು ಸ್ವಾತಂತ್ರ್ಯ ಕಾಪಾಡುವ ಮೂಲಕ ಅವರ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ. ನಾಗನಗೌಡ ಅವರು ಹೇಳಿದರು.

ಅವರು ಇಂದು (ಆ.22) ಮಧ್ಯಾಹ್ನ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಧಾರವಾಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮ ಮತ್ತು ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ವಾತಾವರಣವನ್ನು ನಿರ್ಮಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮಗಳು ಮತ್ತು ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಅವುಗಳ ಪರಿಣಾಮಕಾರಿ ಅನುಷ್ಠಾನದ ಕುರಿತು ಆಯಾ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಿ, ಪ್ರಗತಿಗೆ ಶ್ರಮಿಸಬೇಕೆಂದು ಹೇಳಿದರು.

ಆರೋಗ್ಯ ಇಲಾಖೆಯಿಂದ ಮಕ್ಕಳ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು. ಆರ್‌ಬಿಎಸ್‌ಕೆ ತಂಡವು ಕ್ರಿಯಾಶೀಲವಾಗಿ ಕರ್ತವ್ಯ ನಿರ್ವಹಿಸಬೇಕು. ಅಪೌಷ್ಟಿಕತೆಯ ಮಕ್ಕಳ ಆರೋಗ್ಯ ತಪಾಸಣೆ ಪೂರಕ ಆಹಾರ ಪೂರೈಕೆ ನಿಯಮಿತವಾಗಿ ಆಗಬೇಕು. ಪ್ರಸವಪೂರ್ವ ಲಿಂಗ ಪತ್ತೆ ಕು- ರಿತು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಅನಿರೀಕ್ಷಿತ ಭೇಟಿ




ನೀಡಿ, ಪರಿಶೀಲಸಬೇಕೆಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಪ್ರತಿಯೊಂದು ಮಗುವಿಗೂ ರಾಷ್ಟ್ರೀಯ ಲಸಿಕಾ ಕಾರ್ಯಕ್ರಮದ ಅಡಿಯಲ್ಲಿ ಸಿಗಬೇಕಾದ ಎಲ್ಲಾ ಲಸಿಕೆಗಳು ಸರಿಯಾದ ಸಮಯಕ್ಕೆ ತಲುಪಬೇಕು. ಯಾವುದೇ ಮಗು ಲಸಿಕೆಯಿಂದ ವಂಚಿತವಾಗಬಾರದು ಎಂದು ಹೇಳಿದರು.

ಜಿಲ್ಲೆಯ ಯಾವ ತಾಲೂಕಿನಲ್ಲಿಯೂ ಮಕ್ಕಳು ಅಪೌಷ್ಟಿಕತೆಯಿಂದ ಬಳಲದಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾ- ರಿಯಾಗಿದೆ. ಸರ್ಕಾರವು ಅಂಗನವಾಡಿ ಮಕ್ಕಳಿಗೆ ಪೌಷ್ಟಿಕಾಂಶದ ಕೊರತೆಯನ್ನು ನೀಗಿಸಲು ಗುಣಮಟ್ಟದ ಆಹಾರವನ್ನು ಒದಗಿಸುತ್ತಿದೆ. ಅದು ಶಾಲೆಗೆ ಬರುವ ಎಲ್ಲ ಮಕ್ಕಳಿಗೂ ತಲುಪಬೇಕು. ಅದರಿಂದ ಯಾವ ಮಕ್ಕಳು ವಂಚಿತರಾಗಿ ಅಪೌಷ್ಟಿಕತೆಯಿಂದ ಬಳಲಬಾರದೆಂದು ಅವರು ಹೇಳಿದರು.

ಶಿಕ್ಷಣ ಹಕ್ಕು ಕಾಯ್ದೆಯ ಪ್ರಕಾರ 6 ರಿಂದ 14 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಉಚಿತ ಮತ್ತು ಕಡ್ಡಾಯ ಶಿಕ್ಷಣ ನೀಡುವುದನ್ನು ಕಡ್ಡಾಯಗೊಳಿಸಲಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವಲ್ಲಿ ಇಲಾಖೆಯ ಅಧಿಕಾರಿಗಳ ಪಾತ್ರ ಮುಖ್ಯವಾಗಿದೆ. ಶಾಲೆ ಬಿಟ್ಟ ಮಕ್ಕಳನ್ನು ಪಟ್ಟಿಮಾಡಿ ಅವರಿಗೆ ಆದ ತೊಂದರೆಯನ್ನು ತಿಳಿದು, ಮರಳಿ ಶಾಲೆಗೆ ಕರೆತರುವ ಪ್ರಯತ್ನ ಮಾಡಬೇಕು. ಪ್ರತಿ ಮಗುವೂ ಶಾಲೆಗೆ ಬರುವಂತೆ ಮಾಡಿದರೆ, ನಾವು ಒಂದು ಸುಶಿಕ್ಷಿತ ಮತ್ತು ಉಜ್ವಲ ಭವಿಷ್ಯವನ್ನು ನಿರ್ಮಿಸಬಹುದು ಎಂದು ತಿಳಿಸಿದರು.

ಮಕ್ಕಳ ಮೇಲಿನ ದೌರ್ಜನ್ಯವು ಹೇಯ ಕೃತ್ಯವಾಗಿದೆ. ಇಂತಹ ಪ್ರಕರಣಗಳಲ್ಲಿ ಸಿಲುಕಿರುವ ಮಕ್ಕಳಿಗೆ ತ್ವರಿತವಾಗಿ ನ್ಯಾಯ ಒದಗಿಸುವುದು ಕೇವಲ ಕಾನೂನಿನ ಜವಾಬ್ದಾರಿಯಲ್ಲ; ಅದು ನಮ್ಮೆಲ್ಲರ ನೈತಿಕ ಜವಾಬ್ದಾರಿಯಾಗಿದೆ. ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ತ್ವರಿತ ನ್ಯಾಯ ಒದಗಿಸಬೇಕು. ಖಾಸಗಿ ಶಾಲೆಗಳ ಯಾವ ಸಂಸ್ಥೆಗಳು ಶಾಲೆಗಳಲ್ಲಿ ಬಸ್ ವ್ಯವಸ್ಥೆ ಇದೆಯೋ ಅದನ್ನು ಪಟ್ಟಿ ಮಾಡಿ ಸರ್ಕಾರದ ನಿಯಮಾನುಸಾರ ಅವರು ಬಸ್ ವ್ಯವಸ್ಥೆಯನ್ನು ಮಾಡಿದ್ದಾರೋ ಇಲ್ಲವೋ ಎಂದು ಪರಿಶೀಲನೆ ಮಾಡಬೇಕೆಂದು ಅವರು ಹೇಳಿದರು.

ಪೋಕ್ಸೋ ಕಾಯ್ದೆಯು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯವನ್ನು ತಡೆಗಟ್ಟಲು ಅತ್ಯಂತ ಕಠಿಣ ಕಾನೂನು ಆಗಿದೆ. ಈ ಕಾಯ್ದೆಯ ಬಗ್ಗೆ ಸಾರ್ವಜನಿಕರಲ್ಲಿ, ವಿಶೇಷವಾಗಿ ಪೋಷಕರು ಮತ್ತು ಮಕ್ಕಳಲ್ಲಿ ಜಾಗೃತಿ ಮೂಡಿಸಬೇಕಿದೆ. 18 ವರ್ಷದ ಒಳಗಿನ ಮಕ್ಕಳು ಮದುವೆಯಾಗದೆ ಬಾಲ ಗರ್ಭಿಣಿಯರಾದರೆ ಅದರ ವರದಿಯನ್ನು ಪೊಲೀಸ್ ಠಾಣೆಗೆ ತಲುಪಿಸಬೇಕು ಎಂದು ಅವರು ತಿಳಿಸಿದರು.

ಮಕ್ಕಳ ಸಹಾಯವಾಣಿ-1098 ಸಂಖ್ಯೆಗೆ ಸಂಕಷ್ಟದಲ್ಲಿರುವ ಯಾವುದೇ ಮಗು, ಕರೆ ಮಾಡಿದರೆ, ತಕ್ಷಣದ ಸಹಾಯ ಸಿಗುವಂತೆ ನೋಡಿಕೊಳ್ಳಬೇಕು. ಮಕ್ಕಳ ಸಹಾಯವಾಣಿ ಸಂಖ್ಯೆಯ ಬಗ್ಗೆ ವ್ಯಾಪಕ ಪ್ರಚಾರ ನೀಡಬೇಕಿದೆ ಮತ್ತು ಶಾಲೆಗಳಲ್ಲಿ ಕಡ್ಡಾಯವಾಗಿ ಇದನ್ನು ಮಕ್ಕಳಿಗೆ ತಿಳಿಸಬೇಕು ಹಾಗೂ ಸಹಾಯವಾಣಿ ಫಲಕಗಳನ್ನು ಕಚೇರಿಗಳಲ್ಲಿ, ಬಸ್ ನಿಲ್ದಾಣಗಳಲ್ಲಿ ಮತ್ತು ರೈಲು ನಿಲ್ದಾಣಗಳಲ್ಲಿ ಜನದಟ್ಟಣೆ ಇದ್ದ ಪ್ರದೇಶದಲ್ಲಿ ಜನರಿಗೆ ಕಾಣುವ ಹಾಗೆ ಪ್ರದರ್ಶಿಸಬೇಕೆಂದು ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಧೀನದಲ್ಲಿ ಬರುವ ವಸತಿ ನಿಲಯಗಳ ಬಗ್ಗೆ ನಿಗಾ ವಹಿಸಬೇಕು. ಹಾಸ್ಟೆಲ್‌ಗಳಲ್ಲಿ ಸ್ವಚ್ಛತೆಗೆ ಮೊದಲು ಆದ್ಯತೆಯನ್ನು ನೀಡಬೇಕು. ಪ್ರತಿ ತಿಂಗಳು ಆರೋಗ್ಯ ತಪಾಸಣೆಯನ್ನು ನಡೆಸಬೇಕು, ಪ್ರತಿಯೊಂದು ವಸತಿನಿಲಯದಲ್ಲಿ ಸಿಸಿ ಟಿವಿ ಕ್ಯಾಮೆರಾ, ಬಯೋಮೆಟ್ರಿಕ್ ಯಂತ್ರ, ಯುಪಿಎಸ್ ಅನ್ನು ಅಳವಡಿಸಬೇಕು. ಅವುಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲಿಸಬೇಕೆಂದು ಸೂಚಿಸಿದರು.

ವೇದಿಕೆಯಲ್ಲಿದ್ದ ಕರ್ನಾಟಕ ಮಕ್ಕಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ.ರಾಮದಾಳ, ಶಶೀಧರ ಕೊಸುಂಬೆ, ಡಾ. ತಿಪ್ಪೇಸ್ವಾಮಿ ಕೆ.ಟಿ., ಎಸ್. ಮಂಜುಶ್ರೀ, ವೆಂಕಟೇಶ, ಅಪರ್ಣಾ ಎಮ್. ಕೊಳ್ಳಾ, ಅವರು ವಿವಿಧ ಇಲಾಖೆಗಳ ಪ್ರತಿ ಕಾರ್ಯಕ್ರಮಗಳ ಕುರಿತು ಪ್ರಗತಿ ಪರಿಶೀಲನೆ ಮಾಡಿ, ಸಲಹೆ ಸೂಚನೆಗಳನ್ನು ನೀಡಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಹಾಗೂ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಮಾತನಾಡಿದರು.

ಸಭೆಯಲ್ಲಿ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಮಕ್ಕಳ ಸಹಾಯವಾಣಿಯ ನೂತನ ಲಾಂಛನ ಹಾಗೂ ಮಾಹಿತಿ ಫಲಕಗಳನ್ನು ಬಿಡುಗಡೆ ಮಾಡಿದರು.

ವೇದಿಕೆಯಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಬಿ.ವಾಯ್.ಪಾಟೀಲ, ಉಪ ಪೊಲೀಸ್- ಆಯುಕ್ತ ಮಹಾನಿಂಗ ನಂದಗಾವಿ, ಜಿಲ್ಲಾ ಪಂಚಾಯತ ಸಹಾಯಕ ಕಾರ್ಯದರ್ಶಿ ಅಜಯ ಎನ್. ಇದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ದೀಪಾ ಜಾವೂರ ಅವರು ಸ್ವಾಗತಿಸಿದರು. ಮಹಮ್ಮದ್ ಅಲಿ ತಹಶೀಲ್ದಾರ ಕಾರ್ಯಕ್ರಮ ನಿರೂಪಿಸಿದರು. ಮಕ್ಕಳ ರಕ್ಷಣಾಧಿಕಾರಿ ಸಾಂಸ್ಥಿಕ ಪ್ರಕಾಶ ಕೊಡ್ಲಿವಾಡ ವಂದಿಸಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ವಂತಿಕೆ ಹಣ ಭರಣಾ ಮಾಡಲು ಕೊನೆಯ ಅವಕಾಶ

**ತಾಳಿಕೋಟೆ,** ಪಟ್ಟಣದ ಪುರಸಭೆಗೆ ಸಂಬಂದಿಸಿದಂತೆ, 2017-18ನೇ ಸಾಲಿನ ಕೇಂದ್ರ ಸರ್ಕಾರದ ಯೋಜನೆಯಾದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಬರುವ ಎ.ಎಚ್.ಪಿ (ಗುಂಪು ಮನೆಗಳ) (ಜಿ+3) ಉಪಘಟಕದಲ್ಲಿ ಆಯ್ಕೆಯಾಗಿರುವ (ವಂತಿಕೆ ಹಣ ಭರಣಾ ಮಾಡದೆ ಇರುವ ಯಾದಿಯನ್ನು ಈ ಕಾರ್ಯಾಲಯದ ಸೂಚನಾ ಫಲಕಕ್ಕೆ ಪ್ರಚುರ ಪಡಿಸಿದೆ ಎಂದು ಪುರಸಭಾ ಮುಖ್ಯಾಧಿಕಾರಿ ವಸಂತ ಪವಾರ ಅವರು ತಿಳಿಸಿದ್ದಾರೆ.

ಸದರಿ ಫಲಾನುಭವಿಗಳಿಗೆ ವಂತಿಕೆ ಹಣ ಭರಣಾ ಮಾಡಲು ಸಾಕಷ್ಟು ಬಾರಿ ನೋಟಿಸ್ ಮೂಲಕ, ಹಾಗೂ ಧ್ವನಿ ವರ್ಧಕ ಮೂಲಕ ಸೂಚಿಸುತ್ತಾ ಬಂದರೂ ಕೂಡಾ ವಂತಿಕೆ ಹಣ ಭರಣಾ ಮಾಡಿರುವದಿಲ್ಲಾ ಕಾರಣ ದಿ.26-08-2025 ರೊಳಗಾಗಿ ಪುರಸಭೆ ಕಾರ್ಯಾಲಯಕ್ಕೆ



ಭೇಟಿ ನೀಡಿ ಫಲಾನುಭವಿಗಳ ವಂತಿಕೆ ಹಣ ಭರಣಾ ಮಾಡಲು ಕೊನೆಯ ಅವಕಾಶ ನೀಡಲಾಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಈ ಭಾರಿ ವಂತಿಕೆ ಹಣ ಭರಣಾ ಮಾಡುವಲ್ಲಿ ತಪ್ಪಿದ್ದಲ್ಲಿ ತಮ್ಮ ಹೆಸರುಗಳನ್ನು ಸದರಿ ಫಲಾನುಭವಿಗಳ ಯಾದಿಯಿಂದ ಕೈ-ಬೀಡಲಾಗವುದೆಂದು ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ ಅವರು ತಿಳಿಸಿದ್ದಾರೆ.

# ಧಾರವಾಡ ರಂಗಾಯಣ 3 ಜನ ಪುರುಷ ಕಲಾವಿದರ ನೇಮಕಕ್ಕಾಗಿ ಅರ್ಜಿ ಆಹ್ವಾನ

**ಧಾರವಾಡ** : ಧಾರವಾಡ ರಂಗಾಯಣಕ್ಕೆ ತಾತ್ಕಾಲಿಕವಾಗಿ ಒಂದು ವರ್ಷದ ಅವಧಿಗೆ 3 ಜನ ಪುರುಷ ಕಲಾವಿದರನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ರಂಗಭೂಮಿಯಲ್ಲಿ ಅನುಭವವಿರುವ ಆಸಕ್ತ ಕಲಾವಿದರು ಅರ್ಜಿ ಸಲ್ಲಿಸಬಹುದು. ರಾಷ್ಟ್ರೀಯ ನಾಟಕ ಶಾಲೆಯ ಪದವಿ, ರಾಜ್ಯದ ಯಾವುದೇ ರಂಗಶಿಕ್ಷಣ ಕೇಂದ್ರದಿಂದ ರಂಗಶಿಕ್ಷಣ ಪದವಿ, ಡಿಪ್ಲೋಮಾ, ರಾಜ್ಯ ಸರ್ಕಾರ ಅಂಗೀಕೃತ ವಿಶ್ವವಿದ್ಯಾಲಯದಿಂದ ನಾಟಕ ವಿಭಾಗದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

ಅರ್ಹತೆಯುಳ್ಳ 18 ರಿಂದ 25 ವರ್ಷದೊಳಗಿನ ವಯೋಮಿತಿಯುಳ್ಳ ಆಸಕ್ತ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಪಾರಂಪರಿಕ ಕಲೆಯ ಕುಟುಂಬಗಳಿಂದ ಬಂದ ಹಾಗೂ ರಂಗಶಿಕ್ಷಣ ಪಡೆದ ಪದವಿ ಕಲಾವಿದರಿಗೆ ವಯೋಮಿತಿಯನ್ನು 5 ವರ್ಷ ಸಡಿಲಿಸಲಾಗುವುದು.

ಆಸಕ್ತರು ರಂಗಾಯಣ ಹಾಗೂ ಫೇಸ್‌ಬುಕ್ ಪೇಜ್‌ನಲ್ಲಿ ಅರ್ಜಿ ಪಡೆದು ಅಥವಾ ಬಿಳಿ ಹಾಳೆಯ ಮೇಲೆ ಸ್ವವಿವರದೊಂದಿಗೆ ಆಗಸ್ಟ್ 28, 2025 ರೊಳಗಾಗಿ ಆಡಳಿತಾಧಿಕಾರಿಗಳು, ರಂಗಾಯಣ ಪಂ.ಬಸವರಾಜ ಬಯಲು ರಂಗಮಂದಿರ, ಕಾಲೇಜು ರಸ್ತೆ, ಧಾರವಾಡ-580001 ಈ ವಿಳಾಸಕ್ಕೆ ಮುದ್ದಾಂ, ಅಂಚೆ ಮೂಲಕ ಅಥವಾ ಇಮೇಲ್ (ಜುಚಿಡಿತಿಚಿಜಡಿಚಿಟ- ರಚಿಥಿಚಿಟಿಚಿ@ರಟಚಿಟ.ಛಿಠಟ) ಮೂಲಕ ಸಲ್ಲಿಸಬೇಕು. ಆಗಸ್ಟ್ 30, 2025 ರಂದು ಬೆಳಿಗ್ಗೆ 10 ಗಂಟೆಗೆ ಅಗತ್ಯ ದಾಖಲೆಗಳೊಂದಿಗೆ ಸಂದರ್ಶನಕ್ಕೆ ಹಾಜರಿರಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ, 0836-2441706ಗೆ ಗೆ ಸಂಪರ್ಕಿಸಬಹುದು ಎಂದು ರಂಗಾಯಣದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾನೂನು ಗೌರವಿಸುವರಿಗೆ ನಾವು ಗೌರವಿಸುತ್ತೇವೆ-ಸಿಪಿಐ




**ತಾಳಿಕೋಟೆ,** ಯಾವುದೇ ಹಬ್ಬ ಹರಿದಿನಗಳಾ ಗಲಿ ಶಾಂತತೆಯಿಂದ ಹಾಗೂ ಸೌಹಾರ್ದತೆ ಎಂಬ ಭಾವನೆಯೊಂದಿಗೆ ಆಚರಣೆ ನಡೆದರೆ ಎಲ್ಲರಿಗೂ ಅನುಕೂಲವಾಗಲಿದೆ ಆ ಆಚರಣೆ ಆಗತಕ್ಕಂತಹ ಹಬ್ಬಕ್ಕೆ ಅರ್ಥ ಬರಲಿದೆ ಕಾರಣ ಗಣೇಶ ಹಬ್ಬ ಹಾಗೂ ಈದ್ ಮೀಲಾದ್ ಹಬ್ಬವನ್ನು ಶಾಂತತೆಯೊಂದಿಗೆ ಆಚರಿಸಿಕೊಂಡು ತಾಳಿಕೋಟೆಯ ಇತಿಹಾಸ ಕಾಪಾಡಬೇಕೆಂದು ಸಿಪಿಐ ಮಹ್ಮದ್‌ಫಸಿಯುದ್ದೀನ್ ಅವರು ಹೇಳಿದರು.

ಶನಿವಾರರಂದು ಗೌರಿ ಗಣೇಶ ಹಬ್ಬ ಮತ್ತು ಈದ್ ಮೀಲಾದ್ ಹಬ್ಬದ ಕುರಿತು ಶ್ರೀ ವಿಠ್ಠಲ ಮಂದಿರದಲ್ಲಿ ತಾಳಿಕೋಟೆ ತಾಲೂಕಾ ಆಡಳಿತದ ವತಿಯಿಂದ ಏರ್ಪಡಿಸಲಾದ ಶಾಂತಿ ಸಭೆಯಲ್ಲಿ ಉಪಸ್ಥಿತ ಸಬಿಕರನ್ನುದ್ದೇಶಿಸಿ ಮಾತನಾಡುತ್ತಿದ್ದ ಅವರು ಶಾಂತಿ ಸೌಹಾರ್ದತೆ ಎಂಬುದು ನಮ್ಮ ಪೊಲೀಸ್ ಇಲಾಖೆಗೆ ಅಗತ್ಯವಾಗಿದೆ ಈ ಸಲ ಗಣೇಶ ಮೂರ್ತಿ ಪ್ರತಿಷ್ಠಾಪನೆಗಳಲ್ಲಿ ಈ ಹಿಂದಿನಕ್ಕಿಂತಲೂ ಪ್ರತಿಷ್ಠಾಪನೆಯ ಕಾರ್ಯ ಹೆಚ್ಚಿಗೆ ನಡೆಯುತ್ತಲಿದೆ ಎಂಬುದು ಗೊತ್ತಾಗಿದೆ ಯಾವುದೇ ಕಾರ್ಯ ಮಾಡಿದರೆ ಕಾನೂನು ವಿರೋಧ ಆಗಬಾರದೆಂದರು. ಗಣೇಶ ಮೂರ್ತಿಯ ಪ್ರತಿಷ್ಠಾಪನೆಯ ಹಾಗೂ ವಿಸರ್ಜನೆಯ ಮಾರ್ಗವನ್ನು ಪೊಲೀಸ್ ಇಲಾಖೆಗೆ ತಿಳಿಸುವ ಕಾರ್ಯ ಮಾಡಬೇಕು ದೈಹಿಕವಾಗಲಿ ಮಾನಸಿಕವಾಗಲಿ ಯಾರಿಗೂ ತೊಂದರೆಯಾಗದಂತೆ ಮುಕ್ತವಾಗಿ ನಡೆದುಕೊಳ್ಳಬೇಕೆಂದರು. ಅಗ್ನಿ ಶಾಮಕ ಠಾಣೆಯ ವತಿಯಿಂದ ಹಾಗೂ ಪುರಸಭೆ, ಕೆಇಬಿ, ಖಾಸಗಿ ಸ್ಥಳದಲ್ಲಿ ಮೂರ್ತಿ ಪ್ರತಿಷ್ಠಾಪಿಸುವದಾದರೆ ಅವರಿಂದ ನಿಗಧಿತ ನಮೂನೆಯ ಪತ್ರ ಧ್ವನಿ ವರ್ಧಕ ಅನುಮತಿ, ಇವು ಮುಖ್ಯವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪಿಸುವವರು ಪಡೆದುಕೊಳ್ಳಬೇಕೆಂದು ಸೂಚಿಸಿದರು.

ಇನ್ಸ್ಪೋರ್ವ ತಹಶಿಲ್ದಾರ(ಗ್ರೇಡ್-2) ಪ್ರದೀಪ ದೇವಗಿರಿ ಅವರು ಮಾತನಾಡಿ ತಾಲೂಕಾ ಆಡಳಿತ ಹಾಗೂ ಪೊಲೀಸ್ ಇಲಾಖೆಯ ವತಿಯಿಂದ ಗಣೇಶ ಉತ್ಸವ ಹಾಗೂ ಈದ್ ಮೀಲಾದ್ ಹಬ್ಬಗಳ ಕುರಿತು ತಿಳುವಳಿಕೆ ನೀಡುವ ಕುರಿತು ಶಾಂತಿ ಸಭೆಯನ್ನು ಕರೆಯಲಾಗಿದೆ ಈ ಹಬ್ಬದಲ್ಲಿ ಸಹೋದರ ಭಾವನೆಯಿಂದ ನಡೆಯಬೇಕೆಂದರು. ಗಣೇಶ ಮಂಡಳಿಯವರು ಭಕ್ತಿ ಗೀತೆಗಳನ್ನು ಹಾಕುವ ಹವ್ಯಾಸ ಬೆಳೆಸಿಕೊಳ್ಳಬೇಕು ಇಲ್ಲ ಸಲ್ಲದ ಗೀತೆಗಳನ್ನು ಹಾಕುವದ- ರಿಂದ ಅದಕ್ಕೆ ಅರ್ಥ ಬರುವದಿಲ್ಲಾ ನಮ್ಮ ಭಾರತೀಯ ಸಂಸ್ಕೃತಿ ಎಂಬುದು ಒಳ್ಳೆಯ ಸಂಸ್ಕೃತಿಯಾಗಿದೆ ಅಂತಹ ಸಂಸ್ಕೃತಿಯನ್ನು ಗೌರವಿಸುತ್ತಾ ಮುನ್ನಡೆಯಬೇಕೆಂದರು. ಹಿರಿಯ ಅಧಿಕಾರಿಗಳ ಮಾರ್ಗದರ್ಶನದಂತೆ ಕಾನೂನಿನನ್ವಯದಂತೆ ನಡೆಯಬೇಕಾಗುತ್ತದೆ ಒಟ್ಟಿನಲ್ಲಿ ಶಾಂತಿ ಸೌಹಾರ್ದತೆಯೊಂದಿಗೆ ಈ ಎರಡು ಹಬ್ಬಗಳನ್ನು ಆಚರಿಸಿಕೊಂಡು ಬರಲು ತಿಳಿ ಹೇಳಿದರು.


ಇನ್ಸ್ಪೋರ್ವ ಸ್ಥಳೀಯ ಪಿಎಸ್ಐ ಶ್ರೀಮತಿ ಜ್ಯೋತಿ ಖೋತ್ ಅವರು ಮಾತನಾಡಿ ಹಬ್ಬ ಹರಿದಿನಗಳ ಎಲ್ಲ ಕೋಮಿನವರಿಗೆ ಸಂಬಂದಪಟ್ಟವುಗಳಾಗಿರುತ್ತವೆ ಅವುಗಳ ಆಚರಣೆಗೆ ಮಹತ್ವ ಬರುವಂತಹ ಕಾರ್ಯವಾಗಿರುತ್ತದೆ ಇದನ್ನು ಅರ್ಥೈಸಿಕೊಂಡು ಈ ಹಬ್ಬಗಳ ಆಚರಣೆಗೆ ಮುಂದಾಗಿರುವ ಎಲ್ಲ ಸದಸ್ಯರುಗಳು ಅರ್ಥೈಸಿಕೊಂಡು ನಡೆದರೆ ಅದಕ್ಕೆ ಒಂದು ಮಹತ್ವ ಬರುತ್ತದೆ ಎಂದರು. ಸಭೆಗಳನ್ನು ಕರೆದು ಶಾಂತಿ ಭಾವನೆ ಮೂಡಿಸುವ ಕಾರ್ಯಕ್ಕೆ ಮುಂದಾಗಿರುವದು ಎಲ್ಲರ ಹಿತದೃಷ್ಠಿಯ ಕಾರ್ಯ ಇದಾಗಿದೆ ಎಂದು ಹೇಳಿದ ಅವರು ಒಟ್ಟಿನಲ್ಲಿ ಈ ಎರಡೂ ಹಬ್ಬಗಳಲ್ಲಿ ಶಾಂತಿ ಸಮಿತಿಯ ಸದಸ್ಯರುಗಳು ಹಾಗೂ ಹಬ್ಬ ಆಚರಣೆಗೆ ಮುಂದಾಗಿರುವ ಮಂಡಳಿಯವರು ಶಾಂತಿ ಮತ್ತು ಸೌಹಾರ್ದತೆ ಭಾವನೆ ಮೂಡಿಸುವ ಕಾರ್ಯಕ್ಕೆ ಮುಂದಾಗಬೇಕೆಂದು ಸಲಹೆ ನೀಡಿದರು. ಇದೇ ಸಮಯದಲ್ಲಿ ಪುರಸಭೆ ಆರೋಗ್ಯ ಅಧಿಕಾರಿ ಫೀರೋಜ ಮುಲ್ಲಾ, ಪ್ರಭುಗೌಡ ಮದರಕಲ್ಲ, ರಾಘವೇಂದ್ರ ವಿಜಾಪೂರ, ಹುಸೇನ ಪಟೇಲ, ಜೈಸಿಂಗ್ ಮೂಲಿಮನಿ ಅವರು ಉಪಸ್ಥಿತ ಮಂಡಳಿಯವರಿಗೆ ಹಾಗೂ ಅಧಿಕಾರಿ ವರ್ಗದವರಿಗೂ ಸಹ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಮಯದಲ್ಲಿ ಹೆಸ್ಕಾಂ ಅಧಿಕಾರಿ ಪ್ರಭುಗೌಡ ಗುರಡ್ಡಿ, ಅಗ್ನಿ ಶಾಮಕ ಠಾಣೆಯ ಅಧಿಕಾರಿ ಮಹಾಂತೇಶ ಬಿರಾದಾರ, ಹಾಗೂ ಗಣೇಶ ಉತ್ಸವ ಮತ್ತು ಈದ್ ಮೀಲಾದ್ ಆಚರಣೆ ಸಂಬಂದಿತ ಕಮಿಟಿಯವರು ಉಪಸ್ಥಿತರಿದ್ದರು.

# 8 ಕೋಟಿ 50 ಲಕ್ಷ ವೆಚ್ಚದಲ್ಲಿ ಜಿಲ್ಲಾ ಕಸಾಪ ಭವನ ನಿರ್ಮಾಣ ಬಸವ ಸಂಸ್ಕೃತಿ ಅಭಿಯಾನಕ್ಕೆ ಕಸಾಪ ಕೈಜೋಡಿಸುತ್ತಿದೆ-ವಾಲಿಕಾರ

**ತಾಳಿಕೋಟೆ,** ಸಪ್ಟಂಬರ್ 1 ರಂದು ಬಸವನ ಬಾಗೇವಾಡಿಯಿಂದ ಪ್ರಾರಂಭಗೊಳ್ಳಲಿರುವ ಬಸವ ಸಂಸ್ಕೃತಿ ಅಭಿಯಾನಕ್ಕೆ ಕನ್ನಡ ಸಾಹಿತ್ಯ ಪರಿಷತ್ತು ಕೈ ಜೋಡಿಸುವದರೊಂದಿಗೆ ಮೆರಗನ್ನು ಹೆಚ್ಚಿಸುವ ಕಾರ್ಯ ಮಾಡಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಹಾಸಿಂಪೀರಾ ವಾಲಿಕಾರ ಅವರು ಹೇಳಿದರು.

ಶುಕ್ರವಾರರಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಿದ್ದ ಅವರು ಸಪ್ಟಂಬರ್ 1 ರಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಮತ್ತು ಜಿಲ್ಲೆಯ ವಿವಿಧ ಮಠಾಧೀಶರ ನೇತೃತ್ವದಲ್ಲಿ ನಡೆಯಲಿರುವ ಈ ಬಸವ ಸಂಸ್ಕೃತಿ ಅಭಿಯಾನವು ರಾಜ್ಯದ ಉದ್ದಗಲಕ್ಕೂ ಸಂಚ- ರಿಸಲಿದೆ ಕನ್ನಡ ಸಾಹಿತ್ಯ ಪರಿಷತ್ತು ಎಲ್ಲ ಮಠಾಧೀರಶರೊಂದಿಗೆ ಎಲ್ಲ ಉತ್ಸವಗಳಲ್ಲಿ ಜಾತ್ರೆಗಳಲ್ಲಿ ತೊಡಗಿಕೊಳ್ಳುವದರೊಂದಿಗೆ ನಿಕಟವಾದ ಸಂಪರ್ಕ ಹೊಂದಿದೆ ಈ ಅಭಿಯಾನದಲ್ಲಿ ತಾಳಿಕೋಟೆಯಿಂದಲೂ ಕೂಡಾ ನೂರಾರು ಜನ ಕಸಾಪದ ಬಸವಾಭಿಮಾನಿಗಳು ಪಾಲ್ಗೊಳ್ಳಲಿದ್ದಾರೆಂದರು. ಈ ಅಭಿಯಾನದ ಮುಕ್ತಾಯ ಸಮಾರಂಭವು ಬೆಂಗಳೂರಿನ ಅರಮನೆ ಮೈಧಾನದಲ್ಲಿ ಸಚಿವರಾದ ಎಂ.ಬಿ.ಪಾಟೀಲ ಅವರ ನೇತೃತ್ವದಲ್ಲಿ ಜರುಗಲಿದೆ ವಚನ ಸಾಹಿತ್ಯ ನೀಡಿದಂತಹ 12ನೇ ಶತಮಾನದ ಶರಣರನ್ನು ನೆನೆಸುವಂತಹ ಬಸವ ಸಂಸ್ಕೃತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಲುವಾಗಿ ಈ ಅಭಿಯಾನ ಪ್ರಾರಂಭಗೊಂಡಿದೆ ಎಂದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಈಗಾಗಲೇ ಈ ವರ್ಷ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ, ಮಕ್ಕಳ ಸಾಹಿತ್ಯ ಸಮ್ಮೇಳನ, ಮಹಿಳಾ ಸಾಹಿತ್ಯ ಸಮ್ಮೇಳನ, ಮಕ್ಕಳ ಸಾಹಿತ್ಯ ಸಮ್ಮೇಳನ, ಸಾಹಿತ್ಯ ಸಮ್ಮೇಳನ ಮಾಡಲು ಕ್ರೀಯಾ ಯೋಜನೆಯನ್ನು ರೂಪಿಸಿಕೊಳ್ಳಲಾಗಿದೆ ಈಗಾಗಲೇ ನಾವು ಮಾಡಿರುವ 7 ತಾಲೂಕಾ ಸಮ್ಮೇಳನಕ್ಕೆ ಕನ್ನಡ ಸಾಹಿತ್ಯ ಪರಿಷತ್ತು ಅನುದಾನವನ್ನು ನೀಡಿರುವದಿಲ್ಲಾ ಜಿಲ್ಲಾ ಸಮ್ಮೇಳನಕ್ಕೆ 5 ಲಕ್ಷ ರೂ. ಕೊಡುತ್ತದೆ ತಾಲೂಕಾ ಸಮ್ಮೇಳನವನ್ನು ಸ್ಥಳಿಯ ಸಂಪನ್ಮೂಲ ಕ್ರೂಡಿಕರಣದಿಂದ ಮಾಡಬೇಕಾಗುತ್ತದೆ ಅದರ ಜೊತೆಗೆ ತಾಳಿಕೋಟೆ ಮತ್ತು ಆಲಮೇಲ ತಾಲೂಕಾ ಸಮ್ಮೇಳನಗಳ ಲೆಕ್ಕ ಪತ್ರ ವರಧಿ ಕೇಂದ್ರ ಮತ್ತು ಜಿಲ್ಲಾ ಕಸಾಪ ಕಚೇರಿಗೆ ತಲುಪಿದೆ ಉಳಿದ 5 ಬಸವನ ಬಾಗೇವಾಡಿ, ಮುದ್ದೇಬಿಹಾಳ, ತಿಕೋಟಾ, ದೇವರ ಹಿಪ್ಪರಗಿ, ಸಿಂಧಗಿ ತಾಲೂಕಿನ ಲೆಕ್ಕ ಪತ್ರಗಳು ಇನ್ನೂ ಮುಟ್ಟಿಲ್ಲಾ ಅದರ ಜೊತೆಗೆ ಯಾವುದೇ ತಾಲೂಕಾ ಸಮ್ಮೇಳನದಲ್ಲಿ ಉಳಿದ ಹಣ ಕೇಂದ್ರ ಸಾಹಿತ್ಯ ಪರಿಷತ್ತಿನ ಕಚೇರಿಗೆ ಜಮಾ ಮಾಡಬೇಕಾಗುತ್ತದೆ ಸ್ಥಳೀಯವಾಗಿ ಹಣ ಬೇಕಾದಾಗ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಕಚೇರಿಯಿಂದ ಬಡ್ಡಿ ಸಮೇತವಾಗಿ ನೀಡುವಂತಹ ನಿಯಮ ಸಾಹಿತ್ಯ ಪರಿಷತ್ತಿನಲ್ಲಿದೆ ಯಾವುದೇ ಹಣವನ್ನು ತಾಲೂಕಾ ಮತ್ತು ಜಿಲ್ಲಾ ಅಧ್ಯಕ್ಷರ ಬಳಿ ಇಟ್ಟುಕೊಳ್ಳುವ ಅಧಿಕಾರವಿಲ್ಲಾವೆಂದರು. ವಿಜಯಪುರದಲ್ಲಿ 79ನೇ ಅಖೀಲ ಭಾರತೀಯ ಕನ್ನಡ ಸಾಹಿತ್ಯ ಸಮ್ಮೇಳನ ನಡೆದಾಗ 2 ಕೋಟಿ 24 ಲಕ್ಷ ರೂ. ಉಳಿದಿತ್ತು ಅದೀಗ 4 ಕೋಟಿ 48 ಕೋಟಿ ರೂ. ಆಗಿದೆ ನಮ್ಮ ಕನ್ನಡ



ಭವನ ತಕ್ಷಣವೇ ಪ್ರಾರಂಭಗೊಳ್ಳಲಿದೆ 8 ಕೋಟಿ 50 ಲಕ್ಷ ರೂ. ಅಂದಾಜು ಪತ್ರಿಕೆ ತಯಾರಿಸಲಾಗಿದೆ ಈ ಪ್ರಸ್ಥಾವನೆಯನ್ನು ಸರ್ಕಾರಕ್ಕೆ ಮತ್ತು ಕನ್ನಡ ಸಾಹಿತ್ಯ ಪರಿಷತ್ತು ಕೇಂದ್ರ ಕಚೇರಿಗೆ ಕಳುಹಿಸಿದ್ದೇವೆ ವಿಜಯಪುರದ ಅಖೀಲ ಭಾರತ 79ನೇ ಕನ್ನಡ ಸಾಹಿತ್ಯ ಪರಿಷತ್ತಿನ ಹಣ ಠೇವಣಿಯಾಗಿ ಜಮೆಯಾಗಿದ್ದರಿಂದ ಆ ಹಣ ಇವತ್ತು ಭವನದ ಕಟ್ಟಡಕ್ಕೆ ಬಳಕೆ ಮಾಡುವಂತಹ ಸಂದರ್ಬ ಬಂದಿದೆ ಎಂದರು. ಪ್ರತಿ ತಾಲೂಕಿಗೆ 5 ಸಮ್ಮೇಳನಗಳನ್ನು ನೀಡಿದ್ದಾರೆ ಬಹಳಷ್ಟು ಜನ ಕ್ರೀಯಾ ಶೀಲಾ ಅಧ್ಯಕ್ಷರು ಅನೇಕ ಕಾರ್ಯಕ್ರಮ ಮಾಡುತ್ತೇವೆಂಬ ಹಂಬಲ ಆಸೆ ಇಟ್ಟುಕೊಂಡಿದ್ದಾರೆ ಕಸಾಪ ಮನೆ ಮನೆಗೆ ಜಾತ್ರೆ ಜಾತ್ರೆಗಳಲ್ಲಿ ವೀರಕ್ತಮಠಗಳಲ್ಲಿ ಮಾಡುತ್ತೇವೆಂದು ಹೇಳಿದ ಅವರು ಸಮ್ಮೇಳನ ಮಾಡುವಲ್ಲಿ ಅನೇಕ ಸವಾಲುಗಳನ್ನು ಎದು- ರಿಸಬೇಕಾಗುತ್ತದೆ ಅಂತಹದ್ದರಲ್ಲಿಯೂ ಸಮ್ಮೇಳನಗಳನ್ನು ಮಾಡಿ ವಿಜಯಪುರ ಜಿಲ್ಲೆ ರಾಜ್ಯದಲ್ಲಿಯೇ ದ್ವಿತೀಯ ಸ್ಥಾನ ಪಡೆದುಕೊಂಡಿದೆ ಎಂದರು. ಇನ್ನೂ ಜಿಲ್ಲೆಯ ಕೆಲವು ತಾಲೂಕಿನ ಅಧ್ಯಕ್ಷರುಗಳು ಸಮ್ಮೇಳನವನ್ನು ಏರ್ಪಡಿಸದಿರುವದು ಅತ್ಯಂತ ಖೇದಕರ ಸಂಗತಿಯಾಗಿದೆ ಮಾಡುವ ಹಂತದಲ್ಲಿದ್ದಾರೆ ಸಮಯವನ್ನು ಕೊಡಬೇಕಾಗುತ್ತದೆ ಕಸಾಪದಲ್ಲಿಯ ಹುದ್ದೆ ಅಧಿಕಾರದ ಮತ್ತು ಅಲಂಕಾರಿಕ ಹುದ್ದೆ ಅಲ್ಲಾ ಅದೊಂದು ಸೇವಾ ಹುದ್ದೆಯಾಗಿದೆ ಈ ವಿಷಯವನ್ನು ಎಲ್ಲ ಅಧ್ಯಕ್ಷರು ಅರ್ಥ ಮಾಡಿಕೊಳ್ಳಬೇಕೆಂದರು. ಸಪ್ಟಂಬರ್ 1 ರಂದು ಬಸವನ ಬಾಗೇವಾಡಿಯಿಂದ ಪ್ರಾರಂಭಗೊಳ್ಳಲಿರುವ ಬಸವ ಸಂಸ್ಕೃತಿ ಅಭಿಯಾನದ ಯಾತ್ರೆಗೆ ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಭಾಗವಹಿಸಿ ಈ ಯಾತ್ರೆಯ ಯಶಸ್ವಿಗೆ ಸಹಕ- ರಿಸಬೇಕೆಂದು ಮನವಿ ಮಾಡಿದರು.

ಇನ್ಸ್ಪೋರ್ವ ಕಸಾಪ ತಾಳಿಕೋಟೆ ತಾಲೂಕಾ ಅಧ್ಯಕ್ಷ ಆರ್.ಎಲ್.ಕೊಪ್ಪದ ಅವರು ಮಾತನಾಡಿ ಸಪ್ಟಂಬರ್ 1 ರಂದು ಬಸವನ ಬಾಗೇವಾಡಿಯಿಂದ ಪ್ರಾರಂಭಗೊಳ್ಳಲಿರುವ ಬಸವ ಸಂಸ್ಕೃತಿ ಅಭಿಯಾನದ ಯಾತ್ರೆಗೆ ತಾಳಿಕೋಟೆ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಸಂಪೂರ್ಣವಾಗಿ ಭಾಗವಹಿಸುವದರೊಂದಿಗೆ ಸಂಪೂರ್ಣವಾಗಿ ಕೈಜೋಡಿಸಲಿದೆ ನಾಡಿನ ಸಾಂಸ್ಕೃತಿಕ ಅನಾವರಣ ಮಾಡಿದ ಬಸವಣ್ಣವರ ಈ ಅಭಿಯಾನದ ಯಾತ್ರೆ ಯಶಸ್ವಿಗೆ ತನು, ಮನ, ಧನದಿಂದ ಕೈಜೋಡಿಸುತ್ತೇವೆಂದರು.

ಈ ಸಮಯದಲ್ಲಿ ಕಸಾಪ ತಾಲೂಕಾ ಸಂಘಟನಾ ಕಾರ್ಯದರ್ಶಿ ಜೈಭೀಮ ಮುತ್ತಗಿ, ರಾಜು ಹಂಚಾಟೆ, ತಾಲೂಕಾ ಕಸಾಪ ಮಾಧ್ಯಮ ಪ್ರತಿನಿಧಿ ಅಂಬಾಜಿ ಘೋರ್ಪಡೆ, ಶಶಿ, ಮೊದಲಾದವರು ಉಪಸ್ಥಿತರಿದ್ದರು.

# ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಆಚರಣೆ ಶಾಂತಿಯುತವಾಗಿರಲಿ : ಜಿಲ್ಲಾಧಿಕಾರಿ



**ಕಾರವಾರ,** : ಜಿಲ್ಲೆಯಲ್ಲಿ ಆಗಸ್ಟ್ 27 ರಂದು ಆಚರಿಸುವ ಗಣೇಶ ಚತುರ್ಥಿ ಹಬ್ಬ ಮತ್ತು ಸೆಪ್ಟಂಬರ್ 5 ರ ಈದ್ ಮಿಲಾದ್ ಹಬ್ಬವನ್ನು ಶಾಂತಿ ಮತ್ತು ಸೌಹಾರ್ದಯುತವಾಗಿ ಹಾಗೂ ಪರಿಸರ ಸ್ನೇಹಿಯಾಗಿ ಆಚರಣೆ ಮಾಡುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದರು.

ಅವರು ಶನಿವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ , ಎಲ್ಲಾ ಸಮುದಾಯ ಮುಖಂಡರೊಂದಿಗೆ ಆಯೋಜಿಸಿದ್ದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವಾಗ ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಮಾತ್ರ ಪ್ರತಿಷ್ಠಾಪಿಸಬೇಕು, ಪಿಓಪಿ ಮತ್ತು ರಾಸಾಯನಿಕ ಬಣ್ಣಗಳನ್ನು ಬಳಸಿರುವ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಅವಕಾಶವಿಲ್ಲ, ಗಣೇಶ ಪ್ರತಿಷ್ಠಾಪನೆ ಸ್ಥಳದಲ್ಲಿ ಮತ್ತು ವಿಸರ್ಜನೆ ಸಮಯದಲ್ಲಿ ಯಾವುದೇ ರೀತಿಯ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆ ಆಗದಂತೆ ನೋಡಿಕೊಳ್ಳಬೇಕು, ಪೆಂಡಾಲ್‌ಗಳ ನಿರ್ಮಾಣ ಮತ್ತು ಅಲಂಕಾರದಲ್ಲಿಯೂ ಪ್ಲಾಸ್ಟಿಕ್ ಬಳಕೆ ಮಾಡಬಾರದು ಎಂದರು.

ಗಣೇಶ ವಿಸರ್ಜನೆ ಸಂದರ್ಭದಲ್ಲಿ ಮತ್ತು ಪ್ರತಿಷ್ಠಾಪನೆ ಪ್ರದೇಶದಲ್ಲಿ ವಿದ್ಯುತ್ ಲೈನ್‌ಗಳ ಸಂಪರ್ಕದಿಂದ ಯಾವುದೇ ಅನಾಹುತಗಳಾಗದಂತೆ ಹೆಸ್ಕಾಂ ವತಿಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕ-ರಿಗೆ ಪ್ರಸಾದದ ರೂಪದಲ್ಲಿ ವಿತರಿಸುವ ಆಹಾರ ಪದಾರ್ಥಗಳ ಬಗ್ಗೆ ಆಯೋಜಕರು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು. ಗಣೇಶ ಮೂರ್ತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳು ಗುರುತಿಸಿರುವ ಸ್ಥಳದಲ್ಲಿಯೇ ವಿಸರ್ಜನೆ ಮಾಡಬೇಕು, ಆ ಪ್ರದೇಶದಲ್ಲಿ ತ್ಯಾಜ್ಯ ಉತ್ಪತ್ತಿಯಾಗದಂತೆ ಸ್ಥಳೀಯಾಡಳಿತಗಳು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳಬೇಕು, ಗಣೇಶ ಪ್ರತಿಷ್ಠಾಪನೆಗೆ ಅನುಮತಿ ನೀಡುವಾಗ ಸಿಂಗಲ್ ವಿಂಡೋ ವ್ಯವಸ್ಥೆಯಡಿ ಎಲ್ಲಾ ಅಗತ್ಯ ಅನುಮತಿಗಳನ್ನು ಪಡೆಯುವಂತೆ ತಿಳಿಸಿದರು.

ನಿಗಧಿಗಿಂತ ಹೆಚ್ಚು ಶಬ್ದ ಮಾಡುವ ಧ್ವನಿವರ್ಧಕಗಳನ್ನು ಬಳಸುವಂತಿಲ್ಲ, ಸುಪ್ರೀಂ ಕೋರ್ಟ್ ನ ಸೂಚನೆಯಂತೆ ಡಿಜೆಗಳ ಬಳಕೆಯನ್ನು ಮಾಡುವಂತಿಲ್ಲ ಆಸ್ಪತ್ರೆ, ಶಾಲೆ, ನ್ಯಾಯಾಲಯ ಇರುವ ಪ್ರದೇಶದಲ್ಲಿ ಧ್ವನಿವರ್ಧಕ ಬಳಸಬಾರದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಮುನ್ನೆಚ್ಚರಿಕೆ ಕ್ರಮವಾಗಿ ಮೆರವಣಿಗೆ ಸಂದರ್ಭದಲ್ಲಿ ಮದ್ಯದಂಗಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲಾಗುವುದು, ಸಾರ್ವಜನಿಕರು ಯಾವುದೇ ಸಮಸ್ಯೆಗಳಿದ್ದಲ್ಲಿ ಜಿಲ್ಲಾಧಿಕಾರಿ ಕಚೇರಿ ಕಂಟ್ರೋಲ್ ರೂಂ 9483511015 ಮತ್ತು ಪೊಲೀಸ್ ಸಹಾಯವಾಣಿ 112 ನ್ನು 24*7 ಸಂಪರ್ಕಿಸಬಹುದು ಎಂದರು.

ಗಣೇಶ ಪ್ರತಿಷ್ಠಾಪನೆ ಸ್ಥಳದಲ್ಲಿ ಸಿಸಿಟಿವಿ ಅಳವಡಿಸಬೇಕು, ಬೆಂಕಿ ಅವಗಡಗಳು ಸಂಭವಿಸಿದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು, ಪೆಂಡಾಲ್‌ಗಳ ಬಳಿ ಸ್ವಯಂ ಸೇವಕರನ್ನು ನಿಯೋಜಿಸಬೇಕು, ಪೊಲೀಸ್ ಇಲಾಖೆಯ ಮಾರ್ಗಸೂಚಿಯಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕೈಗೊಳ್ಳಬೇಕು. ಯಾವುದೇ ಹಂತದಲ್ಲೂ ಕಾನೂನು ಉಲ್ಲಂಘನೆ ಮತ್ತು ಶಾಂತಿ ಸುವ್ಯವಸ್ಥೆಗೆ ತೊಂದರೆ ಆಗದಂತೆ ಶಾಂತಿಯುತವಾಗಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಅಚರಣೆ ಮಾಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ತಿಳಿಸಿದರು.

ಸಭೆಯಲ್ಲಿ ಡಿಜೆಗಳ ಬಳಕೆಯ ಪರ ಮತ್ತು ವಿರೋಧದ ಕುರಿತಂತೆ ವಿಸ್ತೃತ ಚರ್ಚೆ ನಡೆಯಿತು.

ಸಭೆಯಲ್ಲಿ ನಗರಸಭೆ ಅಧ್ಯಕ್ಷ ರವಿರಾಜ್ ಅಂಕೋಲೆಕರ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಪ್ರೊಬೇಷನರಿ ಐ.ಎ.ಎಸ್ ಅಧಿಕಾರಿ ಜುಫಿಶಾನ್ ಹಕ್, ಎ.ಎಸ್ಪಿಗಳಾದ ಕೃಷ್ಣಮೂರ್ತಿ, ದೇವರಾಜ್ , ಜಿಲ್ಲಾ ಪರಿಸರ ಅಧಿಕಾರಿ ಸಂತೋಷ್ ಹಾಗೂ ವಿವಿಧ ಇಲಾಖಾಧಿಕಾರಿಗಳು ಮತ್ತು ಜಿಲ್ಲೆಯ ಎಲ್ಲಾ ಭಾಗಗಳಿಂದ ಆಗಮಿಸಿದ್ದ ಸಮುದಾಯದ ಮುಖಂಡರು ಹಾಗೂ ಪ್ರತಿನಿಧಿಗಳು ಇದ್ದರು.

# ಉಕ್ಕಲಿ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ

## ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ

**ವಿಜಯಪುರ** : ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ತಾಲೂಕಾ ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕಾ ಆಡಳಿತ ಬಸವನಬಾಗೇವಾಡಿ ಇವರ ಸಂಯುಕ್ತಾಶ್ರಯದಲ್ಲಿ ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಂದು ಮಧ್ಯಾಹ್ನ 5-00 ಗಂಟೆಗೆ ಬಸವನಬಾಗೇವಾಡಿ ತಾಲೂಕಿನ ಉಕ್ಕಲಿ ಗ್ರಾಮ ಪಂಚಾಯತ್ ಸಭಾ ಭವನದಲ್ಲಿ ಅಭಿಯಾನವನ್ನು ಜಿಲ್ಲಾ ನ್ಯಾಯಾಧೀಶರು ಹಾಗೂ ಕಲಬುರ್ಗಿ ಖಾಯಂ ಜನತಾ ನ್ಯಾಯಾಲಯ ಅಧ್ಯಕ್ಷರಾದ ನ್ಯಾಯಾಧೀಶ ಎಸ್.ಎಲ್.ಚವ್ಹಾಣ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವನಬಾಗೇವಾಡಿ ತಾಲೂಕಿನ ಉಕ್ಕಲಿ ಗ್ರಾಮ ಪಂಚಾಯತ್ ಅಧ್ಯಕ್ಷ ನಿಂಗೊಂಡ ಸಿಂದಗಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ, ಹಿರಿಯ ಸಿವಿಲ್ ನ್ಯಾಯಾಧೀಶ ಶಶಿಧರ ಎಂ.ಗೌಡ, ಕಲಬುರಗಿ ಖಾಯಂ ಜನತಾ ನ್ಯಾಯಾಲಯದ ಸದಸ್ಯರಾದ ನ್ಯಾಯಾಧೀಶ ವಿಜಯ ವಿಠ್ಠಲ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ ಮುಸಲ್ಮಾರಿ, ಸಿವಿಲ್ ನ್ಯಾಯಾಧೀಶರಾದ ಅಮಿತ ಘಟ್ಟಿ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈರಪ್ಪ ಢವಳೇಶ್ವರ, ಬಾಗೇವಾಡಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ ದೇಸಾಯಿ, ಡಿವೈಎಸ್‌ಪಿ ಬಲ್ಲಪ್ಪ ನಂದಗಾಂವಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಬಿ.ಸಿದ್ದಯ್ಯ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿಗಳು ಹಾಗೂ ಮಧ್ಯಸ್ಥಗಾರರಾದ ವಿ.ಬಿ.ಮರ್ತುರ ಹಾಗೂ ನ್ಯಾಯವಾದಿ ಶ್ರೀಮತಿ ಪಿ.ಬಿ.ಪತ್ತಾರ ಅತಿಥಿ ಉಪನ್ಯಾಸಕರಾಗಿ ಭಾಗವಹಿಸಲಿದ್ದಾರೆ.

****

# ಹೆಚ್.ಐ.ವಿ. ಮತ್ತು ಏಡ್ಸ್ ಅರಿವು: ಆ. 30 ರಂದು ಜಿಲ್ಲಾ ಮಟ್ಟದ ಬೈಕ್ ರ್‍ಯಾಲಿ

**ಕೊಪ್ಪಳ** : ಇನ್ಟೆಂನ್ಸಿಫೈಯ್ಡ್ ಐ.ಇ.ಸಿ ಕ್ಯಾಂಪಿಂಗ್ ಅಂಗವಾಗಿ ಕೊಪ್ಪಳ ಜಿಲ್ಲಾ ಮಟ್ಟದ ಬೈಕ್ ರ್‍ಯಾಲಿಯನ್ನು ಆ. 30 ರಂದು ಹಮ್ಮಿಕೊಳ್ಳಲಾಗಿದೆ.

ರಾಜ್ಯಾದ್ಯಂತ 2 ತಿಂಗಳ ಇನ್ಟೆಂನ್ಸಿಫೈಯ್ಡ್ ಐ.ಇ.ಸಿ ಕ್ಯಾಂಪಿಂಗ್ ಅನ್ನು ಆಗಸ್ಟ 12ರ "ಅಂತರಾಷ್ಟ್ರೀಯ ಯುವ ದಿನಾಚರಣೆ" ಯಂದು ಚಾಲನೆ ನೀಡಿದ್ದು, ವಿವಿಧ ಮಾಧ್ಯಮಗಳ ಮೂಲಕ ಜನರಲ್ಲಿ ಹೆಚ್.ಐ.ವಿ. ಮತ್ತು ಏಡ್ಸ್ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಅದರ ಅಂಗವಾಗಿ ಕೊಪ್ಪಳದಲ್ಲಿ ಜಿಲ್ಲಾ ಮಟ್ಟದ ಬೈಕ್ ರ್‍ಯಾಲಿ ಏರ್ಪಡಿಸಲಾಗಿದೆ.

ಕಾಲೇಜು ವಿದ್ಯಾರ್ಥಿಗಳು, ಡ್ಯಾಪ್ಕೋ ಸಿಬ್ಬಂದಿಗಳು, ಎನ್.ಜಿ.ಓ., ಟಿ.ಐ. ಸಿ.ಬಿ.ಓ ಸೇರಿದಂತೆ ಸಾರ್ವಜನಿಕರು ಸೇರಿ ಹೆಚ್.ಐ.ವಿ., ಏಡ್ಸ್ ಹಾಗೂ ಎಸ್.ಟಿ.ಐ, ಬಗ್ಗೆ ಅರಿವು ಮೂಡಿಸಲು ಫ್ಲೆಕಾರ್ಡ್ಸ್, ಬ್ಯಾನರ್‌ಗಳ ಸಮೇತ ಬೈಕ್ ರ್‍ಯಾಲಿಯನ್ನು ಕೊಪ್ಪಳ ಜಿಲ್ಲಾಧಿಕಾ-ರಿಗಳ ಕಾರ್ಯಾಲಯದಿಂದ ಗಂಜ್ ಸರ್ಕಲ್, ಅಶೋಕ ಸರ್ಕಲ್, ಬಸ್‌ಸ್ಟ್ಯಾಂಡ್ ಮಾರ್ಗವಾಗಿ ಲೇಬರ್ ಸರ್ಕಲ್ ಮುಖಾಂತರ ಗಡಿಯಾರ ಕಂಬ ಹಾಗೂ ಶ್ರೀ ಗವಿಸಿದ್ದೇಶ್ವರ ಪದವಿ ಮಹಾವಿದ್ಯಾಲಯದಿಂದ ಪುನಃ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ತಲುಪಲಿದೆ.

ಈ ಬೈಕ್ ರ್‍ಯಾಲಿಯಲ್ಲಿ ಭಾಗವಹಿಸುವವರು 18 ವರ್ಷ ಮೇಲ್ಪಟ್ಟವರಾಗಿರಬೇಕು. ಚಾಲ್ತಿಯಲ್ಲಿರುವ ವಾಹನ ಪರವಾನಗಿ ಹೊಂದಿರಬೇಕು. ಸಂಚಾರಿ ವಾಹನ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಯಾವುದೇ ನಿಯಮ ಉಲ್ಲಂಘನೆಯಾದಲ್ಲಿ ತಾವೇ ನೇರ ಜವಬ್ದಾರರಾಗಿರುತ್ತೀರಿ. ಇಂಧನ ಅಥವಾ ಇತರೆ ಯಾವುದೇ ವೆಚ್ಚವನ್ನು ಜಿಲ್ಲಾ ಏಡ್ಸ್ ನಿಯಂತ್ರಣಾ ಕಛೇರಿಯಿಂದ ಭರಿಸಲಾಗುವುದಿಲ್ಲ. ರ್‍ಯಾಲಿಯಲ್ಲಿ ಭಾಗವಹಿಸುವಿಕೆಯು ಸಂಪೂರ್ಣವಾಗಿ ಸ್ವ-ಇಚ್ಛೆಯಿಂದ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಆಗಿದ್ದು, ಈ "ಬೈಕ್ ರ್‍ಯಾಲಿ" ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕೊಪ್ಪಳ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗ ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮೇಲ್ವಿಚಾರಕ ಮಾಲತೇಶ್ ಎಂ. ಸಜ್ಜನರ್ ಮೊ.ಸಂ: 9449846981, ಕೊಪ್ಪಳ ಜಿಲ್ಲಾ ಆಪ್ತ ಸಮಾಲೋಚಕ ಕೃಷ್ಣ ಸಾಲ್ಮನಿ ಮೊ.ಸಂ: 9035112509, ಗಂಗಾವತಿ ಉಪವಿಭಾಗ ಆಸ್ಪತ್ರೆಯ ಆಪ್ತಸಮಾಲೋಚಕ ಶಿವಾನಂದ ಮೊ.ಸಂ: 9380806166, ಕಾರಟಗಿ ಸಮುದಾಯ ಆರೋಗ್ಯ ಕೇಂದ್ರದ ಆಪ್ತಸಮಾಲೋಚಕ ಹನುಮಂತಪ್ಪ ಮೊ.ಸಂ: 9986435505, ಕನಕಗಿರಿ ಸಮುದಾಯ ಆರೋಗ್ಯ ಕೇಂದ್ರದ ಆಪ್ತಸಮಾಲೋಚಕ ಸಿದ್ದರಾಮಪ್ಪ ದೂರವಾಣಿ ಮೊ.ಸಂ: 9972038094, ಕುಷ್ಟಗಿ ಸಾರ್ವಜನಿಕ ಆಸ್ಪತ್ರೆಯ ಆಪ್ತ ಸಮಾಲೋಚಕ ಚನ್ನಬಸಪ್ಪ ಮೊ.ಸಂ: 7259571355, ಮಂಗಳೂರು ಸಮುದಾಯ ಆರೋಗ್ಯ ಕೇಂದ್ರದ ಆಪ್ತಸಮಾಲೋಚಕ ಅಮರೇಶ ಮೊ.ಸಂ: 9591355153 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳ ಕಛೇರಿಯ ಪ್ರಕಟಣೆ ತಿಳಿಸಿದೆ.

# ಆ. 26 ರಂದು ಶ್ರೀ ಕ್ಷೇತ್ರ ಹುಲಿಗಿಯಲ್ಲಿ ತುಂಗಭದ್ರ ಆರತಿ ಮಹೋತ್ಸವ

**ಕೊಪ್ಪಳ** : ಹಿಂದೂ ಧಾರ್ಮಿಕ ದತ್ತಿ ಇಲಾಖೆ, ಕೊಪ್ಪಳ ಜಿಲ್ಲಾಡಳಿತ ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಶ್ರೀ ಕ್ಷೇತ್ರ ಹುಲಿಗಿಯಲ್ಲಿ ತುಂಗಭದ್ರ ಆರತಿ ಮಹೋತ್ಸವ ಬಾಗಿನ ಸಮರ್ಪಣೆ ಕಾರ್ಯಕ್ರಮವನ್ನು ಆ. 26 ರಂದು ಸಂಜೆ 6.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ತುಂಗಭದ್ರ ಆರತಿ ಮಹೋತ್ಸವ ನಿಮಿತ್ತ ಆ. 24ರ ರವಿವಾರ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಗಣಪತಿ ಹೋಮ, ಆ. 25ರ ಸೋಮವಾರ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಮೃತ್ಯುಂಜಯ ಹೋಮ ನಡೆಯಲಿದೆ. ಆ. 26ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಚಂಡಿಕಾ ಹೋಮ, ನಂತರ ಮಧ್ಯಾಹ್ನ 12.30 ರಿಂದ 3 ಗಂಟೆಯವರೆಗೆ ಭಕ್ತರಿಗೆ ವಿಶೇಷ ಅನ್ನ ಸಂತರ್ಪಣೆ, ಸಂಜೆ 4 ರಿಂದ 5.30 ರವರೆಗೆ ಮಾಹಿಳೆಯರಿಂದ ಕುಂಭ ಮೆರೆವಣಿಗೆ, ಸಂಜೆ 5.30 ರಿಂದ 6 ಗಂಟೆಯವರೆಗೆ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಮತ್ತು ಸಂಜೆ 5.30 ರಿಂದ 6.30 ಗಂಟೆಯವರೆಗೆ ನದಿ ತಟದ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಾಲಯವು ಪ್ರಕಟಣೆಯಲ್ಲಿ ತಿಳಿಸಿದೆ.

### ಗಣೇಶ ಚತುರ್ಥಿ - ಈದ್ ಮಿಲಾದ್ ಹಬ್ಬದ ಶಾಂತಿ ಪಾಲನಾ ಸಭೆ

# ಹಬ್ಬಗಳನ್ನು ಶಾಂತಿ -ಸೌಹಾರ್ದತೆಯಿಂದ ಆಚರಿಸಿ- ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ

**ಕೊಪ್ಪಳ** : ಆಗಸ್ಟ್ 27 ಮತ್ತು ಸೆಪ್ಟೆಂಬರ್ 5 ರಂದು ನಡೆಯಲಿರುವ ಗೌರಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬಗಳನ್ನು ಕೊಪ್ಪಳ ಜಿಲ್ಲೆಯಲ್ಲಿ ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಣೆ ಮಾಡಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗೌರಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಶಾಂತಿ ಪಾಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ನಮ್ಮ ದೇಶವು ಶಾಂತಿಗೆ ಹೆಸರಾಗಿದೆ. ನಾವೆಲ್ಲರೂ ವಿವಿಧ ಜಾತಿ ಧರ್ಮದವರಾಗಿದ್ದರು ಪರಸ್ಪರ ಸಹೋದರರಂತೆ ಇಲ್ಲಿ ಬಾಳುತ್ತಿದ್ದೇವೆ. ಹೀಗಾಗಿ ಗೌರಿ ಗಣೇಶ ಚತುರ್ಥಿ ಮತ್ತು ಈದ್ ಮಿಲಾದ್, ಈ ಎರಡು ಹಬ್ಬಗಳನ್ನು ಎಲ್ಲರೂ ಸೇರಿ ಶಾಂತಿ ಸೌಹಾರ್ದತೆಯಿಂದ ಜಿಲ್ಲೆಯಲ್ಲಿ ಆಚರಿಸಬೇಕು ಎಂದರು.

ಪಿಓಪಿ ಗಣೇಶ ಮೂರ್ತಿಗಳು ನಿಷೇಧವಾಗಿ ಬಹಳಷ್ಟು ವರ್ಷಗಳಾಗಿದ್ದು, ಆದಾಗ್ಯೂ ಕೂಡ ಕೆಲವು ಕಡೆ ಪಿಓಪಿ ಗಣೇಶ ವಿಗ್ರಹಗಳ ಪ್ರತಿಷ್ಠಾಪನೆ ಮಾಡುವುದು ಕಂಡುಬರುತ್ತದೆ. ಈ ವರ್ಷ ಎಲ್ಲರೂ ಕಡ್ಡಾಯವಾಗಿ ಪರಿಸರ ಸ್ನೇಹಿ ಹಾಗೂ ಮಣ್ಣಿನಿಂದ ಮಾಡಿದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವ ಮೂಲಕ ಗಣೇಶ ಚತುರ್ಥಿಯನ್ನು ಅರ್ಥ-ಪೂರ್ಣವಾಗಿ ಆಚರಣೆ ಮಾಡಬೇಕು. ಪಿಓಪಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿರುವುದು ಕಂಡುಬಂದರೆ, ಅವುಗಳನ್ನು ಪಶಪಿಡಿಸಿಕೊಳ್ಳುವಂತೆ ಪರಿಸರ ಇಲಾಖೆ, ಮಾಲಿನ್ಯ ನಿಯಂತ್ರಣ ಮಂಡಳಿ, ನಗರ ಸ್ಥಳೀಯ ಸಂಸ್ಥೆಗಳ ಅಧಿಕಾ-ರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ.



ಜಿಲ್ಲೆಯಲ್ಲಿ ಸುಮಾರು 800 ಕ್ಕಿಂತಲು ಹೆಚ್ಚಿನ ಕಡೆಗಳಲ್ಲಿ ಸಿಸಿಟಿವಿ ಅಳವಡಿಸಲಾಗಿದೆ. ರಸ್ತೆಗಳ ದುರಸ್ಥಿಗೂ ಸಹ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದರು.

ರಸ್ತೆಗಳಲ್ಲಿ ಸಾರ್ವಜನಿಕ-ರಿಗೆ ತೊಂದರೆಯಾಗುವಂತೆ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮತ್ತು ಪೆಂಡಾಲ್ ಹಾಕುವುದನ್ನು ಮಾಡಬಾರದು. ಜನರು ಹೆಚ್ಚಿನ ಸಂಖ್ಯೆಯಲ್ಲಿ ಓಡಾಡುವ ರಸ್ತೆಗಳಲ್ಲಿ ಪೆಂಡಾಲ್ ಹಾಕಿ ಸಾರ್ವಜನಿಕರ ಓಡಾಟಕ್ಕೆ ಮತ್ತು ಅಂಬ್ಯುಲೆನ್ಸ್, ಅಗ್ನಿ ಶಾಮಕ ವಾಹನಗಳ ಓಡಾಟಕ್ಕೆ ತೊಂದರೆ ಮಾಡಲು ಸಹ ಅವಕಾಶವಿರುವುದಿಲ್ಲ. ಹಬ್ಬಗಳನ್ನು ಸಂಭ್ರಮದಿಂದ ಆಚರಣೆ ಮಾಡುವ ಸಂದರ್ಭದಲ್ಲಿ ಕೋಮು ಸೌಹಾರ್ದತೆಗೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು. ಜಿಲ್ಲೆಯಲ್ಲಿ ಸಾಮಾಜಿಕ ಜಾಲತಾಣಗಳ ಬಗ್ಗೆಯೂ ತೀವ್ರ ನಿಗಾವಹಿಸಲಾಗುತ್ತಿದ್ದು, ಸಾಮಾಜಿಕ ಮಾಧ್ಯಮಗಳಲ್ಲಿ ಕೋಮು ಸೌಹಾರ್ಧತೆಗೆ ಧಕ್ಕೆ ಉಂಟು ಮಾಡುವ ಯಾವುದೇ ಸಂದೇಶಗಳನ್ನು ಹಾಕಬಾರದು. ಹಾಗೇನಾದರು ಮಾಡಿದರೆ ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಿಸಿದ್ದಿ ಅವರು ಮಾತನಾಡಿ, ಗೌರಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಪ್ರಯುಕ್ತ ಈಗಾಗಲೇ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ಶಾಂತಿ ಸಭೆಗಳನ್ನು ಕೈಗೊಳ್ಳಲಾಗಿದ್ದು, ಅವಶ್ಯವಿದ್ದಲ್ಲಿ ಇನ್ನೂ ಸಭೆಗಳನ್ನು ಕೈಗೊಳ್ಳಲಾಗುವುದು. ಕಳೆದ ಬಾರಿಯೂ ಈ ಎರಡು ಹಬ್ಬಗಳನ್ನು ಜಿಲ್ಲೆಯಲ್ಲಿ ಯಾವುದೇ ಸಮಸ್ಯೆಗಳಾದಂತೆ ಶಾಂತಿಯುತವಾಗಿ ಆಚರಣೆ ಮಾಡಲಾಗಿದೆ. ಅದೇ ರೀತಿ ಈ ವರ್ಷವು ಈ ಹಬ್ಬಗಳನ್ನು ಶಾಂತಿ ಮತ್ತು ಸೌಹಾರ್ಧತೆಯಿಂದ ಆಚರಿಸಬೇಕು ಎಂದು ಹೇಳಿದರು.

ಗಣೇಶ ಪ್ರತಿಷ್ಠಾಪನೆಗೆ ಅಗತ್ಯವಿರುವ ಎಲ್ಲಾ ರಿತಿಯ ಪರವಾನಿಗೆಗಳನ್ನು ಪಡೆಯಬೇಕು. ಗಣೇಶ ಪ್ರತಿಷ್ಠಾಪನೆ ಪೆಂಡಾಲ್‌ಗಳಲ್ಲಿ ಅಗ್ನಿನಂದಕಗಳನ್ನು ಬಳಕೆ ಮಾಡಬೇಕು. ಸಿಸಿ ಟಿವಿ ಕ್ಯಾಮೆರಾ ಅಳವಡಿಸಬೇಕು. ಸಾರ್ವಜನಿಕರ ಪ್ರವೇಶ ಮತ್ತು ನಿರ್ಗಮನಕ್ಕೆ ಪ್ರತ್ಯೇಕ ದ್ವಾರ ಮಾರ್ಗ ನಿರ್ಮಿಸಬೇಕು. ಗಣೇಶ ಪ್ರತಿಷ್ಠಾಪಣಾ ಮಂಡಳಿಯವರು ಮೂರ್ತಿಗಳ ವಿಸರ್ಜನೆ, ಮೆರವಣಿಗೆ ಮಾಡುವ ಮಾರ್ಗಗಳ ಮಹಿತಿಯನ್ನು ಮುಂಚಿತವಾಗಿ ಸಂಬಂಧಪಟ್ಟ ಆಯಾ ಪೊಲೀಸ್ ಠಾಣೆಗೆ ತಿಳಿಸಿ ಕಡ್ಡಾಯವಾಗಿ ಪರವಾನಿಗೆಯನ್ನು ಪಡೆದುಕೊಳ್ಳಬೇಕು. ಪರವಾನಿಗೆ ಪಡೆದ ಮಾರ್ಗವನ್ನು ಯಾವುದೇ ಕಾರಣಕ್ಕೂ ಬದಲಾವಣೆ ಮಾಡುವಂತಿಲ್ಲ. ಗಣೇಶ ಮೂರ್ತಿಯ ಪ್ರತಿಷ್ಠಾಪನೆ, ಮೆರವಣಿಗೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಎಲ್ಲರೂ ಶಾಂತಿ, ಸಂಯಮದಿಂದ ವರ್ತಿಸುವ ಮೂಲಕ ಕಾನೂನು ಸುವ್ಯವಸ್ಥೆ ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಕೋಮು ಗಲಭೆಗೆ ಧಕ್ಕೆ ತರುವಂತಹ ಯಾವುದೇ ಫೋಟೋ, ವಿಡಿಯೋಗಳನ್ನು ಹಾಕುವುದು, ಲೈಕ್, ಕಮೆಂಟ್ ಮಾಡುವುದು ಮತ್ತು ವಿಡಿಯೋ ಫಾರ್ವಡ್ ಮಾಡುವುದು ಸಹ ಅಪರಾಧವಾಗಿದ್ದು, ಅಂತಹವರ ವಿರುದ್ಧ ಪ್ರಕರಣ ಧಾಖಲಿಸಲಾಗುವುದು. ಹಾಗಾಗಿ ಯುವಕರು ಜಾಗರುಕವಾಗಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳನ್ನು ಶಾಂತಿಯುತವಾಗಿ ಆಚರಿಸಬೇಕು ಎಂದರು.

ವಿವಿಧ ಸಮಾಜದ ಮುಖಂಡರಾದ ಸೈಯದ್ ನಾಸೀರ ಹುಸೇನಿ, ಸಿದ್ದಪ್ಪ ಹಂಚಿನಾಳ, ವಸಂತಕುಮಾರ ಬಾವಿಮನಿ, ಶಾಮಿದ್ ಮನಿಯಾರ್, ಕ-ರಿಬಸಪ್ಪ ಬಿನ್ನಾಳ, ಹನುಮಂತಪ್ಪ ಹ್ಯಾಟಿ ಹಾಗೂ ಮತ್ತಿತರರು ಗಣೇಶ ಮತ್ತು ಮತ್ತು ಈದ್ ಮಿಲಾದ್, ಈ ಎರಡೂ ಹಬ್ಬಗಳ ಆಚರಣೆ ಕುರಿತು ತಮ್ಮ ಸಲಹೆಗಳನ್ನು ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ್, ಕೊಪ್ಪಳ ಉಪ ವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಕೊಪ್ಪಳ ಡಿವೈಎಸ್ಪಿ ಮುತ್ತಣ್ಣ ಸವರಗೋಳ, ಗಂಗಾವತಿ ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ ಪಾಟೀಲ ಸೇರಿದಂತೆ ತಹಶಿಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾ-ರಿಗಳು, ಪರಿಸರ, ಅರಣ್ಯ, ಪೊಲೀಸ್ ಇಲಾಖೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಜಿಲ್ಲೆಯ ವಿವಿಧ ಕಡೆಗಳಿಂದ ಆಗಮಿಸಿದ ವಿವಿಧ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ



ಪ್ರತಿವರ್ಷದಂತೆ ಈ ವರ್ಷವು ಶ್ರದ್ಧೆ ಮತ್ತು ಭಕ್ತಿಯಿಂದ ಭಾದ್ರಪದ ಮಾಸಾ ಶುಕ್ಲಪಕ್ಷ ಚತುರ್ಥಿ ಎಂದು ಗಣೇಶ ಹಬ್ಬವನ್ನು ಆಚರಿಸಲಾಗುತ್ತಿದ್ದು, ವಿದ್ಯೆ ಮತ್ತು ಜ್ಞಾನದ ಅಧಿಪತಿ ಸಂಪತ್ತು ಮತ್ತು ಅದೃಷ್ಟದ ಅಧಿನಾಯಕನಾದ ಮೋದಕ ಪ್ರಿಯ ಗಣೇಶನ ಜನನವನ್ನು ಸಾರುವ ಈ ಹಬ್ಬ ಹಿಂದುಗಳು ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ, ಪೂಜಿಸುತ್ತಾ ವಿನಾಯಕನ ಆರಾಧನೆ ಮಾಡುತ್ತಾರೆ. ಮಹಾರಾಷ್ಟ್ರದಲ್ಲಿ ಇದನ್ನು ವಿಶೇಷ ರೀತಿಯಲ್ಲಿ ಬಹು ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಶಿವ ಪಾರ್ವತಿಯರ ಮಗನಾದ ಗಣೇಶನಿಗೆ ಹಲವಾರು ಹೆಸರುಗಳಿಂದ ಕರೆಯಲಾಗುತ್ತದೆ. ಏಕದಂತ, ಮಂಗಲಮೂರ್ತಿ, ವಿಘ್ನೇಶ್ವರ, ಲಂಭೋದರ, ವಿನಾಯಕ, ಗಜಮುಖ, ಮುಷಿಕ ವಾಹನ ಸೇರಿದಂತೆ ಇತರೆ ಹಲವಾರು ಹೆಸರುಗಳಿವೆ.


ಗಣೇಶ ಹಬ್ಬವನ್ನು ಮರಾಠರು ತಮ್ಮ ಆಳ್ವಿಕೆಯಲ್ಲಿ ಉತ್ತುಂಗದ ಪ್ರಚಾರಕ್ಕೆ ತಂದರು. ಮರಾಠ ದೊರೆ ಛತ್ರಪತಿ ಶಿವಾಜಿ ಮಹಾರಾಜ ಈ ಹಬ್ಬವನ್ನು ಆಚರಣೆಗೆ ತಂದ ಎಂದು ಇತಿಹಾಸಗಳು ಹೇಳುತ್ತವೆ. ಸ್ವಾತಂತ್ರ್ಯ ಪೂರ್ವದಲ್ಲಿ ಮನೆ ಮನೆಗಳ ಹಬ್ಬವಾಗಿದ್ದ ಗಣೇಶ ಚತುರ್ಥಿಯನ್ನು ಬಾಲ ಗಂಗಾಧರ ತಿಲಕರು ಜನರಲ್ಲಿ ಸ್ವಾತಂತ್ರ್ಯದ ಕಿಚ್ಚನ್ನು ಹೊರಗೆಡುವ ಸಲುವಾಗಿ ಈ ಹಬ್ಬವನ್ನು ಪ್ರಚುರಗೊಳಿಸಿದರು. 1892 ರಲ್ಲಿ ಮಹಾರಾಷ್ಟ್ರದಲ್ಲಿ ಬಾವ ಸಾಹೇಬ್ ಲಕ್ಷ್ಮಣ ಜವೇಲ್ ಅವರು ಪ್ರಥಮವಾಗಿ ಸಾರ್ವಜನಿಕ ಗಣೇಶ ಉತ್ಸವವನ್ನು ಆಚ-ರಣೆ ಮಾಡಿದರು.

ಈ ಬಾರಿಯೂ ಸ್ವರ್ಣಗೌರಿ ಹಾಗೂ ವರಸಿದ್ದಿ ವಿನಾಯಕಚತುರ್ಥಿ ಹಬ್ಬವು ಸಮೀಪಿಸುತ್ತಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್(ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ, ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಲ್ಲಿ ವಿಸರ್ಜಿಸುವುದು ಸಂಪ್ರದಾಯವಾಗಿದ್ದು, ಇದರಿಂದಾಗಿ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿ-ಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪ-ರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಸಾರ್ವಜನಿಕರ ಆರೋಗ್ಯಕ್ಕೂ ಹಾನಿ ಉಂಟಾಗುತ್ತದೆ. ಆದ್ದರಿಂದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈ ಹಬ್ಬದ ಆಚರಣೆಯಿಂದ ನೈಸರ್ಗಿಕ ಜಲ ಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ 2016ರ ಜುಲೈ 20ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ಇನ್ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೇ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು



ನಿಷೇಧಿಸಲಾಗಿದೆ. ಸಾರ್ವಜನಿಕರು ಪರಿಸರ ಸ್ನೇಹಿ ಗೌರಿಗಣೇಶ ಹಬ್ಬ ಆಚರಿಸಿ ನೈಸರ್ಗಿಕ ಜಲ ಸಂಪನ್ಮೂಲಗಳನ್ನು ಸಂರಕ್ಷಿಸಬೇಕಿದೆ.


ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ಪಿ.ಒ.ಪಿ ಯಿಂದ ಗಣೇಶ ಮೂರ್ತಿ ತಯಾರಿಸಿ, ಮಾರಾಟ ಹಾಗೂ ವಿಸರ್ಜನೆಗೆ ಸಂಬಂಧಿಸಿದಂತೆ ದಿನಾಂಕ: 12.05.2020 ರಂದು ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಿ, ನೀರಿನ ಮೂಲಗಳನ್ನು ಸಂರಕ್ಷಿಸುವ ದೃಷ್ಟಿಯಿಂದ



ಪಿಓಪಿ ಮೂರ್ತಿಗಳ ತಯಾರಿಸಿ, ಮಾರಾಟ ಹಾಗೂ ವಿಸರ್ಜನೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿರುತ್ತದೆ.


ಜಲ (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣಾ) ಕಾಯ್ದೆ, 1974ರ ಕಲಂ 33(ಎ) ಅಡಿಯಲ್ಲಿ ಈ ರೀತಿಯ ವಿಗ್ರಹಗಳ ಉತ್ಪಾದನಾ ಘಟಕವನ್ನು ಮುಚ್ಚುವ ಹಾಗೂ ಮುಟ್ಟುಗೋಲು ಹಾಕಿಕೊಳ್ಳುವ ಅವಕಾಶ ಇರುತ್ತದೆ. ಈ ವಿಗ್ರಹಗಳನ್ನು ಯಾವುದೇ ನೀರಿನ ಮೂಲಗಳಿಗೆ ವಿಸರ್ಜನೆ ಮಾಡುವುದು ಕಾಯ್ದೆಯ ಕಲಂ 24ರ ಸ್ಪಷ್ಟ ಉಲ್ಲಂಘನೆಯಾಗುತ್ತದೆ. ಈ ಕಾಯ್ದೆಯ ಕಲಂ 41 ಹಾಗೂ 43ರ ಪ್ರಕಾರ ಶಿಕ್ಷಾರ್ಹ ಅಪರಾಧವಾಗುತ್ತದೆ. ಈ ಅಪರಾಧಕ್ಕೆ ದಂಡದೊಂದಿಗೆ ಕನಿಷ್ಠ ಒಂದೂವರೆ ವರ್ಷ ಹಾಗೂ ಗರಿಷ್ಠ ಆರು ವರ್ಷಗಳ ಕಾರಾಗೃಹವಾಸದ ಜೊತೆಗೆ ಈ ಉಲ್ಲಂಘನೆಗೆ ಪರಿಸರ (ಸಂರಕ್ಷಣಾ) ಕಾಯ್ದೆ 1986 ರಡಿಯಲ್ಲಿಯೂ ಸಹ ಕ್ರಮ ಜರುಗಿಸಬಹುದಾಗಿರುತ್ತದೆ. ಅಂತಹ ಉದ್ದಿಮೆ ಅಥವಾ ಉತ್ಪಾದನಾ ಘಟಕವನ್ನು ಪರಿಸರ (ಸಂರಕ್ಷಣಾ) ಕಾಯ್ದೆ, 1986 ಕಲಂ 5 ರಡಿಯಲ್ಲಿ ಮುಚ್ಚುವ ಹಾಗೂ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದೆ. ಈ ಕಾಯ್ದೆಯ ಉಲ್ಲಂಘನೆ ಕಲಂ 15ರ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಅದಕ್ಕೆ ಗರಿಷ್ಠ ಒಂದು ಲಕ್ಷ ರೂಪಾಯಿಗಳ ದಂಡದೊಂದಿಗೆ ಗ-ರಿಷ್ಠ 5 ವರ್ಷದ ಕಾರಾಗೃಹವಾಸದ ಶಿಕ್ಷೆಗೆ ಒಳಪಡಬೇಕಾಗುತ್ತದೆ.

ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಮಣ್ಣಿನಿಂದ ತೈಯಾ-ರಿಸಿದ ಗಣಪತಿಗಳನ್ನು ನಮ್ಮ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿ ಆಚರಿಸೋಣ. ರಾಸಾಯನಿಕ ಬಣ್ಣಗಳಿಂದ ತೈಯಾ-ರಿಸಿದ ಗಣಪತಿಗಳನ್ನು ಬಳಸಿದರೆ ಅವುಗಳನ್ನು ನದಿ, ಭಾವಿ, ಹಳ್ಳ ಮತ್ತು ಕೆರೆ ಇತ್ಯಾದಿಗಳಲ್ಲಿ ವಿಸರ್ಜಿಸಿದಾಗ ಈ



ವಿಗ್ರಹಗಳ ಮೂಲವಸ್ತು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಇದರ ರಾಸಾಯನಿಕ ಮೂಲ ಹೆಸರು "ಕ್ಯಾಲ್ಸಿಯಮ್ ಸಲ್ಪೇಟ್ ಹೆಮಿಹೈಡ್ರೇಟ್" ಇದರಿಂದ ತೈಯಾರಿಸಿದ ವಿಗ್ರಹಗಳನ್ನು ನೀರಿನಲ್ಲಿ ವಿಸರ್ಜಿಸಿದಾಗ, ಅವುಗಳು ನೀರಿನಲ್ಲಿ ನಿಧಾನವಾಗಿ ಕರಗುವುದರಿಂದ ನೀರಿನಲ್ಲಿನ ಕರಗಿದ ಆಮ್ಲಜನಕದ ಪ್ರಮಾಣದಲ್ಲಿ ತೀವ್ರ ಇಳಿಕೆಯಾಗುತ್ತೆ ಹಾಗೂ ಅದರಲ್ಲಿ ಕ್ಯಾಲ್ಸಿಯಂ ಅಂಶ ಇರುವುದರಿಂದ ನೀರಿನ ಶಾಶ್ವತ ಗಡಸುತನ ಸಹ ಹೆಚ್ಚಾಗುತ್ತದೆ. ವಿಗ್ರಹಗಳಲ್ಲಿ ಉಪಯೋಗಿಸಲಾದ ರಾಸಾಯನಿಕ ಯುಕ್ತ ಬಣ್ಣಗಳಲ್ಲಿರುವ ಭಾರಲೋಹಗಳಾದ ಮರ್ಕ್ಯುರಿ, ಆರ್ಸೆನಿಕ್, ಲೆಡ್, ಕ್ರೋಮಿಯಂ, ತಾಮ್ರ, ಕ್ಯಾಡ್ಮಿಯಂ, ಕೋಬಾಲ್ಟ್, ಸತು ಇತ್ಯಾದಿ ಹಾನಿಕಾರಕ ವಸ್ತುಗಳು ಕ್ರಮೇಣ ನೀರಿನಲ್ಲಿ ಬೆರೆತು ನೀರಿನ ಮೂಲಗಳು ಕುಲುಷಿತವಾಗುತ್ತವೆ. ಅಲ್ಲದೆ, ನೀರಿನಲ್ಲಿನ ವಿವಿಧ ಜೀವಿಗಳಾದ ಮೀನುಗಳು ಹಾಗು ಇತರೆ ಜಲಚರಗಳು ಸಾವನ್ನಪ್ಪುವ ಸಂಭವವಿರುತ್ತದೆ. ಈ ನೀರನ್ನು ಬಳಸುವಂತಹ ಸುತ್ತಮುತ್ತಲಿನ ಜನರು ಹಾಗು ಜಾನುವಾರುಗಳಿಗೆ ವಿವಿಧ ರೀತಿಯ ಕಾಯಿಲೆಗಳು ಮತ್ತು ಕ್ಯಾನ್ಸರ್‌ಕಾರಕವಾಗುವಂತಹ ಇತರೆ ರೋಗರುಜಿನಗಳು ಬರುವ ಸಾಧ್ಯತೆಯಿರುತ್ತವೆ ಎಂದು ಹಲವಾರು ವಿಶ್ಲೇಷಣೆ ಮತ್ತು ಅಧ್ಯಯನಗಳು ಹೇಳುತ್ತವೆ.

ಗಣೇಶ ಆಚರಣೆ ಸಂದರ್ಭದಲ್ಲಿ ಹೆಚ್ಚಿನ ಪಟಾಕಿಗಳನ್ನು ಸಿಡಿಸದಂತೆ ನೋಡಿಕೊಳ್ಳಿ. ಇದರಿಂದ ಅಲ್ಲಿ ಸೇ-ರಿರುವ ಜನರ ಕಣ್ಣಿಗೆ ಹಾನಿಯುಂಟಾಗುವ ಸಂಭವವಿರುತ್ತದೆ ಮತ್ತು ಶಬ್ಧ ಮಾಲಿನ್ಯದ ಜೊತೆಗೆ ಹೆಚ್ಚಿನ ಹೊಗೆ ಹರಡಿ ಪರಿಸರ ಮಾಲಿನ್ಯವನ್ನು ಉಂಟುಮಾಡುತ್ತದೆ. ಗಣೇಶ ಪ್ರತಿಷ್ಠಾಪನೆ ಸ್ಥಳ ಹಾಗೂ ವಿಸರ್ಜನೆ ಮಾಹಿತಿಯನ್ನು ಗಣೇಶ ಮಂಡಳಿಯ ಸದಸ್ಯರು ತಮ್ಮ ಹತ್ತಿರದ ಪೊಲೀಸ್ ಠಾಣೆಗೆ ನೀಡಬೇಕು. ಇದ-ರಿಂದ ಗಣೇಶ ವಿಸರ್ಜನೆ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳನ್ನು ನಡೆಯದಂತೆ ಪೊಲೀಸರು ಮತ್ತು ಗೃಹ ರಕ್ಷಕ ದಳದವರು ಮುಂಜಾಗ್ರತೆ ವಹಿಸುತ್ತಾರೆ. ಗಣೇಶ ಹಬ್ಬದ ಆಚ-ರಣೆ ಕುರಿತು ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ಹೊರಡಿಸುವ ಮಾರ್ಗ ಸೂಚಿಗಳನ್ನು ಎಲ್ಲರೂ ಪಾಲನೆ ಮಾಡುತ್ತ ಪರಸ್ಪರ ಸ್ನೇಹ, ಸೌಹಾರ್ದತೆ ಮತ್ತು ಶಾಂತಿಯುವಾಗಿ ಈ ವರ್ಷದ ಗಣೇಶ ಹಬ್ಬವನ್ನು ಸಂಭ್ರಮದಿಂದ ಆಚರಿಸುವ ಮೂಲಕ ಮೋದಕಪ್ರೀಯ ಗಣೇಶನ ಪ್ರೀತಿಗೆ ನಾವೆಲ್ಲರೂ ಪಾತ್ರರಾಗೋಣ.



**ಲೇಖನ :- ಡಾ. ಸುರೇಶ ಜಿ.**
**ಸಹಾಯಕ ನಿರ್ದೇಶಕರು,**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ**
**ಇಲಾಖೆ, ಕೊಪ್ಪಳ.**

## ಗಣೇಶ ಚತುರ್ಥಿಯ ಪ್ರಯುಕ್ತ ವಾ.ಕ.ರ.ಸಾ.ಸಂಸ್ಥೆಯಿಂದ ಹೆಚ್ಚುವರಿ ಬಸ್ಸು ಸೌಲಭ್ಯ

**ಕಾರವಾರ,** : ಪ್ರಸಕ್ತ ಸಾಲಿನ ಗಣೇಶ ಚತುರ್ಥಿಯ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 265 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಆ. 22 ವಾರಾಂತ್ಯದ ದಿನ ಆ.23 ರಂದು ಬೆನಕನ ಅಮವಾಸ್ಯೆ / ನಾಲ್ಕನೇ ಶನಿವಾರ, ಆ.24 ಭಾನುವಾರ, ಆ. 26 ರಂದು ಸ್ವರ್ಣಗೌರಿ ವ್ರತ ಮತ್ತು ಆ. 27 ರಂದು ಗಣೇಶ ಹಬ್ಬವಿರುವುದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯ ವಿವಿದ ಸ್ಥಳಗಳಿಗೆ ತೆರಳಲು ಆ.22 ರಿಂದ 26 ರ ವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ನಂತರ ಆ. 27 ಮತ್ತು ನಂತರ ದಿನಗಳಂದು ಪ್ರಮುಖ ಸ್ಥಳಗಳಿಗೆ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಸದರಿ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ಪ್ರಜಾಸೌಧ ಬಿಗ್‌ಫೈಟ್: ಬೇಡಿಕೆಯಿರಲಿ ಸಂಘರ್ಷ ಬೇಡ



ರಬಕವಿ-ಬನಹಟ್ಟಿ, : ತಾಲೂಕಿಗೆ ನೂತನ ಪ್ರಜಾಸೌಧ ನಿರ್ಮಾಣ ಕುರಿತು ದ್ವಂದ್ವ ನಿರ್ಧಾರದಿಂದ ಅವಳಿ ಪಟ್ಟಣದ ಜನತೆಯಲ್ಲಿ ವಿಷಮ ಸ್ಥಿತಿ ಎದುರಾಗಿದೆ.

ಶನಿವಾರ ರಬಕವಿಯ ಮಲ್ಲಿಕಾರ್ಜುನ ಸಮುದಯ ಭವನದಲ್ಲಿ ನಡೆದ ರಬಕವಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಹಿರಿಯ ಮುತ್ಸದ್ದಿ ಸಂಗಪ್ಪ ಕುಂದಗೋಳ, ಪ್ರಜಾಸೌಧ ನಿರ್ಮಾಣಕ್ಕೆ ಸಂಘರ್ಷ ಬದಲಾಗಿ ಸಹಕಾರ ಮುಖ್ಯವಾಗಿದೆ. ಜಾಗೆ ಎಲ್ಲಿಯೇ ಗುರ್ತಿಸಲಿ ಸರ್ಕಾರದ ವಿವೇಚನೆ ಬಿಟ್ಟದ್ದು ಬದಲಾಗಿ ಒಬ್ಬ-ರಿಗೊಬ್ಬರು ದ್ವೇಷ ಮನೋಭಾವನೆ ಬಿಡಬೇಕೆಂದರು.

ಡಾ. ರವಿ ಜಮಖಂಡಿ ಮಾತನಾಡಿ, 2021-22 ರಲ್ಲಿಯೇ ರಬಕವಿ ಸರ್ವೆ ನಂ.63ರ ನಾಯಕರ ಗುಡ್ಡದ ಪ್ರದೇಶದಲ್ಲಿ ನಿರ್ಮಾಣ-ಕ್ಕೆ ಸರ್ಕಾರವೇ ಸ್ವಯಂಪ್ರೇರಿತ ನಿರ್ಧಾರ ತೋ-ರಿದೆ. ಅದರಂತೆ ಪ್ರಗತಿಯೂ ನಡೆಯುತ್ತಿದೆ. ಇದೀಗ ಬನಹಟ್ಟಿಯ ಹೊಸ ಜಾಗೆ ತೋರಿಸುತ್ತಿರುವದು ಅಸಂಬದ್ಧವೆಂದರು. ಅಲ್ಲದೆ ಈ ಜಾಗೆಗೆ ಪೂರಕವಾಗಿ ಜಿಎಲ್‌ಬಿಸಿ ಪ್ರದೇಶವನ್ನೂ ತೋ-ರಿಸಲಾಗಿದೆಯೆಂದರು.

ಧರೆಪ್ಪ ಉಳ್ಳಾಗಡ್ಡಿ ಮಾತನಾಡಿ, ರಬಕವಿ-ಬನಹಟ್ಟಿ ತಾಲೂಕಾ ಕೇಂದ್ರಕ್ಕೆ ರಬಕವಿ-ಬನಹಟ್ಟಿ-ಹೊಸೂರ-ರಾಮಪೂರ ಪಟ್ಟಣಗಳ ಸರ್ವ ಜನತೆ ಕಾರಣ ಅದರಂತೆ ಪ್ರಜಾಸೌಧ ಎಲ್ಲಿಯಾದರೂ ಬೆಂಬಲಿಸುವ ಮೃದು ಮನಸ್ಸು ಎಲ್ಲರದ್ದಾಗಬೇಕೆಂದರು.

ಸಮಿತಿ: ಪ್ರಜಾಸಭಧ ನಿರ್ಮಾಣ ಸಮಿತಿ ರಚನೆ ಮಾಡಿ ಇದರ ಅಧ್ಯಕ್ಷರಾಗಿ ಮಾರುತಿ ನಾಯಕ, ಉಪಾಧ್ಯಕ್ಷರಾಗಿ ಸದಾಶಿವ ನಾಯಕರನ್ನೊಳಗೊಂಡು 21 ಸದಸ್ಯರ ಸಮಿತಿಯನ್ನು ರಚನೆ ಮಾಡಲಾಯಿತು.

ಬಂದ್ ನಿರ್ಧಾರ: ರಬಕವಿ ಪಟ್ಟಣಕ್ಕೆ ಪ್ರಜಾಸೌಧ ನಿರ್ಮಾಣವಾಗುವಲ್ಲಿ ಸಕಲ ರೀತಿಯಲ್ಲಿ ಸನ್ನದ್ಧವಾಗಿದ್ದು, ಒಂದು ದಿನ ಸಾಂಕೇತಿಕ ರಬಕವಿ ಬಂದ್ ಕರೆ ಘೋಷಣೆಯೊಂದಿಗೆ ಸರ್ಕಾರಕ್ಕೆ ಹಕ್ಕೊತ್ತಾಯ ಮಾಡಲಾಗುವದೆಂದು ರಾಮಣ್ಣ ಹುಲಕುಂದ ತಿಳಿಸಿದರು.

ಸಭೆ ಅಧ್ಯಕ್ಷತೆಯನ್ನು ಶಿವಾನಂದ ಬಾಗಲಕೋಟ ವಹಿಸಿದ್ದರು. ವೇದಿಕೆಯಲ್ಲಿ ಬಸವರಾಜ ತೆಗ್ಗಿ, ಸತೀಶ ಹಜಾರೆ, ಶಿವಜಾತ ಉಮದಿ, ಉಸ್ಮನಸಾಬ ಲೆಂಗ್ರೆ, ಶ್ರೀಶೈಲ ದಲಾಲ, ಮಹಾದೇವ ಧೂಪದಾಳ, ಚಿದಾನಂದ ಗಾಳಿ, ಭೀಮಶಿ ಪಾಟೀಲ, ಸಂಜು ಜೋತಾವರ, ಶೇಖರ ಕೊಟ್ರಶೆಟ್ಟಿ, ಪಾಂಡು ಪೂಜಾರಿ ಉಪಸ್ಥಿತರಿದ್ದರು.

****

## ರಬಕವಿ ಬನಹಟ್ಟಿ ಜಾಕವೆಲ್ ರಸ್ತೆ ಜಲಾವೃತ

### ಹಿಪ್ಪರಗಿ ಬ್ಯಾರೇಜ್‌ಗೆ 2.6 ಲಕ್ಷ ಕ್ಯೂಸೆಕ್ ನೀರು: ನದಿ ತೀರದಲ್ಲಿ ಪೊಲೀಸ್ ಕಾವಲು

### ಉಕ್ಕೇರಿದ ಕೃಷ್ಣಾ ನದಿ: ರಸ್ತೆಗಳು ಜಲಾವೃತ



**ರಬಕವಿ-ಬನಹಟ್ಟಿ :** ಕೃಷ್ಣಾ ನದಿಯಲ್ಲಿ ನೀರಿನ ಪ್ರಮಾಣ ಭಾರಿ ಪ್ರಮಾಣದಲ್ಲಿ ಏರಿಕೆ ಕಂಡಿದ್ದು, ನದಿ ಪಾತ್ರದ ಗ್ರಾಮೀಣ ರಸ್ತೆಗಳು ಸಂಪೂರ್ಣ ಮುಳುಗುವಲ್ಲಿ ಕಾರಣವಾಗಿದ್ದು, ಭಾರಿ ಹಾನಿಯಾಗುವ ಲಕ್ಷಣಗಳು ಗೋಚರಿಸುತ್ತಿವೆ.

ಜಮಖಂಡಿ ಹಾಗೂ ಬನಹಟ್ಟಿ ನಗರಗಳ ಮೂಲಕ ಮದನಮಟ್ಟಿ, ಹಳಿಂಗಳಿ, ತಮದಡ್ಡಿ ಹಾಗೂ ತೇರದಾಳ ಪಟ್ಟಣಕ್ಕೆ ತೆರಳುವ ರಸ್ತೆ ಅರ್ಧ ಕಿ.ಮೀ ಕ್ಕಿಂತ ಹೆಚ್ಚು ನದಿ ನೀರಿನಲ್ಲಿ ಜಲಾವೃತಗೊಂಡಿದೆ.

ಹಿಪ್ಪರಗಿ ಬ್ಯಾರೇಜ್‌ಗೆ ಶನಿವಾರ ಬೆಳಗ್ಗೆ 2ಲಕ್ಷ 64 ಸಾವಿರ ಕ್ಯೂಸೆಕ್ ಒಳ ಹರಿವು ಇದ್ದು, 2.63 ಲಕ್ಷ ಕ್ಯೂಸೆಕ್ ನೀರಿನ ಹೊರಹರಿವುಯಿದೆ. ಬ್ಯಾರೇಜ್‌ನಲ್ಲಿ ಗರಿಷ್ಠ ನೀರಿನ ಮಟ್ಟ 524.87 ಮೀ. ಇದ್ದು, ಈಗ 525.24 ಮೀ.ರಷ್ಟು ಹೆಚ್ಚಿದೆ. ಬ್ಯಾರೇಜ್ 22 ಗೇಟ್‌ಗಳ ಮೂಲಕ ನೀರನ್ನು ಬಿಡಲಾಗುತ್ತಿದೆ ಎಂದು ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ತಿಳಿಸಿದರು. ಅದೇ ರೀತಿಯಾಗಿ ರಬಕವಿ-ಬನಹಟ್ಟಿ ನಗರಗಳ ಜಾಕವೆಲ್ ಗೆ ಹೋಗವು ರಸ್ತೆ ಮಾರ್ಗವೂ ಕೂಡಾ ನದಿ ನೀರಿನಿಂದಾಗಿ ಬಂದಾಗಿದೆ.

ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆ: ರಬಕವಿ ಬನಹಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗೆ ಬನಹಟ್ಟಿ, ಅಸ್ಕಿ, ಆಸಂಗಿಗಳಿಂದ ಕಾಲೇಜುಗೆ ಹೋಗುವ ವಿದ್ಯಾರ್ಥಿಗಳು ನದಿ ನೀರಿನಿಂದಾಗಿ ತೊಂದರೆಯನ್ನು ಅನುಭವಿಸಿದರು. ರಸ್ತೆ ಜಲಾವೃತಗೊಂಡಿರುವುದ-ರಿಂದ ಈ ಭಾಗದಿಂದ ತೆರಳುವ ವಿದ್ಯಾರ್ಥಿಗಳಿಗೆ ತೊಂದರೆಯಾಯಿತು.

ಪೊಲೀಸ್ ಕಾವಲು: ನದಿ ತೀರದಲ್ಲಿ ಬೆಳಗಿನ ಜಾವ ಜನರು ತಮ್ಮ ದ್ವಿಚಕ್ರ, ಟ್ರ್ಯಾಕ್ಟರ್ ಸೇರಿದಂತೆ ಇತರೆ ವಾಹನಗಳನ್ನು ಶುಚಿಗೊಳಿಸುತ್ತಿದ್ದರು. ನಂತರ ಜಲಾವೃತಗೊಂಡ ರಸ್ತೆಯ ಮೇಲೆ ವಾಹನಗಳನ್ನು ತೆಗೆದುಕೊಂಡು ಹೋಗುತ್ತಿದ್ದರು. ಮಧ್ಯಾಹ್ನ 12 ರ ಹೊತ್ತಿಗೆ ನದಿ ತೀರದಲ್ಲಿ ಯಾರು ಸಂಚಾರ ಮಾಡದಂತೆ ಮುಳ್ಳಿನ ಬೇಲಿ ಹಾಕಿ ಪೊಲೀಸ್ ರನ್ನು ಕಾವಲಕ್ಕೆ ಇಡಲಾಯಿತು.

## ತಾಲೂಕಾ ಹಾಗೂ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಸ್ಪರ್ಧೆಗಳಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ,** : 2025-26ನೇ ಸಾಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಪ್ರತಿ ವರ್ಷದಂತೆ ಈ ಬಾರಿಯೂ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷ ಮತ್ತು ಮಹಿಳೆಯರಿಗಾಗಿ ತಾಲ್ಲೂಕು, ಜಿಲ್ಲಾ, ವಿಭಾಗ ಹಾಗೂ ರಾಜ್ಯ ಮಟ್ಟದಲ್ಲಿ ಏರ್ಪಡಿಸಲಾಗುತ್ತಿದೆ.

ಜಿಲ್ಲೆಯಲ್ಲಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಆಗಸ್ಟ ನಾಲ್ಕನೇ ವಾರದಿಂದ ಪ್ರಾರಂಭಿಸಲಾಗುತ್ತಿದೆ ಮತ್ತು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ ಮೊದಲನೇ ವಾರದಲ್ಲಿ ಆಯೋಜಿಸಲಾಗುವುದು.

ಅಥ್ಲೆಟಿಕ್, ವಾಲಿಬಾಲ್, ಫುಟ್ಬಾಲ್, ಖೋಖೋ, ಕಬಡ್ಡಿ, ಥ್ರೋಬಾಲ್, ಯೋಗಾಸನ ತಾಲ್ಲೂಕು ಮಟ್ಟದಲ್ಲಿ ಸಂಘಟಿಸುವ ಕ್ರೀಡೆಗಳು ಹಾಗೂ ಅಥ-ಟಿಕ್ಸ್, ವಾಲಿಬಾಲ್, ಫುಟಬಾಲ್, ಖೋಖೋ, ಕಬಡ್ಡಿ, ಬಾಸ್ಕೇಟಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್, ಯೋಗಾಸನ 14 ಕ್ರೀಡೆಗಳಿಗೆ ಸ್ಪರ್ಧೆಗಳನ್ನು ಮತ್ತು ಟೆನ್ನಿಸ್, ನೆಟ್‌ಬಾಲ್, ಈಜು 3 ಕ್ರೀಡೆಗಳಿಗೆ ಆಯ್ಕೆಗಳನ್ನು ನಡೆಸಲಾಗುವುದು. ಇವು ಜಿಲ್ಲಾ ಮಟ್ಟದಲ್ಲಿ ಸಂಘಟಿಸುವ ಕ್ರೀಡೆಗಳಾಗಿವೆ.

ದಸರಾ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಿರುತ್ತಾರೆ. ಕ್ರೀಡಾಪಟುಗಳು ಪ್ರತಿನಿಧಿಸುವ ತಾಲ್ಲೂಕು/ಜಿಲ್ಲೆಯ ಸ್ಥಳೀಯವಾದ ದೃಢೀಕರಣದ ಬಗ್ಗೆ ದಾಖಲೆಗಳನ್ನು ಸಲ್ಲಿಸುವುದು (ಶಾಲಾ/ಕಾಲೇಜಿನ ಗುರುತಿನಚೀಟಿ, ಆಧಾರಕಾರ್ಡ್, ರೇಷನ್‌ಕಾರ್ಡ್, ಮತದಾರರ ಗುರುತಿನಚೀಟಿ ಹಾಗೂ ಸರ್ಕಾರದಿಂದ ಅಧಿಕೃತ ಇರುವ ಇತರೆ ಗುರುತಿನ ಚೀಟಿಗಳು). ಸದರಿ ಕ್ರೀಡಾಪಟುಗಳು ಬೇರೆ ಜಿಲ್ಲೆಯಿಂದ ಭಾಗವಹಿಸಿದ್ದಲ್ಲಿ ಅವರನ್ನು ನಿಷೇಧಿಸಲಾಗುವುದು. ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು **https://dasaracmcup-2025.etrpindia.com/KA-sports** (ಆನ್‌ಲೈನ್ ಲಿಂಕ್) ಅಥ-ವಾ ಕೋಡ್ ಸ್ಕ್ಯಾನ್ ಮೂಲಕ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ:0831-2474101 ಅನ್ನು ಅಥ-ವಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾ-ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸವನಬಾಗೇವಾಡಿ ತಹಶೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ

### ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ

**ವಿಜಯಪುರ** : ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ತಾಲೂಕಾ ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕಾ ಆಡಳಿತ ಬಸವನಬಾಗೇವಾಡಿ ಇವರ ಸಂಯುಕ್ತಾಶ್ರಯದಲ್ಲಿ ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ಬಸವನಬಾಗೇವಾಡಿ ತಾಲೂಕಾ ತಹಶೀಲ್ದಾರ ಕಾರ್ಯಾಲಯದ ಸಭಾ ಭವನದಲ್ಲಿ ಅಭಿಯಾನವನ್ನು ಜಿಲ್ಲಾ ನ್ಯಾಯಾಧೀಶರು ಹಾಗೂ ಕಲಬುರ್ಗಿ ಖಾಯಂ ಜನತಾ ನ್ಯಾಯಾಲಯ ಅಧ್ಯಕ್ಷರಾದ ನ್ಯಾಯಾಧೀಶ ಎಸ್.ಎಲ್.ಚವ್ಹಾಣ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವನಬಾಗೇವಾಡಿ ತಹಶೀಲ್ದಾರ ವಾಯ್.ಎಸ್.ಸೋಮನಕಟ್ಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ, ಹಿರಿಯ ಸಿವಿಲ್ ನ್ಯಾಯಾಧೀಶ ಶಶಿಧರ ಎಂ.ಗೌಡ, ಕಲಬುರಗಿ ಖಾಯಂ ಜನತಾ ನ್ಯಾಯಾಲಯದ ಸದಸ್ಯರಾದ ನ್ಯಾಯಾಧೀಶ ವಿಜಯ ವಿಠ್ಠಲ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ ಮುಸಲ್ಮಾರಿ, ಸಿವಿಲ್ ನ್ಯಾಯಾಧೀಶರಾದ ಅಮಿತ ಘಟ್ಟಿ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈರಪ್ಪ ಢವಳೇಶ್ವರ, ಬಾಗೇವಾಡಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ ದೇಸಾಯಿ, ಡಿವೈ-ಎಸ್‌ಪಿ ಬಲ್ಲಪ್ಪ ನಂದಗಾಂವಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಬಿ.ಸಿದ್ದಯ್ಯ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿಗಳು ಹಾಗೂ ಮಧ್ಯಸ್ಥಗಾರರಾದ ವಿ.ಬಿ.ಮರ್ತುರ ಹಾಗೂ ನ್ಯಾಯವಾದಿ ಶ್ರೀಮತಿ ಪಿ.ಬಿ.ಪತ್ತಾರ ಅತಿಥಿ ಉಪನ್ಯಾಸಕರಾಗಿ ಭಾಗವಹಿಸಲಿದ್ದಾರೆ.

## ಮುತ್ತಗಿ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ

### ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ

**ವಿಜಯಪುರ** : ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ತಾಲೂಕಾ ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕಾ ಆಡಳಿತ ಬಸವನಬಾಗೇವಾಡಿ ಇವರ ಸಂಯುಕ್ತಾಶ್ರಯದಲ್ಲಿ ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಂದು ಮಧ್ಯಾಹ್ನ 2-15 ಗಂಟೆಗೆ ಬಸವನಬಾಗೇವಾಡಿ ತಾಲೂಕಿನ ಮುತ್ತಗಿ ಗ್ರಾಮ ಪಂಚಾಯತ್ ಸಭಾ ಭವನದಲ್ಲಿ ಅಭಿಯಾನವನ್ನು ಜಿಲ್ಲಾ ನ್ಯಾಯಾಧೀಶರು ಹಾಗೂ ಕಲಬ್ಬುರ್ಗಿ ಖಾಯಂ ಜನತಾ ನ್ಯಾಯಾಲಯ ಅಧ್ಯಕ್ಷರಾದ ನ್ಯಾಯಾಧೀಶ ಎಸ್.ಎಲ್.ಚವ್ಹಾಣ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮದಭಾವಿ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಶ್ರೀಮತಿ ರೇಖಾ ಬಂದಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ, ಹಿರಿಯ ಸಿವಿಲ್ ನ್ಯಾಯಾಧೀಶ ಶಶಿಧರ ಎಂ.ಗೌಡ, ಕಲಬುರಗಿ ಖಾಯಂ ಜನತಾ ನ್ಯಾಯಾಲಯದ ಸದಸ್ಯರಾದ ನ್ಯಾಯಾಧೀಶ ವಿಜಯ ವಿಠ್ಠಲ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ ಮುಸಲ್ಮಾರಿ, ಸಿವಿಲ್ ನ್ಯಾಯಾಧೀಶರಾದ ಅಮಿತ ಘಟ್ಟಿ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈರಪ್ಪ ಢವಳೇಶ್ವರ, ಬಾಗೇವಾಡಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ ದೇಸಾಯಿ, ಡಿವೈಎಸ್‌ಪಿ ಬಲ್ಲಪ್ಪ ನಂದಗಾಂವಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಬಿ.ಸಿದ್ದಯ್ಯ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿಗಳು ಹಾಗೂ ಮಧ್ಯಸ್ಥಗಾರರಾದ ವಿ.ಬಿ.ಮರ್ತುರ ಹಾಗೂ ನ್ಯಾಯವಾದಿ ಶ್ರೀಮತಿ ಪಿ.ಬಿ.ಪತ್ತಾರ ಅತಿಥಿ ಉಪನ್ಯಾಸಕರಾಗಿ ಭಾಗವಹಿಸಲಿದ್ದಾರೆ.

## ಇಂಗಳೇಶ್ವರದಲ್ಲಿ ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ

**ವಿಜಯಪುರ** : ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ ತಾಲೂಕಾ ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕಾ ಆಡಳಿತ ಬಸವನಬಾಗೇವಾಡಿ ಇವರ ಸಂಯುಕ್ತಾಶ್ರಯದಲ್ಲಿ ಆ.30ರಂದು ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅಂದು ಮಧ್ಯಾಹ್ನ 3-45 ಗಂಟೆಗೆ ಬಸವನಬಾಗೇವಾಡಿ ತಾಲೂಕಿನ ಇಂಗಳೇಶ್ವರ ಚಂದ್ರ ಶಾಲೆ ಸಭಾ ಭವನದಲ್ಲಿ ಅಭಿಯಾನವನ್ನು ಜಿಲ್ಲಾ ನ್ಯಾಯಾಧೀಶರು ಹಾಗೂ ಕಲಬ್ಬುರ್ಗಿ ಖಾಯಂ ಜನತಾ ನ್ಯಾಯಾಲಯ ಅಧ್ಯಕ್ಷರಾದ ನ್ಯಾಯಾಧೀಶ ಎಸ್.ಎಲ್.ಚವ್ಹಾಣ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವನಬಾಗೇವಾಡಿ ತಾಲೂಕಿನ ಇಂಗಳೇಶ್ವರ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಬನ್ನೆಪ್ಪ ಡೋಣೂರ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ, ಹಿರಿಯ ಸಿವಿಲ್ ನ್ಯಾಯಾಧೀಶ ಶಶಿಧರ ಎಂ.ಗೌಡ, ಕಲಬುರಗಿ ಖಾಯಂ ಜನತಾ ನ್ಯಾಯಾಲಯದ ಸದಸ್ಯರಾದ ನ್ಯಾಯಾಧೀಶ ವಿಜಯ ವಿಠ್ಠಲ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ ಮುಸಲ್ಮಾರಿ, ಸಿವಿಲ್ ನ್ಯಾಯಾಧೀಶರಾದ ಅಮಿತ ಘಟ್ಟಿ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಈರಪ್ಪ ಢವಳೇಶ್ವರ, ಬಾಗೇವಾಡಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ ದೇಸಾಯಿ, ಡಿವೈಎಸ್‌ಪಿ ಬಲ್ಲಪ್ಪ ನಂದಗಾಂವಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಬಿ.ಸಿದ್ದಯ್ಯ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿಗಳು ಹಾಗೂ ಮಧ್ಯಸ್ಥಗಾರರಾದ ವಿ.ಬಿ.ಮರ್ತುರ ಹಾಗೂ ನ್ಯಾಯವಾದಿ ಶ್ರೀಮತಿ ಪಿ.ಬಿ.ಪತ್ತಾರ ಅತಿಥಿ ಉಪನ್ಯಾಸಕರಾಗಿ ಭಾಗವಹಿಸಲಿದ್ದಾರೆ.

## ನಾಗಪೂರದ ದೀಕ್ಷಾ ಭೂಮಿಗೆ ಭೇಟಿ : ಆನ್‌ಲೈನ್ ಅರ್ಜಿ ಆಹ್ವಾನ

**ವಿಜಯಪುರ** ; ಪ್ರತಿ ವರ್ಷದಂತೆ ಸೆ.30ರಿಂದ ಅಕ್ಟೋಬರ್ 04ರವರೆಗೆ ರಾಜ್ಯದಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ ಅನುಯಾಯಿಗಳು ಭೇಟಿ ನೀಡಲು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬಸ್ಸು ಮತ್ತು ರೈಲಿನ ಮೂಲಕ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯದಿಂದ ನಾಗಪುರಕ್ಕೆ ಭೇಟಿ ನೀಡಲಿರುವ ಅನುಯಾಯಿಗಳು ಸಮಾಜ ಕಲ್ಯಾಣ ಇಲಾಖೆಯ **https://swd.karnataka.gov.in** ವೆಬ್‌ಸೈಟ್ ಮೂಲಕ ಆ.25ರಿಂದ ಸೆ.9ರವರೆಗೆ ಅರ್ಜಿ ಸಲ್ಲಿಸಬಹುದಾಗಿದ್ದು, ವಿಜಯಪುರ ಜಿಲ್ಲೆಯ ಅನುಯಾಯಿಗಳು ನಿಗದಿತ ಅವಧಿಯೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತದಾರ ಮನವಿ ಮಾಡಿಕೊಂಡಿದ್ದಾರೆ.

## ಎಂ.ವಿ.ಎ ಸ್ನಾತಕೋತ್ತರ ಪದವಿ ತರಗತಿಗಳ ಪ್ರವೇಶ: ಅರ್ಜಿ ಆಹ್ವಾನ

**ಕಾರವಾರ,** : ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎಂ.ವಿ.ಎ) (ಎರಡು ಶೈಕ್ಷಣಿಕ ವರ್ಷದ ನಾಲ್ಕು ಸೆಮಿಸ್ಟರ್ ಸಿ.ಬಿ.ಸಿ.ಎಸ್ ಪದ್ಧತಿ ದೃಶ್ಯ ಕಲೆಯಲ್ಲಿ 2025-26 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ಬಿ.ವಿ.ಎ. ಸ್ನಾತಕ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಆಫ್ ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಸದರಿ ಸ್ನಾತಕೋತ್ತರ ಪದವಿಯಲ್ಲಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕೋತ್ತರ ಪದವಿಯಾಗಿರುತ್ತದೆ. ಪ್ರಥಮ ವರ್ಷದ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ (ಎಂ.ವಿ.ಎ) ಪ್ರವೇಶಾತಿಗಾಗಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಿಗೆ ಕಛೇರಿಯಿಂದ ಅರ್ಜಿಗಳನ್ನು ಪಡೆದು ಸಲ್ಲಿಸಲು ಆ.30 ಅಂತಿಮ ದಿನಾಂಕವಾಗಿದ್ದು, ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅರ್ಹತಾ ಪರೀಕ್ಷೆ ಹಾಗೂ ವೈಯುಕ್ತಿಕ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದು.

ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂರವಾಣಿ ಸಂಖ್ಯೆ 0821-2438931 ನ್ನು ಸಂಪರ್ಕಿಸುವಂತೆ ಮೈಸೂ-ರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ಬೆಳಗಾವಿ,** ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ನೆಹರು ನಗರ ಮತ್ತು ಉಪಕೇಂದ್ರಗಳಲ್ಲಿ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಇಂಡಸ್ಟ್ರೀಯಲ್ ಎರಿಯಾ ಮತ್ತು ವೈಭವ ನಗರ, ನ್ಯೂ ವೈಭವ ನಗರ, ವಿದ್ಯಾಗಿರಿ, ಅನ್ನಪೂರ್ಣವಾಡಿ, ಬಸವ ಕಾಲನಿ, ಆಜಂನಗರ, ಸಂಗಮೇಶ್ವರ ನಗರ, ಕೆಎಲ ಇ ಎರಿಯಾ, ಶಾಹುನಗರ, ವಿನಾಯಕ ನಗರ, ಜ್ಯೋತಿನಗರ, ಸಂಗಮೇಶ್ವರ ನಗರ, ಎಪಿಎಂಸಿ, ಉಷಾ ಕಾಲನಿ, ಸಿದ್ದೇಶ್ವರ ನಗರ, ಬಾಕ್ಸೈಟ-ರೋಡ, ಇಂಡಾಲ ಎರಿಯಾ ಸಿವಿಲ್ ಹಾಸ್ಪಿಟಲ ಎರಿಯಾ, ಅಂಬೇಡ್ಕರ ನಗರ, ಚೆನ್ನಮ್ಮಾ ಸರ್ಕಲ, ಕಾಲೇಜರೋಡ, ಡಿಸ್ಟ್ರಿಕ್ಟ ಕೋರ್ಟ, ಡಿಸಿ ಕಂಪೌಂಡಎರಿಯಾ, ಸಿಟಿ ಪೋಲಿಸ ಲೈನ, ಕಾಕತಿವೇಸ, ಕಾಳೀ ಅಂಬ್ರಾಯಿ, ಕ್ಲಬ್‌ರೋಡ, ಶಿವ ಬಸವ ನಗರ, ರಾಮನಗರ, ಗ್ಯಾಂಗವಾಡಿ, ಅಯೋಧ್ಯಾನಗರ, ಕೆಎಲ್ ಇ ಕಾಂಪ್ಲೇಕ್ಷ, ಕೆಇಬಿ ಕ್ವಾಟರ್ಸ, ಸುಭಾಶ ನಗರ, ಕಾರ್ಪೋರೇಶನಆಫೀಸ್, ಪೋಲೀಸ್‌ಕಮೀಶನರ್‌ಆಫೀಸ್.ಪೋಲಿಸ್ ಕ್ವಾಟರ್ಸ, ಶಿವಾಜಿನಗರ, ವೀರಭದ್ರ ನಗರ,ಆರ್.ಟಿ.ಓವೃತ್ತ, ತ್ರೀವಣಿ ರೇಲ ನಗರ, ಸಂಪಿಗೆ ರೋಡ, ಅಂಬೇಡ್ಕರ ನಗರ, ಸದಾಶಿವನಗರ,ವಿಶ್ವೇಶ್ವರಯ್ಯಾ ನಗರ ,ಕ್ಲಬ್‌ರೋಡ, ಟಿವಿ ಸೆಂಟರ, ಪಿ & ಟಿ ಕಾಲನಿ(ಹನುಮಾನ ನಗರ), ಮುರಳಿಧರ ಕಾಲನಿ, ಜಿನಾಬಕುಲ ಏರಿಯಾ ರೋಹನ್ ರೆಸಿಡೆನ್ಸಿ, ಆದಿತ್ಯಆರ್ಕೆಡ್‌ಕೊಲ್ಲಾಪೂರ ಸರ್ಕಲ್ ಸಿವಲ್ ರಸ್ತೆ, ಸುಭಾಸ್‌ನಗರ, ರಾಮದೇವ ಎರಿಯಾ, ಎ.ಪಿ. ಆಫೀಸ್‌ರಸ್ತೆ, ಹನುಮಾನ ಮಂದಿರ ನೆಹರು ನಗರ ಎರಿಯಾ, ವಿಶ್ವೇಶ್ವರಯ್ಯ ನಗರ ಹನುಮಾನ ನಗರ, ರೇಲ್ ನಗರ ಸದಾಶಿವ ನಗರ, 33 ಕೆವಿ ಕೆ.ಎಲ್.ಇ ಹೆಚ್.ಟಿ ಸ್ಥಾವರ, ಇ ಹೆಚ್.ಟಿ **ಸ್ಥಾವರ.**

ಕ.ವಿ.ಪ್ರ.ನಿ.ನಿ. ವತಿಯಿಂದ 33/11 ಕೆವ್ಹಿ ಸದಾಶಿವ ನಗರ, ಉಪಕೇಂದ್ರದಲ್ಲಿ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಕುಮಾರ ಸ್ವಾಮಿ ಲೇಔಟ, ವಿದ್ಯಾಗಿರಿ, ಸಾರಥಿನಗರ, ಹನುಮಾನನಗರ, ಸ್ಟೇಜ 1,2,3,4, ಕುವೆಂಪು ನಗರ,ಮಾಡರ್ನ ಕೋ ಆಪರೇಟಿವ್ ಹೌಸಿಂಗ ಸೊಸೈಟಿ(ಬಸವೇಶ್ವರ ನಗರ) ಟಿವಿ ಸೆಂಟರ, ಬಾಕ್ಸೈಟರೋಡ, ಕುಮಾರಸ್ವಾಮಿಲೇಔಟ್, ಸಹ್ಯಾದ್ರಿನಗರ, ಸ್ಕೀಮ ನಂ47, ಸ್ಕಿಮ ನಂ 51 ಬುಡಾ, ಕುವೆಂಪುನಗರ,-ಜಯನಗರ, ವಿಜಯನಗರ, ಪೈಪ ಲೈನ ರೋಡ, ಸೈನಿಕ ನಗರ, ಲಕ್ಷ್ಮಿಟೇಕ ನೀರು ಸರಬರಾಜು,ವಿನಾಯಕ ನಗರ, ಹಿಂಡಲಗಾಗಣಪತಿದೇವಸ್ಥಾನ, ಮಹಾಬಲೇಶ್ವರ ನಗರ. ಕ.ವಿ.ಪ್ರ.ನಿ.ನಿ. ವತಿಯಿಂದ 33/11ಕೆವ್ಹಿ ಜಿ.ಆಯ್. ಎಸ್ ಶ್ರೀನಗರ, ಉಪಕೇಂದ್ರದಲ್ಲಿ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಚನ್ನಮ್ಮಾ ಸೋಸೈಟಿ, ಶ್ರೀನಗರ ಏರಿಯಾ. ಆಂಜನೇಯ ನಗರಏ-ರಿಯಾ, ಮಾಹಾಂತೇಶ ನಗರ, ಶಕ್ಟರ ನಂ 8,9,10,11,ಮತ್ತು 12, ರುಕ್ಮಿನಿ ನಗರ, ಆಶ್ರಯ ಕಾಲನಿ, ಶಿವತೀರ್ಥ ಕಾಲನಿ, ಬೃಂದಾವನ ಕಾಲನಿ, ರಾಮತೀರ್ಥ ನಗರ, ಕಣಬರ್ಗಿರೋಡ ಸೈಟ್‌ಏರಿಯಾ, ಕೆಎಮ್‌ಎಫ್‌ಡೈರಿಏರಿಯಾ, ಶಿವಬಸವ ನಗರ ಭಾಗಶಃ, ಎಸ ಬಿ ಆಯ್ ಯಿಂದಧರ್ಮನಾಥ ಭವನ, ಅಶೋಕ ನಗರ,ಕಾನ್ಸರ ಹಾಸ್ಪಿಟಲ್, ಹಾಗೂ ಇಎಸ ಆಯ ಹಾಸ್ಪಿಟಲ್, ವೀರಭದ್ರ ನಗರ, ಶಿವಾಜಿ ನಗರ. ಕೆ-ಎಸ ಆರಟಿಸಿ, ಅಸಾದ್ಯಖಾನ ಸೋಸೈಟಿಕ್ರಸ್ ದಿಂದ 8ನೇ ಕ್ರಾಸ್ ವರೆಗೆ ಮತ್ತು ಬುಡಾಕಛೇರಿಯ ಸುತ್ತ ಮುತ್ತಲಿನ ಪ್ರದೇಶಗಳು, ರಿಸರ್ಚ್ ಸೆಂಟರ್, ಚನ್ನಮ್ಮ ಸರ್ಕಲ್, ಕಾಲೇಜುರೋಡಕಾಕತಿ ವೇಜ್, ಕ್ಲಬ್‌ರಸ್ತೆ, ಡಿ.ಸಿ ಆಫೀಸ್, ಕೋರ್ಟ್‌ಕಂಪೌಂಡ, ಜಿ ಪಂಚಾಯತಆವರಣ, ಆದರ್ಶ ಪ್ಯಾಲಿಸ್ ಸುತ್ತ ಮುತ್ತಲಿನ ಪ್ರದೇಶಗಳು, ಕಾಳಿ ಅಮ್ರಾಯಿ ಸುತ್ತ ಮುತ್ತಲಿನ ಪ್ರದೇಶಗಳು,.

ಕ.ವಿ.ಪ್ರ.ನಿ.ನಿ. ವತಿಯಿಂದ 33/11ಕೆವ್ಹಿ ಪೋರ್ಟ, ಉಪಕೇಂದ್ರದಲ್ಲಿ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಆಝಾದ ನಗರ ಪ್ರದೇಶ, ಹಳೆ ಗಾಂಧಿ ನಗರ, ದೀಪಕ ಗಲ್ಲಿ, ಸಂಕಮ್ ಹೊಟೇಲ್, ಬಾಗಲಕೋಟರಸ್ತೆ, ಕಲ್ಮಠರಸ್ತೆ, ಹಳೆ ಪಿಬಿ ರಸ್ತೆ, ಫೂಲ್ಬಾಗ್‌ಗಲ್ಲಿ, ತಶೀಲ್ದಾರ ಗಲ್ಲಿ, ಬಾಂದೂರಗಲ್ಲಿ, ಪಾಟೀಲ ಗಲ್ಲಿ, ಬಸವನ ಕುಡಚಿದೇವರಾಜ ಪ್ರದೇಶ, ಐ.ಬಿ. ಶೇಂಟರ್, ಬಸ್ ಸ್ಟ್ಯಾಂಡ್, ಶೆಟ್ಟಿಗಲ್ಲಿ, ಚಾವಟ್‌ಗಲ್ಲಿ, ನಾನಾ ಪಾಟೀಲ್‌ಚೌಕ್, ದರಬಾರಗಲ್ಲಿ, ಜಾಲಗಾರಗಲ್ಲಿ, ಕಶಾಯಿ ಗಲ್ಲಿ, ಕೀರ್ತಿ ಹೊಟೇಲ್, ಅರಣ್ಯಕಛೇರಿ, ಆರ್.ಟಿ.ಓ.ಕಛೇರಿ, ಕೋತವಾಲ ಗಲ್ಲಿ, ಡಿ.ಸಿಸಿ ಬ್ಯಾಂಕ, ಖಡೆಬಝಾರ ಪ್ರದೇಶ, ಶೀತಲ್ ಹೊಟೇಲ ವರೆಗೆ. ಕಾಕತಿವೇಸ್, ಶನಿವಾರಕೂಟ್, ಕಡೆಬಜಾರ, ಸಮಾದೇವಗಲ್ಲಿ, ಗೋಂದಳಿ ಗಲ್ಲಿ, ನರವೇಕರಗಲ್ಲಿ, ಕಛೇರಿಗಲ್ಲಿ, ಉಜ್ವಲ್ ನಗರ, ಗಾಂದಿ ನಗರ, ಅಮನ್ ನಗರ, ಎಸ್.ಸಿ ಮೋಟೊರಸ ಪದೇಶ, ಮಾರಿತಿ ನಗರ, ದರಬಾರಗಲ್ಲಿ, ತೆಂಗಿನಕೇರಿಗಲ್ಲಿ, ಆಜಾದಗಲ್ಲಿ, ಪಾಂನಗೂಳ ಗಲ್ಲಿ, ಭುವಿ ಗಲ್ಲಿ,.

ಬೆಳಗಾವಿಯಲ್ಲಿ ನಡೆಯಲಿರುವ ಗಣೇಶೋತ್ಸವದ ಪ್ರಯುಕ್ತ ನಿರಂತರ ವಿದ್ಯತ್ ಸರಬರಾಜು ಮಾಡುವ ಸಲುವಾಗಿ ಸದರಿ ವಿದ್ಯುತ್ ಉಪಕೇಂದ್ರದಿಂದ ಹೊರಡುವ ಪೂರಕಗಳ ಮೇಲೆ ಬರುವ ನಗರದ ಹಲವಾರು ಪ್ರದೇಶಗಳಲ್ಲಿ ರವಿವಾರ (ಆ.24) ಮಧ್ಯಾಹ್ನ 12 ಗಂಟೆಯಿಂದ ಮಧ್ಯಾಹ್ನ 03 ಘಂಟೆಯ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಹು.ವಿ.ಸ.ಕಂ.ನಿ ಕಾ ಮತ್ತು ಪಾ ಗ್ರಾಮೀಣ ವಿಭಾಗ, ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮನುಷ್ಯನಿಗೆ ಒಳ್ಳೆಯ ನಡೆ-ನುಡಿ,ಆಚಾರ-ವಿಚಾರದಿಂದ ಬೆಲೆ ಬರುತ್ತದೆಃ ಡಾ.ಮುರುಘೇಂದ್ರ ಸ್ವಾಮೀಜಿ



**ಬಸವನಬಾಗೇವಾಡಿ,** ; ಮನುಷ್ಯನಲ್ಲಿ ನಡೆ-ನುಡಿ, ಆಚ-ಾರ-ವಿಚಾರ ಧರ್ಮದಿಂದ ಕೂಡಿದ್ದರೆ ಅಂತಹವರನ್ನು ಭಗವಂತನು ಇಷ್ಟ ಪಡುತ್ತಾನೆ. ಇದನ್ನು ವಿಶ್ವಗುರು ಬಸವೇಶ್ವರರು ನಿಷ್ಪತಿ ಎಂಬ ಹಣ್ಣು ಕಳಚಿ ಬೀಳುವಲ್ಲಿ ತನಗೆ ಬೇಕೆಂದು ಎತ್ತಿಕೊಂಡ ಎಂಬ ವಚನವೊಂದರಲ್ಲಿ ಹೇಳಿದ್ದಾರೆ ಎಂದು ಜಿಡಗಾ-ಮುಗಳಖೋಡ ಮಠದ ಡಾ.ಮುರುಘೇಂದ್ರ ಸ್ವಾಮೀಜಿ ಹೇಳಿದರು.

ಪಟ್ಟಣದ ಮಸಬಿನಾಳ ರಸ್ತೆಯ ಗಣೇಶ ನಗರದಲ್ಲಿರುವ ಯಲ್ಲಾಲಿಂಗ ಮಹಾರಾಜರ ಮಠದಲ್ಲಿ ಶ್ರಾವಣ ಮಾಸದ ಕೊನೆಯ ದಿನವಾದ ಶುಕ್ರವಾರ ಹಮ್ಮಿಕೊಂಡಿದ್ದ ದಿವ್ಯದರ್ಶನ ಹಾಗೂ ಶ್ರೀಗಳ ಪಾದಪೂಜೆ ಸಮಾರಂಭದ ಸಾನಿಧ್ಯ ವಹಿಸಿ ಸದ್ಭಕ್ತರ ಪಾದಪೂಜೆ ಸ್ವೀಕರಿಸಿ ಮಾತನಾಡಿದ ಅವರು, ಮನುಷ್ಯನಿಗೆ ಬಟ್ಟೆ, ಆಭರಣಗಳಿಂದ ಬೆಲೆ ಬರುವುದಿಲ್ಲ. ಮನುಷ್ಯನಿಗೆ ಒಳ್ಳೆಯ ನಡತೆ,ಒಳ್ಳೆಯ ಗುಣ, ಒಳ್ಳೆಯ ಆಚ-ಾರ-ವಿಚಾರ, ಶ್ರೇಷ್ಠ ಭಕ್ತಿಯಿದ್ದರೆ ಮಾತ್ರ ಬೆಲೆ ಬರುತ್ತದೆ ಎಂಬುವದನ್ನು ಅರಿತುಕೊಳ್ಳಬೇಕಿದೆ ಎಂದರು.

ರಾಜ್ಯದಲ್ಲಿರುವ ನಮ್ಮ ಶ್ರೀಮಠದ ಎಲ್ಲ ಶಾಖಾಮಠದಲ್ಲಿ ಪಾದಪೂಜೆ ನೆರವೇರುತ್ತವೆ. ಶ್ರಾವಣ ಮಾಸದ ಕೊನೆಯ ದಿನ ಮುಗಳಖೋಡ ಮಠದಲ್ಲಿ ಪಾದಪೂಜೆ ನೆರವೇರುತ್ತಿತ್ತು. ಆದರೆ ಈ ವರ್ಷದ ಪಾದಪೂಜೆ ಬಸವನಬಾಗೇವಾಡಿಯ ಮಠದಲ್ಲಿ ನೆರವೇರುತ್ತಿದೆ. ನಮ್ಮ ಶ್ರೀಮಠದ 360 ಮಠಗಳಲ್ಲಿ ಬಸವನಬಾಗೇವಾಡಿಯ ಮಠವು ಖ್ಯಾತಿ ಪಡೆಯುತ್ತಿದೆ. ಈ ಮಠದ ಮಹಾರಾಜರು ಎರಡನೇ ಆನಂದ ಮಹಾರಾಜರಾಗಿದ್ದಾರೆ. ಈ ಮಹಾರಾಜರು ಯಾ-ರಿಗೂ ನೋವು ಆಗದಂತೆ ತಮ್ಮ ಬದುಕು ಸಾಗಿಸುತ್ತಿದ್ದಾರೆ. ಈ ಮಠವು ಕೀರ್ತಿವಂತ ಮಠವಾಗಲೆಂದು ಆಶಯ ವ್ಯಕ್ತಪಡಿಸಿದ ಅವರು, ನಾವೆಲ್ಲರೂ ಶ್ರದ್ಧಾ ಭಕ್ತಿಯಿಂದ ಆಚ-ರಿಸುವ ಶ್ರಾವಣ ಮಾಸದ ಪುಣ್ಯ ಎಲ್ಲರಿಗೂ ಪ್ರಾಪ್ತಿಯಾಗಿ ಗುರುಗಳು ಎಲ್ಲರಿಗೂ ಆಯುರಾರೋಗ್ಯ ಕರುಣಿಸಲೆಂದರು.

ಸ್ಥಳೀಯ ಯಲ್ಲಾಲಿಂಗ ಶಾಖಾಮಠದ ಬಸವರಾಜ ಮಹಾರಾಜರು ಡಾ.ಮರುಘೇಂದ್ರ ಸ್ವಾಮೀಜಿಯವರ ಪಾದಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ರವಿ ಪಡಶೆಟ್ಟಿ, ಸಂಗನಗೌಡ ಚಿಕ್ಕೊಂಡ,ಗಿರೀಶ ಹಾರಿವಾಳ, ವಿವೇಕಾನಂದ ಕಲ್ಯಾಣಶೆಟ್ಟಿ, ಮಲ್ಲಪ್ಪ ಮಾದನಶೆಟ್ಟಿ, ಶಿವಲಿಂಗಯ್ಯ ತೆಗ್ಗಿನಮಠ, ಜಗದೀಶ ಕೊಟ್ರಶೆಟ್ಟಿ, ಸಂಗನಬಸು ಪೂಜಾ-ರಿ,ಎಚ್.ಬಿ.ಬಾರಿಕಾಯಿ, ಅಶೋಕ ಗುಳೇದ ಸೇರಿದಂತೆ ನೂರಾರು ಸದ್ಭಕ್ತರು ಶ್ರೀಗಳಿಗೆ ಭಕ್ತಿಗೌರವ ಅರ್ಪಿಸಿದರು.

## ಆ.25 ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್ವ್ಯೂವ

**ಕೊಪ್ಪಳ** : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ವಾಕ್ ಇನ್ ಇಂಟರ್ವ್ಯೂವನ್ನು ಆ. 25 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್ವ್ಯೂವದಲ್ಲಿ ಖಾಸಗಿ ಸಂಸ್ಥೆಗಳು ತಮ್ಮಲ್ಲಿನ ಖಾಲಿ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಅಥವಾ ಯಾವುದೇ ಪದವಿ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

ಈ ವಾಕ್ ಇನ್ ಇಂಟರ್ವ್ಯೂವದಲ್ಲಿ ಭಾಗವಹಿಸುವ ಆಸಕ್ತಿಯುಳ್ಳ 18 ರಿಂದ 35 ವರ್ಷದ ವರೆಗಿನ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 3 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜುಮ್) ಹಾಗೂ 2 ಪಾಸ್ ಪೋರ್ಟ ಅಳತೆಯ ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್ವ್ಯೂವಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ಕೊಪ್ಪಳ** ಕೊಪ್ಪಳ 110 ಕೆವಿ ಸಬ್ ಸ್ಟೇಷನ್ ನಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ನಡೆಯುವ ಪ್ರಯುಕ್ತ ಆಗಸ್ಟ್ 24 ರಂದು 110 ಕೆ.ವಿ ಕೊಪ್ಪಳ ಸ್ಟೇಷನ್‌ಗೆ ಒಳಪಡುವ ವಿವಿಧ ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆ.

110 ಕೆ.ವಿ ಕೊಪ್ಪಳ ಸ್ಟೇಷನ್‌ಗೆ ಒಳಪಡುವ ಎಫ್-3 ಎಸ್.ಜಿ ಕಾಲೇಜ್, ಎಫ್-8 ಭಾಗ್ಯನಗರ, ಎಫ್-9 ಬನ್ನಿಕಟ್ಟಿ, ಎಫ್-10 ಗವಿಮಠ, ಎಫ್-11 ಡಿ.ಸಿ.ಆಫೀಸ್, ಎಫ್-12 ತಾಲೂಕ ಪಂಚಾಯತ, ಎಫ್-14 ಜಾತ್ರಾ ಫೀಡರ್, ಎಫ್-2 ಕೆ.ಡಬ್ಲ್ಯೂ.ಎಸ್., ಎಫ್-1 ಕಾಮನೂರ, ಎಫ್-6 ಬಸಾಪೂರ, ಎಫ್-5 ಬಗನಾಳ ಹಾಗೂ 33ಕೆ.ವಿ ಕಿನ್ನಾಳ ಸ್ಟೇಷನ್‌ಗೆ ಒಳಪಡುವ ಈ ಎಲ್ಲಾ ಮಾರ್ಗದ 11 ಕೆವಿ ಮತ್ತು 33 ಕೆವಿ ಮಾರ್ಗಗಳಲ್ಲಿ ಆ. 24ರ ರವಿವಾರ ಬೆಳಿಗ್ಗೆ 9 ರಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು.

ವಿದ್ಯುತ್ ನಿರ್ವಹಣಾ ಕೆಲಸವು ಬೇಗನೆ ಮುಕ್ತಾಯಗೊಂಡಲ್ಲಿ, ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕೆಲಸ-ಕಾರ್ಯಗಳನ್ನು ಮಾಡಬಾರದೆಂದು ಈ ಮೂಲಕ ಕೋರಲಾಗಿದೆ. ಒಂದು ವೇಳೆ ವಿದ್ಯುತ್ ಅಘಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರರಾಗಿರುವುದಿಲ್ಲ ಎಂದು ಜೆಸ್ಕಾಂ ಕೊಪ್ಪಳ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

